ಸಂಪುಟ: 05 ಸಂಚಿಕೆ: 07 ಪುಟಗಳು: 08 ಶುಕ್ರವಾರ 21 ಮಾರ್ಚ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ವಿನ್ಯಾಸಗಾರರು ಬೇಕಾಗಿದ್ದಾರೆ

ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಛಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.

ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9448225696

ಉದಯ ವಾಹಿನಿ
#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com

ವಿದ್ಯುತ್ ದರ ಜನರ ಜೇಬಿಗೆ ಭಾರ!

■ ಹೇಳೋರಿಲ್ಲ , ಕೇಳೋರಿಲ್ಲ...! ■ ರಾಜ್ಯದ ಜನತೆಗೆ ಮತ್ತೆ ಕರೆಂಟ್ ಶಾಕ್, ಏ.1ರಿಂದ ಪ್ರತಿ ಯುನಿಟ್ ಮೇಲೆ 36 ಪೈಸೆ ದರ ಚಾರ್ಜ್! ■ ಎಸ್ಕಾಂ ಪಿಂಚಣಿ ಹಣ ಹೊಂದಿಸಲು ಜನರ ಜೇಬಿಗೆ ಕತ್ತರಿ ■ ಯೂನಿಟ್‌ಗೆ 36 ಪೈಸೆಯಂತೆ ಹೆಚ್ಚಿಸಿ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಆದೇಶ ■ ದುಬಾರಿ ಜೀವನದಿಂದ ತತ್ತರಿಸುತ್ತಿರುವ ಜನ

ವಿದ್ಯುತ್ ದರ ದುಬಾರಿ

1 ಕರ್ನಾಟಕದಲ್ಲಿ ವಿದ್ಯುತ್ ದರ ಹೆಚ್ಚಳ
2 ಪ್ರತಿ ಯೂನಿಟ್ ಗೆ 36 ಪೈಸೆ ಜಾಸ್ತಿ.
3 ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಪ್ರಾಧಿಕಾರದಿಂದ ಆದೇಶ.

•ಉದಯವಾಹಿನಿ, ಬೆಂಗಳೂರು

ಈಗಾಗಲೇ ಎಲ್ಲ ಅಗತ್ಯ ವಸ್ತುಗಳ ಮತ್ತು ಸೇವೆಗಳ ಬೆಲೆ ಏರಿಕೆಯಿಂದ ಕಂಗಾಲಾಗಿರುವ ರಾಜ್ಯದ ಜನರಿಗೆ ಸರಕಾರ ಮತ್ತೆ ವಿದ್ಯುತ್ ದರ ಏರಿಕೆಯ ಶಾಕ್ ಕೊಟ್ಟಿದೆ. ಎಸ್ಕಾಂಗಳ ಪಿಂಚಣಿ ಹಣ ಹೊಂದಿಸಲು ಜನರ ಜೇಬಿಗೆ ಸರ್ಕಾರ ಕತ್ತರಿ ಹಾಕಿದೆ. ಸಿಬ್ಬಂದಿಯ ಪಿಂಚಣಿ ದುಡ್ಡಿಗಾಗಿ ಪ್ರತಿ ಯೂನಿಟ್‌ಗೆ 36 ಪೈಸೆಯಂತೆ ದರವನ್ನು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಏಇಖಿಐ) ಏರಿಕೆ ಮಾಡಿದೆ.ಇಂಧನ ಪೂರೈಕೆ ಕಂಪನಿಗಳಿಗೆ (ಎಸ್ಕಾಂಗಳು) ಬುಧವಾರವೇ ಕೆಇಆರ್‌ಸಿ ಗ್ರಾಹಕರಿಂದ ಸರ್ಕಾರದ ಪಿಂಚಣಿ ಮತ್ತು ಗ್ರಾಚ್ಯುಟಿ ಕೊಡುಗೆಗಳ ಪಾಲನ್ನು ವಸೂಲಿ ಮಾಡಲು ಅವಕಾಶ ನೀಡಿ ಆದೇಶ ಪ್ರಕಟಿಸಿದೆ. ರಾಜ್ಯದ ಜನರು ಏಪ್ರಿಲ್ 1 ರಿಂದ 2025-26ರ ಆರ್ಥಿಕ ವರ್ಷಕ್ಕೆ ಸರ್ಕಾರಿ ನೌಕರರ ಪಿಂಚಣಿ ಮತ್ತು ಗ್ರಾಚ್ಯುಟಿಗೆ ತಮ್ಮ ಬಿಲ್‌ಗಳಲ್ಲಿ ಹೆಚ್ಚುವರಿ ಸರ್‌ಚಾರ್ಜ್ ಆಗಿ ಪ್ರತಿ ಯೂನಿಟ್‌ಗೆ 36 ಪೈಸೆಗಳನ್ನು ಪಾವತಿಸಬೇಕಾಗುತ್ತದೆ. ಗೃಹಜ್ಯೋತಿ ನಡುವೆಯೂ ಈಗಾಗಲೇ ವಿದ್ಯುತ್ ದರ ಏರಿಕೆಯ ಬಿಸಿಯಲ್ಲಿರುವ ಗ್ರಾಹಕರಿಗೆ ಇದು ಮತ್ತೊಂದು ಬರೆಯಾಗಿದೆ. ಇದರ ಇದು ಪಿಂಚಣಿ ಹಾಗೂ ಗ್ರ್ಯಾಚುಟಿಯಾಗಿ ಜನರಿಂದ ಪಡೆಯುತ್ತಿರುವ ಸರ್‌ಚಾರ್ಜ್ ಆಗಿದ್ದು, ಏಪ್ರಿಲ್ ವೇಳೆಗೆ ವಿದ್ಯುತ್‌ನ ಪ್ರತಿ ಯುನಿಟ್ ದರವೂ ಏರಿಕೆ ಆಗಲಿರುವ ಕಾರಣ ಜನರು ವಿದ್ಯುತ್ ದರದ ಡಬಲ್ ಏರಿಕೆ ಬಿಸಿ ಎದುರಿಸಲಿದ್ದಾರೆ. ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆಇಆರ್‌ಸಿ) ಬುಧವಾರ ಇಂಧನ ಪೂರೈಕೆ ಕಂಪನಿಗಳು (ಎಸ್ಕಾಮ್ಸ್) ಗ್ರಾಹಕರಿಂದ ಸರ್ಕಾರದ ಪಿಂಚಣಿ ಮತ್ತು ಗ್ರಾಚ್ಯುಟಿ (ಪಿ ಜಿ) ಕೊಡುಗೆಗಳ ಪಾಲನ್ನು ವಸೂಲಿ ಮಾಡಲು ಅವಕಾಶ ನೀಡಿ ಆದೇಶ ಹೊರಡಿಸಿದೆ. ಈ ವರ್ಷಕ್ಕೆ ಮಾತ್ರವಲ್ಲದೆ, 2026-27 ಮತ್ತು 2027-28ರ ಆರ್ಥಿಕ ವರ್ಷಕ್ಕೂ ಪಿಂಚಣಿ ಮತ್ತು ಗ್ರಾಚ್ಯುಟಿ (ಕಉ) ಕೊಡುಗೆಗಳನ್ನು ಪರಿಷ್ಕರಣೆ ಮಾಡಲಾಗಿದೆ. ಮುಂದಿನ ವರ್ಷಗಳಿಗೆ ಗ್ರಾಹಕರು ಕ್ರಮವಾಗಿ 35 ಪೈಸೆ ಮತ್ತು 34 ಪೈಸೆ ಪಾವತಿಸುತ್ತಾರೆ. ಹೆಚ್ಚುವರಿಯಾಗಿ 36 ಪೈಸೆ ಪಾವತಿಸಿದರೆ ಶೇ. 9ರಷ್ಟು ವಿದ್ಯುತ್ ತೆರಿಗೆ ಬೀಳಲಿದೆ ಎಂದು ತಜ್ಞರು ಹೇಳಿದ್ದಾರೆ. 5ಕಿಲೋವ್ಯಾಟ್ ಸ್ಥಿರ ಶುಲ್ಕದೊಂದಿಗೆ 250 ಯೂನಿಟ್‌ಗಳನ್ನು ಬಳಸುವ ಗ್ರಾಹಕರು, ತಿಂಗಳಿಗೆ ವಿದ್ಯುತ್ ಬಿಲ್ ಆಗಿ 2,207.75 ರೂ. ಗಳನ್ನು ಪಾವತಿಸುತ್ತಿದ್ದರು, ಈಗ ಅವರು 2,305.85 ರೂ. ಗಳನ್ನು ಪಾವತಿಸಬೇಕಾಗುತ್ತದೆ. ಇದರಲ್ಲಿ ಇಂಧನ ಹೊಂದಾಣಿಕೆ ಶುಲ್ಕಗಳು ಸೇರಿವೆ. ಗೃಹ ಜ್ಯೋತಿ ಗ್ರಾಹಕರ ವಿಷಯದಲ್ಲಿ, ಈ ಹೆಚ್ಚುವರಿ ಆರ್ಥಿಕ ಹೊರೆಯನ್ನು ಸರ್ಕಾರಕ್ಕೆ ಮಾಸಿಕ ಸಬ್ಸಿಡಿ ಮೊತ್ತವನ್ನು CTALJT ಗೆ ಪಾವತಿಸಲು ವರ್ಗಾಯಿಸಲಾಗುತ್ತದೆ ಎಂದು ಇಂಧನ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ 36 ಪೈಸೆ ಗ್ರಾಹಕರ ಮೇಲೆ ಹೆಚ್ಚುವರಿ ಹೊರೆಯಾಗಿದೆ ಎಂದು ಎಫ್‌ಕೆಸಿಸಿಐನ ಇಂಧನ ಸಮಿತಿಯ ಸಲಹೆಗಾರ ಎಂ.ಜಿ. ಪ್ರಭಾಕರ್ ಹೇಳಿದ್ದಾರೆ. ಈ 36 ಪೈಸೆಯಿಂದ ಶೇ. 9 ರಷ್ಟು ವಿದ್ಯುತ್ ತೆರಿಗೆಯೂ ಬರುತ್ತದೆ. ಇದು ಗ್ರಾಹಕರ ಮೇಲೆ ಹೆಚ್ಚುವರಿ ಹೊರೆಯಾಗಿದೆ. ಅಲ್ಲದೆ, ಮುಂದಿನ ಮೂರು ವರ್ಷಗಳವರೆಗೆ, ಗ್ರಾಹಕರು ವಿದ್ಯುತ್ ಬಳಕೆ ಶುಲ್ಕಗಳ ಜೊತೆಗೆ ಬಾಕಿ ಬಾಕಿ ಮತ್ತು ಹೆಚ್ಚುವರಿ ಪಿ ಜಿ ಕೊಡುಗೆಗಳನ್ನು ಪಾವತಿಸಬೇಕಾಗುತ್ತದೆ. ಇನ್ನು ಮುಂದೆ ಪಿ ಜಿ ಶುಲ್ಕಗಳು ವಿದ್ಯುತ್ ಬಿಲ್‌ಗಳ ಭಾಗವಾಗಿರುತ್ತವೆ ಎಂದು ಕೆಇಆರ್‌ಸಿ ಅಧ್ಯಕ್ಷ ಪಿ ರವಿ ಕುಮಾರ್ ಹೇಳಿದ್ದಾರೆ. ಈ 36 ಪೈಸೆ ಸರ್‌ಚಾರ್ಜ್ ಮುಂದೆ ಘೋಷಿಸಲಿರುವ ವಿದ್ಯುತ್ ಸುಂಕ ಪರಿಷ್ಕರಣೆಗಿಂತ ಭಿನ್ನವಾಗಿದೆ. ಈ ನಿಟ್ಟಿನಲ್ಲಿ ಕೆಇಆರ್‌ಸಿ ಕರ್ನಾಟಕ ಹೈಕೋರ್ಟ್‌ನ ಆದೇಶವನ್ನು ಅನುಸರಿಸಿದೆ. ಎಫ್‌ಕೆಸಿಸಿಐ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ ನ್ಯಾಯಾಲಯವು ಮಾರ್ಚ್ 25, 2023 ರಂದು ಆದೇಶ ಹೊರಡಿಸಿ, ಕೆಇಆರ್‌ಸಿಯನ್ನು ಗ್ರಾಹಕ ಸುಂಕದಲ್ಲಿ ಸೇರಿಸಲು ಕ್ರಮಗಳನ್ನು ತೆಗೆದುಕೊಳ್ಳುವಂತೆ ಆದೇಶಿಸಿತು.

ಜನರಿಗೆ ಹೊರೆಯಾಗಲ್ಲ

ಯೂನಿಟ್ ಗೆ ಕೇವಲ 36 ಪೈಸೆ ಹೆಚ್ಚಿಸುವುದರಿಂದ ಕಡಿಮೆ ವಿದ್ಯುತ್ ಬಳಸುವ ಕುಟುಂಬಗಳಿಗೆ ಯಾವುದೇ ಸಮಸ್ಯೆಯಾಗಲ್ಲ ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಅಭಿಪ್ರಾಯಪಟ್ಟಿದ್ದಾರೆ. ಯೂನಿಟ್ ಗೆ 36 ಪೈಸೆಯಷ್ಟು ಏರಿಕೆಯಾದರೂ ಶ್ರೀಮಂತರಿಗೆ ಅದು ಸಮಸ್ಯೆಯಾಗುತ್ತದೆ. ಹೇಗೆಂದರೆ, ಅವರ ವಿದ್ಯುತ್ ಬಳಕೆ ಜಾಸ್ತಿ ಇರುತ್ತದೆ. ಬಿಜೆಪಿಗರು ಶ್ರೀಮಂತರ ಪರವಾಗಿ ಮಾತನಾಡುತ್ತಿದ್ದಾರೆ'' ಎಂದು ಬಿಜೆಪಿಗೆ ತಿರುಗೇಟು ನೀಡಿದ್ದಾರೆ. ಅಲ್ಲದೆ, ಗೃಹಜ್ಯೋತಿ ಯೋಜನೆಯ ಸವಲತ್ತುಗಳಲ್ಲಿ ಯಾವುದೇ ಕೊರತೆಯಾಗಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದಾರೆ.

ಕೊಡುಗೆಯನ್ನು ಗ್ರಾಹಕರಿಂದ ಸಂಗ್ರಹಿಸಬೇಕು

ಸಂಗ್ರಹಿಸಿದ ಮೊತ್ತದ ಮೂರನೇ ಒಂದು ಭಾಗವನ್ನು ಕಉ ಗೆ ಕೊಡುಗೆ ನೀಡಲು ಮತ್ತು ಹಂಚಿಕೊಳ್ಳಲು ಅವರು ಒಪ್ಪಿಕೊಂಡಿದೆ. 2022ರ ಜನವರಿ 1 ರಂದು, ಸರ್ಕಾರವು ವಿದ್ಯುತ್ ವಲಯದ ನಿರ್ವಹಣೆಗೆ ತನ್ನ ಮೂರನೇ ಒಂದು ಭಾಗದಷ್ಟು ಕೊಡುಗೆಯನ್ನು ಗ್ರಾಹಕರಿಂದ ಸಂಗ್ರಹಿಸಬೇಕು ಎಂದು ನಿರ್ದೇಶನವನ್ನು ಹೊರಡಿಸಿತು. 2023 ರಲ್ಲಿ, ಸರ್ಕಾರವು 2002 ರ ಕರ್ನಾಟಕ ವಿದ್ಯುತ್ ಸುಧಾರಣೆಗಳು (ಕೆಪಿಟಿಸಿಎಲ್ ಮತ್ತು ಅದರ ಸಿಬ್ಬಂದಿಯ ಉದ್ಯಮಗಳ ವರ್ಗಾವಣೆ ವಿದ್ಯುತ್ ವಿತರಣೆ ಮತ್ತು ಚಿಲ್ಲರೆ ಸರಬರಾಜು ಕಂಪನಿಗಳಿಗೆ) ನಿಯಮಗಳನ್ನು ತಿದ್ದುಪಡಿ ಮಾಡಿತು. ಇದರ ನಂತರ, ಕೆಪಿಟಿಸಿಎಲ್ ಕೆಇಆರ್‌ಸಿಗೆ ಆರು ವರ್ಷಗಳ ಬಾಕಿ ಮೊತ್ತ 4,659.34 ಕೋಟಿ ರೂ.ಗಳೆಂದು ತಿಳಿಸಿದೆ. ಕೆಇಆರ್‌ಸಿ 2025-26ನೇ ಸಾಲಿಗೆ ಗ್ರಾಹಕರಿಂದ 2,812.83 ಕೋಟಿ ರೂ., 2026-27 ಮತ್ತು 2027-28ನೇ ಸಾಲಿಗೆ ಕ್ರಮವಾಗಿ 2,845.75 ಕೋಟಿ ರೂ. ಮತ್ತು 2,860.97 ಕೋಟಿ ರೂ.ಗಳನ್ನು ಸಂಗ್ರಹಿಸಲು ಆದೇಶ ಹೊರಡಿಸಿದೆ.

ಜನರಿಂದ ವಸೂಲಿ

ಮತ್ತೊಂದೆಡೆ, ಮಾಧ್ಯಮಗಳ ಮುಂದೆ ಮಾತನಾಡಿದ ಕಾರ್ಕಳದ ಬಿಜೆಪಿ ಶಾಸಕ ಸುನೀಲ್ ಕುಮಾರ್, ''ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಪ್ರಾಧಿಕಾರ (ಕೆಇಆರ್ ಸಿ) ತನ್ನ ಸಿಬ್ಬಂದಿಯ ಪಿಂಚಣಿ ಹಾಗೂ ಗ್ರಾಚ್ಯುಟಿ ಹಣವನ್ನು ತಾನು ಕೊಡಬೇಕು. ಅದು ಆ ಸಂಸ್ಥೆಯ ಜವಾಬ್ದಾರಿ ಕೂಡ. ಆದರೆ, ಆ ಹಣವನ್ನು ಜನರ ಮೇಲೆ ಹಾಕಿ ಜನರಿಂದ ವಸೂಲಿ ಮಾಡಲು ಮುಂದಾಗಿದೆ. ಇದು ನಿಜಕ್ಕೂ ಬೇಸರದ ಸಂಗತಿ'' ಎಂದು ಹೇಳಿದರು.

ಬಿಜೆಪಿ ನಾಯಕರು ಕಿಡಿ

ವಿದ್ಯುತ್ ದರ ಹೆಚ್ಚಳ ನಿರ್ಧಾರಕ್ಕೆ ಕಿಡಿಕಾರಿರುವ ಬಿಜೆಪಿ ನಾಯಕರು, ಇದು ನಿಜಕ್ಕೂ ಜನರ ಮೇಲೆ ಹಾಕಲಾಗಿರುವ ಬರೆ ಎಂದು ಬಣ್ಣಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಆಡಳಿತ ನಡೆಸಲು ಹಣವೇ ಇಲ್ಲದಂತಾಗಿದೆ. ಒಂದು ಕಡೆ ಗೃಹಜ್ಯೋತಿ ಅಡಿಯಲ್ಲಿ ಉಚಿತ ವಿದ್ಯುತ್ ಹಂಚಿ ಅದರಿಂದಾದ ನಷ್ಟವನ್ನು ಜನರಿಂದಲೇ ಕಿತ್ತುಕೊಳ್ಳುತ್ತಿದ್ದಾರೆ. ಮತ್ತೊದೆಡೆ, ಪಿಡಬ್ಲ್ಯೂಡಿ ಇಲಾಖೆಯು 8 ಕೋಟಿ ರೂ. ಬಿಲ್ ಬಾಕಿ ಉಳಿಸಿಕೊಂಡಿದೆ. ಇತರೆ ಇಲಾಖೆಗಳೂ ಬಿಲ್ ಗಳನ್ನು ಬಾಕಿ ಉಳಿಸಿಕೊಂಡಿವೆ. ಇದು ಸರ್ಕಾರ ನಷ್ಟ ಅನುಭವಿಸುತ್ತಿರುವುದಕ್ಕೆ ಸಾಕ್ಷಿಯಾಗಿದ್ದು ಈ ಬಗ್ಗೆ ಸದನದಲ್ಲಿ ನಾವು ಚರ್ಚೆ ನಡೆಸಲಿದ್ದೇವೆ ಎಂದು ಹೇಳಿದ್ದಾರೆ.

ಜನರು ಪರಿತಪಿಸುತ್ತಿದ್ದಾರೆ

ಶಾಸಕ ಅರವಿಂದ್ ಬೆಲ್ಲದ್ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಗ್ಯಾರಂಟಿಗಳಿಂದಾಗಿ ಜನರು ಕಷ್ಟದ ಜೀವನ ನಡೆಸುವಂತಾಗಿದೆ. ಗ್ಯಾರಂಟಿಗಳಿಗೆ ಸೋರಿ ಹೋದ ಹಣವನ್ನು ತುಂಬಿಸಲು ಹಾಲು, ನೀರು ಸೇರಿದಂತೆ ಹಲವಾರು ಅತ್ಯಗತ್ಯ ವಸ್ತುಗಳ ದರವನ್ನು ಹೆಚ್ಚಿಸಲಾಗಿದೆ. ಈಗ ವಿದ್ಯುತ್ ದರವನ್ನೂ ಹೆಚ್ಚಿಸಲಾಗಿದೆ. ಇದರಿಂದ ರಾಜ್ಯದಲ್ಲಿ ಯಾಕಾಗಿಯಾದರೂ ಕಾಂಗ್ರೆಸ್ ಸರ್ಕಾರ ಬಂತೋ, ಯಾಕಾಗಿಯಾದರೂ ಗ್ಯಾರಂಟಿಗಳು ಅನುಷ್ಠಾನಕ್ಕೆ ಬಂದವೋ ಎಂದು ಬೇಸರಿಸಿಕೊಳ್ಳುವಂತಾಗಿದೆ ಎಂದು ಹೇಳಿದ್ದಾರೆ.

ಬಿಡದಿ ಕೇತಗಾನಹಳ್ಳಿ ಜಮೀನು ಸರ್ವೆ; ಕಾನೂನು ಹೋರಾಟ ನಡೆಸುತ್ತೇವೆ

• ಉದಯವಾಹಿನಿ, ಮಂಡ್ಯ

ಬಿಡದಿ ಕೇತಗಾನಹಳ್ಳಿ ಜಮೀನು ಸರ್ವೆ ವಿಚಾರವಾಗಿ ಕಾನೂನು ಹೋರಾಟ ನಡೆಸುತ್ತೇವೆ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ. ಮಂಡ್ಯ ಜಿಲ್ಲೆಯ ಮಳವಳ್ಳಿಯ ಹಾಸ್ಟೆಲ್‌ನಲ್ಲಿ ವಿಷಾಹಾರ ಸೇವಿಸಿ ಅಸ್ವಸ್ಥರಾದ ವಿದ್ಯಾರ್ಥಿಗಳನ್ನ ಇಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ಭೇಟಿ ಪೋಷಕರನ್ನ ಭೇಟಿ ಮಾಡಿ ಮಕ್ಕಳ ಆರೋಗ್ಯ ವಿಚಾರಿಸಿ ವೈದ್ಯರಿಂದ ಘಟನೆಯ ಸಂಕ್ಷಿಪ್ತ ಮಾಹಿತಿ ಪಡೆದರು. ನಂತರ ಮಾಧ್ಯಮಗಳ ಜತೆ ನಿಖಿಲ್ ಕುಮಾರಸ್ವಾಮಿ ಅವರು ಮಾತನಾಡಿ, ಘಟನೆಯಲ್ಲಿ ಫುಡ್ ಪಾಯಿಸನ್ ನಿಂದ 45 ಮಕ್ಕಳು ಅಸ್ವಸ್ಥಗೊಂಡು ಚಿಕಿತ್ಸೆ ಪಡೆತ್ತಿದ್ದಾರೆ. ಅದರಲ್ಲಿ ಹತ್ತಾರು ಮಕ್ಕಳು ಖಖಐಅ ವಿದ್ಯಾರ್ಥಿಗಳು. ಇಬ್ಬರನ್ನ ಉಳಿಸಿಕೊಳ್ಳಲು ಆಗಲಿಲ್ಲ ಅಂತಾ ವೈದ್ಯರು ಹೇಳಿದ್ದಾರೆ.ಇಂದು ಭೇಟಿ ನೀಡಿ ವೈದ್ಯರು, ಪೋಷಕರನ್ನ ಭೇಟಿ ಮಾಡಿದ್ದೇನೆ. ಮಕ್ಕಳು ಮತ್ತು ಅವರ ಪೋಷಕರಿಗೆ ಧೈರ್ಯ ತುಂಬಿದ್ದೇನೆ ಎಂದು ನಿಖಿಲ್ ಅವರು ತಿಳಿಸಿದರು. ದ್ವೇಷದ ರಾಜಕೀಯಕ್ಕೆ ಬುನಾದಿ ಹಾಕಿದ್ದೆ ಕಾಂಗ್ರೆಸ್. ಇಷ್ಟು ವರ್ಷಕ್ಕೆ ದ್ವೇಷದ ರಾಜಕೀಯಕ್ಕೆ ಯಾರು ಸೊಪ್ಪು ಹಾಕಿರಲಿಲ್ಲ, ಎರಡು ವರ್ಷದ ಹಿಂದೆ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ದ್ವೇಷದ ರಾಜಕೀಯ ಹೆಚ್ಚಾಗಿದೆ.

ಪಿಜಿ ಉದ್ಯಮಕ್ಕೆ ಭಾರೀ ಹೊಡೆತ ರಿಯಲ್ ಎಸ್ಟೇಟ್ ಕೂಡಾ ಕುಸಿತ

• ಉದಯವಾಹಿನಿ, ಬೆಂಗಳೂರು

ವೇಗವಾಗಿ ಬೆಳೆಯುತ್ತಿರುವ ಮಹಾನಗರದಲ್ಲಿ ಇದ್ದಕ್ಕಿದ್ದಂತೆ ಪಿಜಿ (ಪೇಯಿಂಗ್ ಗೆಸ್ಟ್) ಗಳಿಗೆ ಬೇಡಿಕೆ ಕುಸಿತ ಆಗಿದೆ. ಮನೆ ಮಾರಾಟ ಮೊದಲಾದ ರಿಯಲ್ ಎಸ್ಟೇಟ್ ಉದ್ಯಮದ ಚಟುವಟಿಕೆಗಳಿಗೂ ಹಿನ್ನಡೆಯಾಗಿದೆ.. ಈ ಬೆಳವಣಿಗೆಗೆ ಪ್ರಮುಖ ಕಾರಣ ಆಗಿರುವುದು ಇದೇ ಬೆಳವಣಿಗೆ ಎಂದು ಹೇಳಲಾಗ್ತಿದೆ. ನಗರದ ಐಟಿ ಬಿಟಿ ಕಂಪನಿಗಳು ನಷ್ಟದ ಹೆಸರಲ್ಲಿ ಉದ್ಯೋಗ ಕಡಿತ ಮಾಡಿವೆ. ಲೇ ಆಫ್ ನಿಂದಾಗಿ ಸಾವಿರಾರು ಉದ್ಯೋಗಿಗಳು ಕಂಗಾಲಾಗಿದ್ದಾರೆ. ಪಿಜಿ ಬಿಟ್ಟು, ಬಾಡಿಗೆ ಮನೆಗಳಿಂದ ತೊರೆದು, ಭವಿಷ್ಯದ ಮನೆಯ ಕನಸನ್ನೂ ತೊರೆದು ಅತಂತ್ರರಾಗಿ ಬೆಂಗಳೂರು ಬಿಡುವ ಪರಿಸ್ಥಿತಿ ಬಂದಿದ್ದು, ಇದು ಬೆಂಗಳೂರಿನ ಪಿಜಿ ಉದ್ಯಮ ಹಾಗೂ ರಿಯಲ್ ಎಸ್ಟೇಟ್ ಮೇಲೆ ಕಾರ್ಮೋಡ ಕವಿಯುವಂತೆ ಮಾಡಿದೆ. ಬೆಂಗಳೂರಿನಲ್ಲಿ ಟೆಕ್ ಉದ್ಯೋಗಗಳ ಬಿಕ್ಕಟ್ಟು ತೀವ್ರವಾಗಿದೆ. ಇದರ ಪರಿಣಾಮವಾಗಿ ರಿಯಲ್ ಎಸ್ಟೇಟ್ ಮಾರುಕಟ್ಟೆಯು ಕುಸಿಯುತ್ತಿದೆ. ಬಾಡಿಗೆ ಮನೆಗಳು ಖಾಲಿಯಾಗುತ್ತಿವೆ. ಆಸ್ತಿಗಳ ಬೆಲೆ ಕೂಡ ಕಡಿಮೆಯಾಗುತ್ತಿದೆ. ಇ-ಕಾಮರ್ಸ್ ದೈತ್ಯ ಅಮೆಜಾನ್ ಸುಮಾರು 14,000 ಉದ್ಯೋಗಿಗಳನ್ನು ಕೆಲಸದಿಂದ ತೆಗೆದುಹಾಕುತ್ತಿದೆ ಎಂಬ ವರದಿಗಳು ಬಂದಿವೆ. ಇದು ಬೆಂಗಳೂರಿನ ಪಿಜಿ (ಕಉ) ಮತ್ತು ಬಾಡಿಗೆ ಮನೆಗಳ ಮೇಲೆ ಪರಿಣಾಮ ಬೀರಿದೆ. ಜೂನಿಯರ್ ಐಟಿ ಉದ್ಯೋಗಿಗಳಿಗೆ ಪಿಜಿಗಳು ಕೈಗೆಟುಕುವ ದರದಲ್ಲಿ ಸಿಗುತ್ತವೆ. ಆದರೆ ಈಗ ಬೇಡಿಕೆ ಕಡಿಮೆಯಾಗಿದೆ. ಇದರಿಂದ ಮಾಲೀಕರು ಆರ್ಥಿಕ ಸಂಕಷ್ಟ ಅನುಭವಿಸುತ್ತಿದ್ದಾರೆ.

ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರೋಡ್ ಯೋಜನೆಗೆ ಸಮಿತಿ ಒಪ್ಪಿಗೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರು ನಗರದ ವಾಹನ ದಟ್ಟಣೆಯನ್ನು ಗಣನೀಯ ತಗ್ಗಿಸುವ ಉಪ ನಗರ ವರ್ತುಲ ರಸ್ತೆ ಯೋಜನೆ (ಎಸ್‌ಟಿಆರ್‌ಆರ್) ಕೇಂದ್ರ ಸಂಪುಟ ಸಭೆಯ ಮುಂದೆ ಬರಲಿದೆ. ಯೋಜನೆಗೆ 'ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಮೌಲ್ಯಮಾಪನ ಸಮಿತಿ' ಒಪ್ಪಿಗೆ ನೀಡಿದೆ.

ಈ ಬಗ್ಗೆ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಎಚ್‌ಡಿ ಕುಮಾರಸ್ವಾಮಿ ಅವರಿಗೆ ಭರವಸೆ ನೀಡಿದ್ದು, ಶೀಘ್ರವೇ ಸಂಪುಟ ಸಭೆಯಲ್ಲಿ ಒಪ್ಪಿಗೆ ಪಡೆದು ಯೋಜನೆಗೆ ಮಂಜೂರಾತಿ ನೀಡಲಾಗುವುದು ಎಂದರು. ಈ ಯೋಜನೆಯ ಬಗ್ಗೆ ಮಹತ್ವದ ಚರ್ಚೆ ನಡೆಸಿದರು. ಈ ಹಿಂದೆ ಗಡ್ಕರಿಯವರನ್ನು ಸಚಿವರು ಭೇಟಿಯಾಗಿದ್ದರು. ಕುಮಾರಸ್ವಾಮಿ ಅವರ ಮನವಿಯ ಮೇರೆಗೆ ಯೋಜನೆಗೆ 'ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಮೌಲ್ಯಮಾಪನ ಸಮಿತಿ' ಒಪ್ಪಿಗೆ ನೀಡಿದ್ದು, ಈಗ ಸಂಪುಟದ ಮುಂದೆ ಬರಲಿದೆ. ಸಂಪುಟದಲ್ಲಿ

ಮಹಾಭಾರತ (ಶಾಂತಿಪರ್ವ) ಪ್ರವಚನ

• ಉದಯವಾಹಿನಿ, ಬೆಂಗಳೂರು

ರಾಜಾಜಿನಗರ ಮಾಧ್ವ ಸಂಘದ ವತಿಯಿಂದ ಮಾರ್ಚ್ 22 ರಿಂದ 29ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಶ್ರೀ ಕಲ್ಯಾ ಶ್ರೀಕಾಂತಾಚಾರ್ಯರಿಂದ ಮಹಾಭಾರತ ಶಾಂತಿಪರ್ವ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ಮಾಧ್ವ ಸಂಘ, 58ನೇ ಅಡ್ಡರಸ್ತೆ, 4ನೇ ಬ್ಲಾಕ್, ರಾಮಮಂದಿರದ ಹತ್ತಿರ, ರಾಜಾಜಿನಗರ, ಬೆಂಗಳೂರು-10

ಯುಜಿಸಿಇಟಿ ಪರೀಕ್ಷೆ ನಂತರ ತಿದ್ದುಪಡಿಗೆ ಅವಕಾಶ: ಕೆಇಎ

• ಉದಯವಾಹಿನಿ, ಬೆಂಗಳೂರು

ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಯುಜಿಸಿಇಟಿ-25 ಪರೀಕ್ಷೆ ನಡೆಸಲು ಸಕಲ ತಯಾರಿ ಮಾಡಿಕೊಳ್ಳುತ್ತಿದ್ದು, ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನಮೂದಿಸಿದ್ದ ದೋಷಗಳನ್ನು ಸರಿಪಡಿಸಿಕೊಳ್ಳಲು ಸಿಇಟಿ ಪರೀಕ್ಷೆ ನಂತರ ಅವಕಾಶ ನೀಡಲಾಗುವುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಅವರು ತಿಳಿಸಿದ್ದಾರೆ.

ಯುಜಿಸಿಇಟಿ ಪರೀಕ್ಷೆ ಏಪ್ರಿಲ್ 16 ಮತ್ತು 17ರಂದು ನಡೆಯಲಿದೆ. ಹೊರನಾಡು ಗಡಿನಾಡು ಕನ್ನಡಿಗರಿಗೆ ಏ.15ರಂದು ಕನ್ನಡ ಪರೀಕ್ಷೆ ನಡೆಯಲಿದೆ. ಇದಕ್ಕೆ ಸದ್ಯದಲ್ಲೇ ಪ್ರವೇಶ ಪತ್ರ ಡೌನ್‌ಲೋಡ್‌ಗೆ ಅವಕಾಶ ನೀಡಲಾಗುವುದು. ಈ ಪರೀಕ್ಷೆ ಬಳಿಕ ಎಡಿಟಿಂಗ್‌ಗೆ ಅವಕಾಶ ನೀಡಲಾಗುವುದು ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಪ್ರಸಕ್ತ ಸಾಲಿಗೆ ಒಟ್ಟು 3,64,778 ಮಂದಿ ಅರ್ಜಿ ಸಲ್ಲಿಸಿದ್ದು, ಅವರಲ್ಲಿ 3,44,989 ಮಂದಿ ಶುಲ್ಕ ಪಾವತಿಸಿದ್ದಾರೆ. ಈ ಪೈಕಿ ವಿದ್ಯಾರ್ಥಿ ಸಾಧನೆಯ ಟ್ರಯಾಕಿಂಗ್ (ಚಿಣ) ವ್ಯವಸ್ಥೆ ಮೂಲಕವೇ 1.36 ಲಕ್ಷ ಅಭ್ಯರ್ಥಿಗಳ ದಾಖಲೆಗಳು ಆನ್‌ಲೈನ್‌ನಲ್ಲಿ ಪರಿಶೀಲನೆಗೆ ಒಳಗಾಗಿವೆ. ಹಾಗೆಯೇ 1.64 ಲಕ್ಷ ಮಂದಿ, ಕಾಲೇಜುಗಳಲ್ಲಿ ತಮ್ಮ ದಾಖಲೆಗಳನ್ನು ಪರಿಶೀಲನೆ ಮಾಡಿಸಿಕೊಂಡು ಅರ್ಹತೆ ಪಡೆದಿದ್ದಾರೆ. ಇನ್ನೂ ಸುಮಾರು 44 ಸಾವಿರ ಅಭ್ಯರ್ಥಿಗಳು ದಾಖಲೆಗಳನ್ನು ಪರಿಶೀಲಿಸಿಕೊಳ್ಳಬೇಕಿದ್ದು, ಅವರಲ್ಲಿ ಯಾರ ಕ್ಲೇಮ್ ಚೀಟಿಯಲ್ಲಿ ಪರಿಶೀಲನೆ ಆಗಿಲ್ಲ ಎಂದು ನಮೂದಾಗಿರುತ್ತದೋ ಅಂತಹವರು ಸಂಬಂಧಪಟ್ಟ ಪಿಯು ಕಾಲೇಜು ಅಥವಾ ಹತ್ತಿರದ ಸರ್ಕಾರಿ ಪಿಯು ವಿಜ್ಞಾನ ಕಾಲೇಜಿನಲ್ಲಿ ಪರಿಶೀಲನೆ ಮಾಡಿಸಿಕೊಳ್ಳಬಹುದು ಎಂದು ವಿವರಿಸಿದ್ದಾರೆ.

2023-24ನೇ ಸಾಲಿನಲ್ಲಿ ಸಿಎಂ ಹೆಲಿಕಾಪ್ಟರ್ ಪ್ರಯಾಣಕ್ಕೆ 11 ಕೋಟಿ ಹಣ ಖರ್ಚು

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ವಿಮಾನ ಹಾಗೂ ಹೆಲಿಕಾಪ್ಟರ್ ಪ್ರಯಾಣಕ್ಕೆ ಬರೋಬ್ಬರಿ 11 ಕೋಟಿ ರೂ. ಖರ್ಚು ಮಾಡಿದ್ದಾರೆ. ಈ ಖರ್ಚು ವೆಚ್ಚದ ವರದಿಯನ್ನು ಸರ್ಕಾರ ವಿಧಾನ ಪರಿಷತ್‌ನಲ್ಲಿ ತಿಳಿಸಿದೆ. ಈ ವಿಚಾರವಾಗಿ ವಿಧಾನಪರಿಷತ್‌ನಲ್ಲಿ ಜೆಡಿಎಸ್ ಶಾಸಕ ಜವರಾಯಿಗೌಡ ಪ್ರಶ್ನಿಸಿದರು. ಈ ವೇಳೆ ಸಿಎಂ ಲಿಖಿತ ರೂಪದ ಮೂಲಕ ಉತ್ತರವನ್ನು ನೀಡಿದ್ದಾರೆ. ವಿವಿಧ ಜಿಲ್ಲೆ ಪ್ರವಾಸ, ವಿಶೇಷ ಪ್ರವಾಸಗಳಿಗಾಗಿ ಸಿಎಂ ವಿಮಾನ ಬಳಕೆ ಮಾಡಿದ್ದರು. ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ಇಲ್ಲಿಯವರೆಗೆ ಸಿಎಂ ಹಾಗೂ ರಾಜ್ಯಪಾಲರು ಸುಮಾರು 34 ಕೋಟಿ ರೂ. ವಿಮಾನಯಾನಕ್ಕೆ ಖರ್ಚು ಮಾಡಿದ್ದಾರೆ. ಈ ವರದಿಯಲ್ಲಿ ಸಿಎಂ, ರಾಜ್ಯಪಾಲರು ಹಾಗೂ ಹೈಕೋರ್ಟ್ ನ್ಯಾಯಾಧೀಶರ ಸಂಪೂರ್ಣ ವಿಮಾನ ಹಾಗೂ ಹೆಲಿಕಾಪ್ಟರ್ ಪ್ರಯಾಣದ ಖರ್ಚು ವೆಚ್ಚದ ಮಾಹಿತಿಯಿದೆ. 2024-25ನೇ ಸಾಲಿನಲ್ಲಿ ಸರ್ಕಾರವು ಸುಮಾರು 21 ಕೋಟಿ ರೂ. ವಿಮಾನ ಪ್ರಯಾಣಕ್ಕೆ ಖರ್ಚು ಮಾಡಿದೆ.

ಪರೀಕ್ಷಾ ದಿನವೇ ಕರ್ನಾಟಕ ಬಂದ್ ಆತಂಕದಲ್ಲಿ ವಿದ್ಯಾರ್ಥಿಗಳು, ಪೋಷಕರು

• ಉದಯವಾಹಿನಿ, ಬೆಂಗಳೂರು

ಶನಿವಾರ ಕನ್ನಡ ಪರ ಸಂಘಟನೆಗಳು ಕರೆ ನೀಡಿದ ಕರ್ನಾಟಕ ಬಂದ್‌ಗೆ ವಿದ್ಯಾರ್ಥಿಗಳು, ಪೋಷಕರು ಆತಂಕ ವ್ಯಕ್ತಪಡಿಸಿದ್ದಾರೆ.

ಬಂದ್ ದಿನವೇ ಸರ್ಕಾರಿ, ಖಾಸಗಿ, ಅನುದಾನಿತ ಎಲ್ಲಾ ಶಾಲೆಗಳಲ್ಲೂ ಜಲವು ತರಗತಿಗಳಿಗೆ ಪರೀಕ್ಷೆ ನಡೆಯಲಿದೆ. ಬಂದ್ ಘೋಷಿಸಿದ್ದರೂ ಶಿಕ್ಷಣ ಇಲಾಖೆ ಇನ್ನೂ ನಿರ್ಧಾರ ಕೈಗೊಳ್ಳದ ಕಾರಣ ಬಂದ್ ದಿನ ಪರೀಕ್ಷೆ ಇದ್ಯಾ? ಇಲ್ವೋ ಎಂಬ ಗೊಂದಲದಲ್ಲಿ ಪೋಷಕರಿದ್ದಾರೆ. 1 ರಿಂದ 3ನೇ ತರಗತಿಗೆ ನಲಿ-ಕಲಿ ಮೌಲ್ಯಮಾಪನ, 4-5ನೇ ತರಗತಿಗೆ ಗಣಿತ ವಿಷಯಗಳ ಪರೀಕ್ಷೆ, 6 ರಿಂದ 8ನೇ ತರಗತಿಗೆ ಗಣಿತ ವಿಷಯಗಳ ಪರೀಕ್ಷೆ ನಡೆಯಲಿದೆ. ಖಾಸಗಿ ಶಾಲೆಗಳಲ್ಲಿ ಅನುಕೂಲಕ್ಕೆ ತಕ್ಕಂತೆ ಬೇರೆ ವಿಷಯಗಳ ಪರೀಕ್ಷೆ ನಡೆಯಲಿದೆ. ಬಂದ್ ದಿನ ಪರೀಕ್ಷೆ ನಡೆಸಿದರೆ ವಿದ್ಯಾರ್ಥಿಗಳಿಗೆ ಸಾರಿಗೆ ಸಮಸ್ಯೆಯಾಗುವ ಸಾಧ್ಯತೆಯಿದೆ. ವಿದ್ಯಾರ್ಥಿಗಳಿಗೆ ಸಮಸ್ಯೆಯಾದರೆ ಜವಾಬ್ದಾರಿ ಹೊರುವವರು ಯಾರು ಎಂಬ ಪ್ರಶ್ನೆ ಎದ್ದಿದೆ. ಹೀಗಾಗಿ ಶಿಕ್ಷಣ ಇಲಾಖೆ ನಿರ್ಧಾರ ತೆಗೆದುಕೊಳ್ಳುವಂತೆ ಒತ್ತಡ ಹೆಚ್ಚಾಗಿದೆ. ಈಗಾಗಲೇ ಶನಿವಾರ ಬಂದ್ ಬೇಡ ಎಂದು ಪೋಷಕರ ಸಂಘ ವಿರೋಧ ವ್ಯಕ್ತಪಡಿಸಿದೆ. ಖಾಸಗಿ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟದ (ಕ್ಯಾಮ್ಸ್) ಪ್ರಧಾನ ಕಾರ್ಯದರ್ಶಿ ಶಶಿಕುಮಾರ್ ಅವರು ಪರೀಕ್ಷೆ ಸಮಯದಲ್ಲಿ ಬಂದ್ ಬೇಡ ಎಂದಿದ್ದಾರೆ. ಪರೀಕ್ಷಾ ದಿನಾಂಕಗಳು ಈ ಹಿಂದೆಯೇ ನಿರ್ಧಾರ ಆಗಿದೆ. ನಾಡು-ನುಡಿ ಹೋರಾಟಕ್ಕೆ ನಮ್ಮ ಬೆಂಬಲ ಇದೆ. ಆದರೆ ಬಂದ್‌ನಲ್ಲಿ ಭಾಗಿಯಾಗಲು ಆಗುವುದಿಲ್ಲ. ಪರೀಕ್ಷೆ ಮುಂದೂಡಿಕೆ ಸಾಧ್ಯವಿಲ್ಲ ಎಂದಿದ್ದಾರೆ.

ಅತಿಕ್ರಮಣ ತೆರವು ಕುರಿತು 10 ದಿನದಲ್ಲಿ ವರದಿ ಸಲ್ಲಿಸಿ; ಸರ್ಕಾರಕ್ಕೆ ಹೈ ಸೂಚನೆ

ಭೂ ಕಬಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಸ್ತೃತ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಲೋಕಾಯುಕ್ತರು ಮಾಡಿರುವ ಆದೇಶ ಜಾರಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಅವರ ಸಂಬಂಧಿ ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಮತ್ತಿತರರಿಂದ ರಾಮನಗರದ ಬಿಡದಿಯ ಕೇತಗಾನಹಳ್ಳಿಯಲ್ಲಿನ ಸರ್ಕಾರಿ ಜಮೀನಿನ ಒತ್ತುವರಿ ತೆರವು ಕುರಿತು 10 ದಿನಗಳಲ್ಲಿ ವರದಿ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದೆ.

ಭೂ ಕಬಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಸ್ತೃತ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಲೋಕಾಯುಕ್ತರು ಮಾಡಿರುವ ಆದೇಶ ಜಾರಿ ಮಾಡುವಂತೆ ಹೈಕೋರ್ಟ್ ಹೊರಡಿಸಿರುವ ಆದೇಶ ಪಾಲಿಸದ ರಾಜ್ಯ ಸರ್ಕಾರದ ನಡೆ ವಿರುದ್ಧ ಸಮಾಜ ಪರಿವರ್ತನಾ ಸಮುದಾಯ ಸಲ್ಲಿಸಿರುವ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಕೆ ಸೋಮಶೇಖರ್ ಮತ್ತು ಟಿ ವೆಂಕಟೇಶ್ ನಾಯ್ಕ್ ಅವರ ವಿಭಾಗೀಯ ಪೀಠ ವಿಚಾರಣೆ ನಡೆಸಿ, ಈ ಆದೇಶವನ್ನು ನೀಡಿದೆ. ಆದೇಶ ಹೊರಡಿಸುವ ಮೊದಲು, ಹೆಚ್ಚುವರಿ ಅಡ್ವೊಕೇಟ್ ಜನರಲ್ (ಎಎಜಿ) ಮತ್ತು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಅವರು ವರದಿಯನ್ನು ಸಲ್ಲಿಸಿದರು, ವರದಿಯಲ್ಲಿ ನೋಟಿಸ್ ನೀಡಿದ ನಂತರ ಸಮೀಕ್ಷೆ ನಡೆಸಲಾಗಿದೆ ಎಂದು ತಿಳಿಸಲಾಗಿದೆ. ಕೇತಗಾನಹಳ್ಳಿ ಸುತ್ತಮುತ್ತ ಸ್ಥಳೀಯರಿಗೆ ಮಂಜೂರಾಗಿರುವ ಜಮೀನು ಪರಿಶೀಲಿಸಲು ಸಮಿತಿ ರಚನೆಯಾಗಿದೆ. 14 ಎಕರೆ ಜಮೀನು ಒತ್ತುವರಿ ತೆರವುಗೊಳಿಸಲಾಗಿದೆ. 18 ಎಕರೆ ಒತ್ತುವರಿ ಕುರಿತು ಸಂಬಂಧಪಟ್ಟವರಿಗೆ ನೋಟಿಸ್ ನೀಡ ಲಾಗುತ್ತಿದೆ ಎಂದರು. ಎಷ್ಟು ಜಮೀನು ಸ್ಥಳೀಯರಿಗೆ ಮಂಜೂರಾಗಿದೆ ಎಂಬ ನ್ಯಾಯಪೀಠದ ಪ್ರಶ್ನೆಗೆ ಉತ್ತರಿಸಿದ ರಾಜೇಂದ್ರ ಕಟಾರಿಯಾ ಜಮೀನು ಮಂಜೂರಾತಿ ದಾಖಲೆಗಳು ಇಲ್ಲವಾಗಿದೆ. ಆ ಕುರಿತು ಪರಿಶೀಲನೆ ನಡೆಸಲು ಸಮಿತಿ ರಚಿಸಲಾಗಿದೆ. ಸಮಿತಿಯು ಭೂ ಮಂಜೂರಾತಿ ಅಸಲಿಯೇ ಅಥವಾ ನಕಲಿಯೇ ಎಂಬದನ್ನು ಪರಿಶೀಲಿಸಲಿದೆ. ವಿಧಿ ವಿಜ್ಞಾನ ಪ್ರಯೋಗಾಲಯದಿಂದ ವರದಿ ಪಡೆಯಲಿದ್ದು, ಕಾಲಾವಕಾಶ ನೀಡಬೇಕು ಎಂದು ಕೋರಿದರು. ಇದಕ್ಕೆ ಪೀಠವು ಈಗ ದಾಖಲೆ ನಾಪತ್ತೆಯಾಗಿವೆ. ಮುಂದೆ ಜಮೀನು ನಾಪತ್ತೆಯಾಗಬಹುದು. ಪ್ರಭಾವಿಗಳು ಒತ್ತುವರಿ ಮಾಡಿರುವುದರಿಂದ ಕೈ ಕಟ್ಟಿ ಕುಳಿತ್ತಿದ್ದೀರಿ. ಅದೇ ಭಿಕ್ಷುಕರು, ಬಡವರು ಐದಾರಡಿ ಒತ್ತುವರಿ ಮಾಡಿದರೆ ಬುಲ್ಡೋಜರ್ ತೆಗೆದುಕೊಂಡು ಹೋಗಿ ತೆರವು ಮಾಡುತ್ತಿದ್ದಿರಿ. ಸರ್ಕಾರಕ್ಕೆ ಧೈರ್ಯವಿದ್ದರೆ ಒತ್ತುವರಿ ತೆರವುಗೊಳಿಸಿ ಸರ್ಕಾರದ ವಶಕ್ಕೆ ಜಮೀನು ಪಡೆಯಬೇಕು. ಇಲ್ಲವಾದರೆ ನ್ಯಾಯಾಲಯವೇ ಆ ಬಗ್ಗೆ ಸೂಕ್ತ ಆದೇಶ ಹೊರಡಿಸುತ್ತದೆ. ಜಮೀನು ಒತ್ತುವರಿಯಿಂದ ಪಡೆದಿರುವ ಲಾಭವನ್ನೂ ವಸೂಲಿಗೆ ಆದೇಶಿಸಬೇಕಾಗಬಹುದು ಎಂದು ಎಚ್ಚರಿಸಿತು. ನಂತರ ಕೇತಗಾನಹಳ್ಳಿಯ ಸರ್ವೇ ನಂ 7, 8, 9, 16 ಮತ್ತು 79ರ ಒತ್ತುವರಿ ತೆರವಿನ ಬಗ್ಗೆ 10 ದಿನಗಳಲ್ಲಿ ವರದಿ ಕೊಡಬೇಕು ಎಂದು ನಿರ್ದೇಶಿಸಿದ ಪೀಠವು, ವಿಚಾರಣೆಯನ್ನು ಏಪ್ರಿಲ್ 3ಕ್ಕೆ ವಿಚಾರಣೆ ಮುಂದೂಡಿತು.

ಜಮೀನು ಮಂಜೂರಾತಿ ದಾಖಲೆ

ಇದಕ್ಕೆ ಆಕ್ಷೇಪಿಸಿದ ಅರ್ಜಿದಾರರ ಪರ ವಕೀಲರು, 110 ಎಕರೆ ಗೋಮಾಳ ಜಮೀನು ಒತ್ತುವರಿಯಾಗಿದೆ. ನಕಲಿ ಮಂಜೂರಾತಿ ಪತ್ರ ಆಧರಿಸಿ ರಾಜಕಾರಣಿಗಳು, ಪ್ರಭಾವಿಗಳು ಖರೀದಿಸಿದ್ದಾರೆ. ಆ ಜಮೀನನ್ನು ಸರ್ಕಾರ ವಶಪಡಿಸಿಕೊಂಡಿಲ್ಲ. ಒತ್ತುವರಿ ತೆರವುಗೊಳಿಸಿ, ಜಮೀನನ್ನು ವಶಪಡಿಸಿಕೊಳ್ಳಬೇಕು ಎಂದರು.

ಕೃಷ್ಣಾ ಮೇಲ್ದಂಡೆ ಯೋಜನೆಗೆ 1700 ಕೋಟಿ ಅನುದಾನ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಪರಿಷ್ಕೃತ ಅಂದಾಜು ಮೊತ್ತವು ಹೆಚ್ಚಳವಾಗಿದ್ದು,1700 ಕೋಟಿ ರೂ. ಅನುದಾನವನ್ನು ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಹಂಚಿಕೆ ಮಾಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಪರಿಷತ್‌ನಲ್ಲಿ ತಿಳಿಸಿದ್ದಾರೆ.ಕೃಷ್ಣಾ ಮೇಲ್ಮಂಡೆ ಯೋಜನೆ ಹಂತ-3ರ ಪರಿಷ್ಕೃತ ಅಂದಾಜು ಮೊತ್ತವು ಸುಮಾರು 87, 818.82 ಕೋಟಿ ರೂಗಳಿಗೆ ಹೆಚ್ಚಳವಾಗಿದೆ ಎಂದು ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯ ವಿ.ಎಚ್. ಪೂಜಾರ್ ಅವರ ಪ್ರಶ್ನೆಗೆ ಉತ್ತರಿಸಿದರು.

2024-25ನೇ ಸಾಲಿನ ದರಪಟ್ಟಿ ಹಾಗೂ 2023ರ ಜನವರಿ 25ರ ಕಂದಾಯ ಇಲಾಖೆಯ ಆದೇಶದ ಒಪ್ಪಂದದ ದರ ಸೇರಿ ಈ ಪ್ರಮಾಣದ ಮೊತ್ತವಾಗಿದ್ದು ಬಜೆಟ್ ನಲ್ಲಿ 1700 ಕೋಟಿ ಅನುದಾನ ಒದಗಿಸಲಾಗಿದೆ ಎಂದು ತಿಳಿಸಿದರು.

ಭೂಸ್ವಾಧೀನ, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕ್ಕಾಗಿ 2024-25 ಸಾಲಿನ ಆಯವ್ಯಯದಲ್ಲಿ 1200 ಕೋಟಿ ರೂ., 2025 26ನೇ ಸಾಲಿನ ಆಯವ್ಯಯದಲ್ಲಿ 1700 ಕೋಟಿ ರೂ. ಅನುದಾನ ಹಂಚಿಕೆ ಮಾಡಲಾಗಿದೆ ಎಂದು ಅವರು ಹೇಳಿದರು. 2024ರ ಡಿಸೆಂಬರ್ 16ರಂದು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ಕೃಷ್ಣಾ ಮೇಲ್ಕಂಡೆ ಯೋಜನೆಯ ಹಂತ-2ರ ಭೂಸ್ವಾಧೀನ, ಪುನರ್ ವಸತಿ, ಪುನರ್ ನಿರ್ಮಾಣದ ವಿಷಯಗಳ ಕುರಿತು ಬಾಗಲಕೋಟೆ, ವಿಜಯಪುರ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಯೋಜನೆಯ ಮುಳುಗಡೆ ಸಂತ್ರಸ್ತರೊಂದಿಗೆ ಸಭೆ ನಡೆಸಲಾಗಿದೆ. ಸಭೆಯಲ್ಲಿ ಒಪ್ಪಂದದ ಐತೀರ್ಪಿನ ಪರಿಷ್ಕರಣ, ಯೋಜನೆಯ ಪರಿಷ್ಕೃತ ಅಂದಾಜು ಪ್ರಸ್ತಾವನೆ 2025-26ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಅಂಶಗಳು ಮತ್ತು ಇನ್ನಿತರೆ ಅಗತ್ಯ ನಿರ್ಣಗಳ ಕುರಿತು ಅನುಮೋದನೆಗಾಗಿ ಸಚಿವ ಸಂಪುಟದ ಮುಂದೆ ಮಂಡಿಸಲು ಕ್ರಮ ವಹಿಸಲಾಗಿದೆ ಎಂದು ಅವರು ತಿಳಿಸಿದರು.

ಬೆಂಗಳೂರು ವಿದ್ಯಾರ್ಥಿಗಳಿಗೆ ಜಪಾನ್ ರಾಯಭಾರಿ ಸಲಹೆ

• ಉದಯವಾಹಿನಿ, ಬೆಂಗಳೂರು

ಜಪಾನ್ ರಾಷ್ಟ್ರದಲ್ಲಿ ಭಾರತೀಯರಿಗೆ ಉದ್ಯೋಗಾವಕಾಶಗಳು ಉತ್ತಮವಾಗಿದ್ದು, ಜಪಾನೀಸ್ ಭಾಷೆಯನ್ನು ಕಲಿಯುವ ಅವಕಾಶವನ್ನು ಬಳಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಬೆಂಗಳೂರಿನಲ್ಲಿರುವ ಜಪಾನ್ ಕಾನ್ಸುಲ್ ಜನರಲ್ ಟ್ಸುಟೊಮು ನಕಾನೆ ಅವರು ಸಲಹೆ ನೀಡಿದ್ದಾರೆ.

ಬೆಂಗಳೂರು ನಗರ ವಿಶ್ವವಿದ್ಯಾಲಯದ ಜಾಗತಿಕ ಭಾಷಾ ಕೇಂದ್ರದ 40 ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ಮಾತ ನಾಡಿದ ಅವರು, ಜಪಾನಿ ಭಾಷೆಯ ಕಲಿಕೆ ಸಾಂಸ್ಕೃತಿಕ, ಆರ್ಥಿಕವಾಗಿ ಅತ್ಯಂತ ಮಹತ್ವದ್ದಾಗಿದೆ. ಜಗತ್ತಿನಲ್ಲಿ ಭಾರತ ಅತ್ಯಂತ ಕಿರಿಯರನ್ನು ಹೊಂದಿರುವ ದೇಶವಾಗಿದೆ. ಇಲ್ಲಿನ ಶಿಕ್ಷಣವು ಮಾನವ ಸಂಪನ್ಮೂಲವನ್ನಾಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು. ಬೆಂಗಳೂರು ವಿವಿಯಲ್ಲಿ ಕಳೆದ 40 ವರ್ಷಗಳಿಗೂ ಮುನ್ನವೇ ಪ್ರಾರಂಭ ವಾಗಿರುವ ಜಾಗತಿಕ ಭಾಷೆಗಳ ಅಧ್ಯಯನ ಕೇಂದ್ರವು ವಿವಿಧ ಸಂಸ್ಕೃತಿಗಳ ವಿನಿಮಯಕ್ಕೆ ನೆರವಾಗುತ್ತಿದೆ. ಹೆಚ್ಚು ಹೆಚ್ಚು ಜನರು ಇದನ್ನು ಬಳಸಿಕೊಳ್ಳಬೇಕಿದೆ ಎಂದು ಸಲಹೆ ನೀಡಿದರು.

ಜಪಾನಿನ ವಿದೇಶಾಂಗ ಸಚಿವಾಲಯದ ಸಲಹೆಗಾರರಾದ ಅಶೋಕ್ ಕುಮಾರ್ ಚಾವ್ಲಾ ಅವರು ಮಾತನಾಡಿ, ಜನಸಂಖ್ಯೆಯ ಕುಸಿತವನ್ನು ಎದುರಿಸುತ್ತಿರುವ ಜಪಾನ್, ನುರಿತ ಭಾರತೀಯ ವೃತ್ತಿಪರರನ್ನು ಕೈಬೀಸಿ ಕರೆಯುತ್ತಿದೆ ಎಂದು ಹೇಳಿದರು. .ಬೆಂಗಳೂರು ನಗರ ವಿವಿಯ ಕುಲಪತಿ ಲಿಂಗರಾಜ ಗಾಂಧಿ ಮಾತನಾಡಿ, ಭಾರತದ ತಾಂತ್ರಿಕ ಪ್ರಗತಿ ಮತ್ತು 35 ವರ್ಷಕ್ಕಿಂತ ಕಡಿಮೆ ವಯಸ್ಸಿನ ಯುವ ಜನಸಂಖ್ಯೆಯನ್ನು ಹೊಂದಿರುವ ಪ್ರಯೋಜನವನ್ನು ಒತ್ತಿ ಹೇಳಿದರು. ಬೆಂಗಳೂರು ವಿವಿ ಮತ್ತು ಜಾಗತಿಕ ಭಾಷೆಗಳ ಕೇಂದ್ರಕ್ಕೆ ಇದು ಅತ್ಯಂತ ಮಹತ್ವದ ದಿನವಾಗಿದ್ದು, ಶ್ರೀಮಂತ ಇತಿಹಾಸ ಹೊಂದಿದೆ. ಈ ಕೇಂದ್ರದಲ್ಲಿ 14 ಭಾಷೆಗಳನ್ನು ಕಲಿಸಲಾಗುತ್ತಿದೆ ಎಂದು ವಿವರಿಸಿದರು.

ಜಪಾನ್ ದೇಶದಲ್ಲಿ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ಬಳಕೆಯಲ್ಲಿದ್ದರೂ ಉದ್ಯೋಗಾವಕಾಶಗಳು ವಿಕಾಸಗೊಳ್ಳುತ್ತಿದ್ದು, ಆಡಳಿತಾತ್ಮಕ ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿ ಭಾರತೀಯರಿಗೆ ಉದ್ಯೋಗಾವಕಾಶಗಳು ಹೆಚ್ಚಾಗುತ್ತಿವೆ ಎಂದು ತಿಳಿಸಿದರು

ನಮ್ಮ ಭಾಷೆ ಕಲಿಯಿರಿ

ನಿಷ್ಠಾವಂತ ರಿಗೆ ಪಕ್ಷದಲ್ಲಿ ಹುದ್ದೆ

ಉದಯವಾಹಿನಿ ಚಿತ್ರ

• ಉದಯವಾಹಿನಿ,ಕೆ.ಆರ್.ಪುರ,

ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ ಪಕ್ಷದಲ್ಲಿ ವಿವಿಧ ಹುದ್ದೆಗಳನ್ನು ನೀಡುವುದಾಗಿ ಎಐಸಿಸಿ ಕಾರ್ಯದರ್ಶಿ ಮನ್ಸೂರ್ ಅಲಿ ಖಾನ್ ಅವರು ತಿಳಿಸಿದರು.

ಮಹದೇವಪುರ ಕ್ಷೇತ್ರಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಆಗಮಿಸುತ್ತಿದ್ದು ಇದರ ಅಂಗವಾಗಿ ಮಾರತ್ತಹಳ್ಳಿ ಬ್ಲಾಕ್ ವತಿಯಿಂದ ನಾಗೋಂಡನಹಳ್ಳಿಯ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಮಹದೇವಪುರ ಕ್ಷೇತ್ರದಲ್ಲಿ ಕಾಂಗ್ರೇಸ್ ಪಕ್ಷವನ್ನು

ಮಾಲೂರು: ಅಕ್ರಮ ಗಣಿಗಾರಿಕೆ ತಡೆಗೆ ಒತ್ತಾಯ

ತಹಶೀಲ್ದಾರ ರೂಪ ಅಕ್ರಮ ಗಣಿಗಾರಿಕೆ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಂಡು ಬಡವರ ಬದುಕು ರೈತರ ಬೆಳೆ ರಕ್ಷಣೆ ಮಾಡುವ ಭರವಸೆ ನೀಡಿದರು

• ಉದಯವಾಹಿನಿ, ಮಾಲೂರು

ಟೇಕಲ್ ಮತ್ತು ಮಾಸ್ತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗೆ ಕಡಿವಾಣ ಹಾಕಲು ವಿಶೇಷ ತಂಡ ರಚನೆ ಮಾಡಿ ಕಾರ್ಮಿಕರ ಜೀವವನ್ನು ರೈತರ ಬೆಳೆಯನ್ನು ರಕ್ಷಣೆ ಮಾಡಬೇಕೆಂದು ರೈತ ಸಂಘದ ಕಾರ್ಯಕರ್ತರು ತಾಲ್ಲೂಕು ದಂಡಾಧಿಕಾರಿಗಳಿಗೆ ಮನವಿ ನೀಡಿ ಒತ್ತಾಯಿಸಿದರು.

ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಮಾತನಾಡಿ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಬರುವ ಅಮಾಯಕ ಕೂಲಿ ಕಾರ್ಮಿಕರ ರಕ್ಷಣೆ ಯಾರ ಹೊಣೆ, ಟೇಕಲ್ ಮಾಸ್ತಿ. ವ್ಯಾಪ್ತಿಯಲ್ಲಿ ನಿರಂತರವಾಗಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಯಲ್ಲಿ ಕಾನೂನು ನಿಯಮ ಮೀರಿ ನಿಷೇದಿತ ಜೆಲೆಟಿನ್ ಸಿಡಿಮದ್ದುಗಳನ್ನು ಉಪಯೋಗಿಸಿ ಕಾರ್ಮಿಕರ ಬಲಿ ಪಡೆಯುತ್ತಿದ್ದರೂ, ಜಿಲ್ಲಾಡಳಿತ ಅಥವಾ ತಾಲ್ಲೂಕು ಆಡಳಿತ ವಾಗಲೀ ಮಾಲೀಕರ ವಿರುದ್ಧ ಕ್ರಮ ಕೈಗೊಂಡು ಕೂಲಿ ಕಾರ್ಮಿಕರ ರಕ್ಷಣೆ ಮಾಡುವಾಲ್ಲಿ ವಿಫಲವಾಗಿದ್ದಾರೆ ಎಂದು ಆರೋಪಿಸಿದರು.

ಉದಯವಾಹಿನಿ ಚಿತ್ರ

ನೂರಾರು ಕೋಟಿ ತೆರಿಗೆ ವಂಚನೆ ಮಾಡಿ ಸರ್ಕಾರಿ ಗೋಮಾಳದಲ್ಲಿ ರಾಜಕಾರಣಿಗಳು ಸರ್ಕಾರದ ಮೇಲೆ ಒತ್ತಡ ಹಾಕಿ ಅಕ್ರಮವಾಗಿ ಗಣಿಗಾರಿಕೆಯನ್ನು ನಡೆಸುತ್ತಿದ್ದರೂ, ಅವರ ವಿರುದ್ಧ ಕ್ರಮ ಕೈಗೊಳ್ಳಲು ಹಿಂದೇಟು ಏಕೆ. ಪ್ರತಿ ತಿಂಗಳು ಒಂದಲ್ಲಾ ಒಂದು ಗಣಿಗಾರಿಕೆಯಲ್ಲಿ ಬಡವರ ದೇಹ ಛಿದ್ರ ಛಿದ್ರವಾಗುತ್ತಿದ್ದರೂ, ನೆಪ ಮಾತ್ರಕ್ಕೆ ಕ್ರಮ ಕೈಗೊಳ್ಳುವ ಬರವಸೆ ನೀಡಿ ಅಲ್ಲಿನ ಸ್ಥಳೀಯರನ್ನು ನಯವಾದ ಮಾತುಗಳಿಂದ ವಂಚಿಸಿ ಮತ್ತೆ ಗಣಿಗಾರಿಕೆಗೆ ಕುಮ್ಮಕ್ಕು ನೀಡುತ್ತಿರುವುದು

ಒಂದು ಕಡೆ ಬಡವರ ಬದುಕನ್ನು ಬಲಿ ಪಡೆಯುತ್ತಿರುವ ಅಕ್ರಮ ಗಣಿಗಾರಿಕೆ ಮತ್ತೊಂದು ಕಡೆ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆದ ರೈತರ ಬೆಳೆ ಕಲ್ಲು ದೂಳಿನಿಂದ ನಷ್ಟವಾಗಿ ಮನೆಗಳು ಬಿರುಕು ಬಿಟ್ಟು ಜೀವವನ್ನು ಅಂಗೈಯಲ್ಲಿಟ್ಟುಕೊಂಡು ಜೀವನ ಮಾಡಬೇಕಾದ ಪರಿಸ್ಥಿತಿ ಇದ್ದರೂ, ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದ, ಜೊತೆಗೆ ಟಿಪ್ಪರ್ ಲಾರಿಗಳ ವೇಗದ ಮಿತಿಗೆ ಗ್ರಾಮೀಣ ಪ್ರದೇಶಗಳಲ್ಲಿ ಅಪಘಾತಗಳು ಹೆಚ್ಚಾಗಿ ಪ್ರಾಣ ಕಳೆದುಕೊಳ್ಳುವವರ ಸಂಖ್ಯೆ ಹೆಚ್ಚಾಗಿದೆ. ಕೈಕಾಲು ಕಳೆದುಕೊಂಡು ಅಂಗ ವಿಕಲರಾಗುಗಿದ್ದರೂ, ಕ್ರಮ ಕೈಗೊಳ್ಳಬೇಕಾದ ಅಧಿಕಾರಿಗಳು ನಾಪತ್ತೆಯಾಗಿ ರಾಜಕೀಯ ವ್ಯಕ್ತಿಗಳ ಗುಲಾಮರಾಗಿ ಬಡವರ ಬದುಕನ್ನು ಬಲಿಪಡಿಯುತ್ತಿದ್ದಾರೆ ಎಂದು ಕಿಡಿಕಾರಿದರು.

ಭ್ರಷ್ಟಾಚಾರತೆಗೆ ಉದಾಹರಣೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕು ಅಧ್ಯಕ್ಷ ಪೆಮ್ಮದೊಡ್ಡಿ ಯಲ್ಲಣ್ಣ ಮಾತನಾಡಿ ಬಡವರ ಬದುಕನ್ನು ಬಲಿ ಪಡಿಯುತ್ತಿರುವ ಪ್ರಕರಣಗಳು ಜೀವಂತವಾಗಿರವಾಗಲೇ, ಪ್ರತಿ ದಿನ ನೂರಾರು ಲಾರಿಗಳಲ್ಲಿ ಅಕ್ರಮ ಕಲ್ಲುಗಳನ್ನು ಕಾನೂನಿನ ಭಯವಿಲ್ಲದೆ ರಾಜಾರೋಷವಾಗಿ ಟೈಲ್ಸ್ ಕಾರ್ಖಾನೆಗಳಿಗೆ ಸರಬರಾಜು ಮಾಡುತ್ತಿದ್ದರೂ ಕ್ರಮ ವಿಲ್ಲ. ಗಣಿ ಮಾಲೀಕರು ನೀಡುವ ತಿಂಗಳ ಲಕ್ಷ ಲಕ್ಷ ದೇಣಿಗೆಗೆ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ಮರೆತಿದ್ದಾರೆಂದು ಆರೋಪಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ತಾಲ್ಲೂಕು ತಹಶೀಲ್ದಾರ ರೂಪ ಅವರು ಅಕ್ರಮ ಗಣಿಗಾರಿಕೆ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಂಡು ಬಡವರ ಬದುಕು ರೈತರ ಬೆಳೆಯನ್ನು ರಕ್ಷಣೆ ಮಾಡುವ ಭರವಸೆಯನ್ನು ನೀಡಿದರು. ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ, ಹರೀಶ್, ರೂಪೇಶ್, ಮಾವೆ ಪ್ರಕಾಶ್, ಹರ್ಷ, ಗಿರೀಶ್, ಪುತ್ತೇರಿರಾಜು, ಮಂಗಸಂದ್ರ ತಿಮ್ಮಣ್ಣ ಮುಂತಾದವರು ಉಪಸ್ಥಿತರಿದ್ದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ ತಯಾರಿ: ಶಾಸಕ ಸುಬ್ಬಾರೆಡ್ಡಿ ಸಭೆ

• ಉದಯವಾಹಿನಿ, ಬಾಗೇಪಲ್ಲಿ

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ಶಿಕ್ಷಣ ಇಲಾಖೆಯಿಂದ ಸಂಜೆ ಎಸ್ ಎಸ್‌ಎಲ್‌ಸಿ ಪರೀಕ್ಷೆಯ ಅಗತ್ಯ ಸಿದ್ಧತೆಗಳ ಬಗ್ಗೆ, ಕೊರತೆಗಳ ನಿವಾರಣೆಗೆ ಪ್ರೌಢಶಾಲಾ ಮುಖ್ಯಶಿಕ್ಷಕರ ಜೊತೆ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಆನ್‌ಲೈನ್ ಸಭೆ ನಡೆಸಿದರು. ಗ್ರಾಮೀಣ ಪ್ರದೇಶಗಳಲ್ಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಿಗೆ ಕೆಎಸ್ ಆರ್‌ಟಿಸಿ ಬಸ್‌ಗಳನ್ನು ಬೆಳಗ್ಗೆ ಹಾಗೂ ಮಧ್ಯಾಹ್ನ ಸಮರ್ಪಕವಾಗಿ ಸಂಚರಿಸುವಂತೆ ಮಾಡಬೇಕು.

ವಿದ್ಯಾರ್ಥಿಗಳು ಮನೆಗಳಿಗೆ ಹೋಗಲು ಅನುಕೂಲ ಮಾಡಿಸಬೇಕು. ಪರೀಕ್ಷೆ ಕೇಂದ್ರಗಳಲ್ಲಿ ಅಗತ್ಯ ಸೌಲಭ್ಯ ಕಲ್ಪಿಸಬೇಕು. ಈಗಾಗಲೇ ಎಲ್ಲಾ ಮಕ್ಕಳಿಗೆ ವಿಷಯಗಳ ಶಿಕ್ಷಕ, ಶಿಕ್ಷಕಿಯರಿಂದ ಪುನರ್ ಮನನ ಮಾಡಿಸಲಾಗಿದೆ ಎಂದು ಪ್ರೌಢಶಾಲಾ ಮುಖ್ಯ ಶಿಕ್ಷಕರು ಶಾಸಕ ಸುಬ್ಬಾರೆಡ್ಡಿಗೆ ಮನವರಿಕೆ ಮಾಡಿದರು. ಸುಬ್ಬಾರೆಡ್ಡಿ, ಪ್ರತಿಕ್ರಿಯಿಸಿ, ಗ್ರಾಮೀಣ ಪ್ರದೇಶಗಳಲ್ಲಿ ಬಸ್‌ಗಳನ್ನು ಪರೀಕ್ಷಾ ದಿನದಂದು ಸಮರ್ಪಕವಾಗಿ ಸಂಚರಿಸುವಂತೆ ಮಾಡಬೇಕು.ಈ ಬಗ್ಗೆ, ಚಾಲಕರು, ನಿರ್ವಾಹಕರು ಬಸ್ ನಿಲ್ಲಿಸುವಂತೆ


ಉದಯವಾಹಿನಿ ಚಿತ್ರ

ಈಗಾಗಲೇ ಸಾರಿಗೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಪರೀಕ್ಷೆಯ ಭಯ ಹೋಗಲಾಡಿಸಿ, ಧೈರ್ಯ ತುಂಬಿಸಬೇಕು ಎಂದು ತಿಳಿಸಿದರು. ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯ, ಆರೋಗ್ಯ ಪರೀಕ್ಷೆ ಕಲ್ಪಿಸಬೇಕು. ನಕಲು, ಗೊಂದಲಕ್ಕೆ ಅವ ಕಾಶ ಇಲ್ಲ. ಕೇಂದ್ರಗಳ ಸುತ್ತಲೂ 144 ಸೆಕ್ಷನ್ ವಿಧಿಸಲಾಗಿದೆ. ತಾಲ್ಲೂಕಿನಲ್ಲಿ ಈ ಬಾರಿ ಪರೀಕ್ಷೆಯಲ್ಲಿ ಶೇ 100ರಷ್ಟು ಫಲಿತಾಂಶ ಬರುವ ನಿರೀಕ್ಷೆ ಇದೆ ಎಂದರು. ತಾಲ್ಲೂಕು ಪಂಚಾಯಿತಿ ಇಒ ಜಿ.ವಿ.ರಮೇಶ್, ಪ್ರಶಾಂತ್ ವರ್ಣಿ, ಎ.ಶ್ರೀನಿವಾಸ್, ಕ್ಷೇತ್ರ ಶಿಕ್ಷಣಾಧಿಕಾರಿ ಎನ್.ವೆಂಕಟೇಶಪ್ಪ, ನೋಡಲ್ ಅಧಿಕಾರಿ ಪಿ.ಎನ್.ನಾರಾಯಣಸ್ವಾಮಿ, ಪಿ.ಎನ್. ರವಿಕುಮಾರ್, ಎನ್.ಶಿವಪ್ಪ, ಚಂದ್ರಶೇಖರ್, ಆರ್.ಹನುಮಂತರೆಡ್ಡಿ, ಪಿ.ಮಂಜುನಾಥರೆಡ್ಡಿ ಇದ್ದರು.

ತಹಶೀಲ್ದಾರ್ ಮನೀಷಾ ಎನ್.ಪತ್ರಿ ಮಾತನಾಡಿ, ವಿದ್ಯಾರ್ಥಿಗಳು ಪರೀಕ್ಷೆಗಳಲ್ಲಿ ಮೊದಲು ಬರುವ ಪ್ರಶ್ನೋತ್ತರಗಳಿಗೆ, ವ್ಯಾಕರಣ, ಲೆಕ್ಕ ಚಿತ್ರಗಳನ್ನು ಬರೆಯಿರಿ. ಸಮಯವಕಾಶ ಉಪಯೋಗಿಸಬೇಕು. ನಂತರ ಆಲೋಚಿಸಿ ಉತ್ತರಗಳನ್ನು ಬರೆಯಿರಿ. ಗೊಂದಲ ಮಾಡಿಕೊಳ್ಳಬಾರದು. ಪರೀಕ್ಷೆ ಕೇಂದ್ರಗಳಿಗೆ ಒಂದು ಗಂಟೆ ಕಾಲ ಮುಂಚಿತವಾಗಿ ಬರಬೇಕು ಎಂದರು.

ಕೋಡಂಬಹಳ್ಳಿ ಬೆಸ್ಕಾಂ ವಿದ್ಯುತ್ ಕೇಂದ್ರಕ್ಕೆ ಮುತ್ತಿಗೆ

• ಉದಯವಾಹಿನಿ, ಚನ್ನಪಟ್ಟಣ

ಅಸಮರ್ಪಕ ವಿದ್ಯುತ್ ಪೂರೈಕೆ ಖಂಡಿಸಿ ರೈತ ಸಂಘದ ಪದಾಧಿಕಾರಿಗಳು, ರೈತರು ತಾಲ್ಲೂಕಿನ ಕೋಡಂಬಹಳ್ಳಿ ಬೆಸ್ಕಾಂ ವಿದ್ಯುತ್ ಕೇಂದ್ರಕ್ಕೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ಕೋಡಂಬಹಳ್ಳಿ ಗ್ರಾಮದ ಪ್ರಮುಖ ರಸ್ತೆಯಲ್ಲಿ ಬೆಸ್ಕಾಂ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನಾ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು, ನಂತರ ಬೆಸ್ಕಾಂ ಶಾಖಾ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು. ಈ ವೇಳೆ ರೈತ ಸಂಘದ ವಿಭಾಗೀಯ ಉಪಾಧ್ಯಕ್ಷ ಕೆ.ಮಲ್ಲಯ್ಯ ಮಾತನಾಡಿ, ಬೆಸ್ಕಾಂ ಅಧಿಕಾರಿಗಳು ವಿದ್ಯುತ್ ಪೂರೈಕೆ ಮಾಡುವಲ್ಲಿ ಅವೈಜ್ಞಾನಿಕ ಕ್ರಮ ಅನುಸರಿ ಸುತ್ತಿದ್ದಾರೆ. ರೈತರು ಬೇಸಿಗೆ ಬೆಳೆಗಳನ್ನು ಹಾಕಿದ್ದು, ಬಿಸಿಲಿನ ಝಳಕ್ಕೆ ಬೆಳೆಗಳು ಒಣಗುತ್ತಿವೆ. ಇದರ ನಡುವೆ ವಿದ್ಯುತ್ ಕಣ್ಣಾಮುಚ್ಚಾಲೆ ರೈತರ ನಿದ್ದೆಗೆಡಿಸಿದೆ. ಬೆಸ್ಕಾಂ ಅಧಿಕಾರಿಗಳು ಮೂರು ಫೇಸ್ ವಿದ್ಯುತ್ ನೀಡುತ್ತಿಲ್ಲ. ಜತೆಗೆ ಕೇವಲ ಎರಡು ಮೂರು ಗಂಟೆ ಮೂರು ಫೇಸ್ ವಿದ್ಯುತ್ ನೀಡುತ್ತಾರೆ. ಅಧಿಕಾರಿಗಳು ಸಮರ್ಪಕವಾಗಿ ವಿದ್ಯುತ್ ನೀಡದೆ ರೈತರಿಗೆ ತೊಂದರೆ ಕೊಡುತ್ತಿದ್ದಾರೆ ಎಂದು ಪ್ರತಿಭಟನಾಕಾರರು

ಉದಯವಾಹಿನಿ ಚಿತ್ರ

ಆರೋಪಿಸಿದರು. ಜತೆಗೆ ಈಗ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಮಯವಾಗಿದ್ದು ಕೆಲವೆಡೆ ರಾತ್ರಿಯ ವೇಳೆ ವಿದ್ಯುತ್ ನಿಲುಗಡೆ ಮಾಡಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಇದರ ಬಗ್ಗೆ ಅಧಿಕಾರಿಗಳು ಗಮನಹರಿಸಬೇಕು ಎಂದು ಒತ್ತಾಯಿಸಿದರು. ವಿಷಯ ತಿಳಿದು ಸ್ಥಳಕ್ಕೆ ಬಂದ ಕೋಡಂಬಹಳ್ಳಿ ಬೆಸ್ಕಾಂ ಕಿರಿಯ ಎಂಜಿನಿಯರ್‌ಗಳಾದ ಶಿವರಾಜು, ಮಹೇಂದ್ರ, ರೈತರ ಸಮಸ್ಯೆಯನ್ನು ಆಲಿಸಿ, ಶೀಘ್ರ ಸಮಸ್ಯೆ ಬಗೆಹರಿಸಿ ರೈತರಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಸುವ ಭರವಸೆ ನೀಡಿದ ನಂತರ ರೈತರು ಪ್ರತಿಭಟನೆ ವಾಪಸ್ ಪಡೆದರು. ರೈತ ಸಂಘದ ಪದಾಧಿಕಾರಿಗಳಾದ ರಾಜು, ರಾಜಣ್ಣ, ಕೃಷ್ಣ, ಶಂಕರ್, ಕುಮಾರ್, ಸ್ಥಳೀಯ ರೈತರು ಭಾಗವಹಿಸಿದ್ದರು.

ಬಿ- ಖಾತೆ ನೆಪದಲ್ಲಿ ಅಧಿಕಾರಿಗಳಿಂದ ಹಣ ಲೂಟಿ: ಜಯಮರಿ ಆರೋಪ

• ಉದಯವಾಹಿನಿ, ಕೊಳ್ಳೇಗಾಲ

ರಾಜ್ಯ ಸರ್ಕಾರದ ಅಧಿಸೂಚನೆಯನ್ನು ಉಲ್ಲಂಘಿಸಿ ನಗರದ ಅನಧಿಕೃತ ಬಡಾವಣೆತ ಆಸ್ತಿ ತೆರಿಗೆದಾರರಿಂದ ದುಪ್ಪಟ್ಟು ತೆರಿಗೆ ವಸೂಲಾತಿ ಮಾಡುತ್ತಿರುವ ನಗರಸಭೆಯ ಅಧಿಕಾರಿಗಳು ದಂದ ನೀತಿ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿ ನಗರಸಭೆ ಸದಸ್ಯೆ ಜಯಮರಿ ಅವರ ನೇತೃತ್ವದಲ್ಲಿ ಸಾರ್ವಜನಿಕರು ನಗರಸಭೆ ಕಚೇರಿ ಮುಂದೆ ನಗರದ ನಗರಸಭೆ ಮುಂದೆ ಸಮಾವೇಶಗೊಂಡ ಪ್ರತಿಭಟನಾಕಾರರು, ಸರ್ಕಾರದ ವಿರುದ್ಧ ಹಾಗೂ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದರು.

ರಾಜ್ಯಪತ್ರದಲ್ಲಿ ಪ್ರಕಟವಾಗಿರುವ ಆದೇಶದ ವಿರುದ್ಧವಾಗಿ ಬಿ-ಖಾತೆ ಹಾಗೂ ಎ-ಖಾತೆಗಳಿಗೆ ಸಾರ್ವಜನಿಕರಿಂದ ದುಪ್ಪಟ್ಟು ಹಣ ನಿಗದಿ ಮಾಡಿ ಸಾರ್ವಜನಿಕರಿಂದ ಹಣವನ್ನು ಲೂಟಿ ಮಾಡಲು ನಗರಸಭೆ ಅಧಿಕಾರಿಗಳು ಮುಂದಾಗಿದ್ದಾರೆ. ಕಚೇರಿಯಲ್ಲಿ ದಂಡ

ಉದಯವಾಹಿನಿ ಚಿತ್ರ

ವಸೂಲು ಮಾಡುತ್ತಿರುವುದು ಕಾನೂನು ಬಾಹಿರ, ಈ ರೀತಿ ದಂಡ ವಸೂಲು ಮಾಡಲು ಅಧಿಕಾರ ಕೊಟ್ಟವರು ಯಾರು? ರಾತ್ರಿ 7 ಗಂಟೆಯ ಮೇಲೆ ಕೆಲವು ಪಟ್ಟಭದ್ರ ಹಿತಾಸಕ್ತಿ ಜನರಿಗೆ ಇ ಸ್ವತ್ತುಗಳನ್ನು ಮಾಡಿಕೊಡುತ್ತಿರುವುದು ಏಕೆ ಅಕ್ರಮವಾಗಿ

ಇವರಿಗೆ ಬೆಂಬಲ ಸೂಚಿಸಿ ಗುಂಡಾಲ್ ಜಲಾಶಯದ ಹಿತರಕ್ಷಣಾ ರೈತ ಸಂಘದ ಅಧ್ಯಕ್ಷ ದಶರಥ ಮಾತನಾಡಿ, ಜಯಮರಿ ಅವರು ಸಾರ್ವಜನಿಕರಿಗೆ ನ್ಯಾಯ ದೊರಕಿಸಿಕೊಡಲು ಚಳವಳಿ ಆರಂಭಿಸಿದ್ದಾರೆ. ಇವರಿಗೆ ಬೆಂಬಲ ಸೂಚಿಸಿ ನಾವು ಈ ಧರಣಿಯಲ್ಲಿ ಭಾಗವಹಿಸಿದ್ದೇವೆ. ಜಯಮರಿ ಬೇಡಿ ಕೆಯಂತೆ ಜಿಲ್ಲಾಧಿಕಾರಿಗಳು ತಕ್ಷಣ ಈ ಬಗ್ಗೆ ತನಿಖೆ ನಡೆಸಿ ಸಂಬಂಧಪಟ್ಟ ಅಧಿಕಾರಿ ಹಾಗೂ ರಾತ್ರಿ ವೇಳೆ ಖಾತೆಗಳನ್ನು ಮಾಡಿಸುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದರು.

ಖಾತೆಗಳನ್ನು ಮಾಡಿಕೊಡುತ್ತಿದ್ದಾರೆ, ನಗರಸಭೆಯಲ್ಲಿ ಅಧಿಕಾರಿಗಳು ದಲ್ಲಾಳಿಗಳಾಗಿದ್ದಾರೆ ಹಾಗಾಗಿ ಇಂಥವರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಈ ಬಗ್ಗೆ ಜಿಲ್ಲಾಧಿಕಾರಿಗಳು ತನಿಖೆ ನಡೆಸಿ ನ್ಯಾಯ ದೊರಕಿಸಿಕೊಡುವವರೆಗೆ ನಾವು ಇಲ್ಲಿಂದ ಕದಲುವುದಿಲ್ಲ ಎಂದರು.

ಪ್ರತಿಭಟನೆಯಲ್ಲಿ ಭಾರತೀಯ ಮಾನವ ಹಕ್ಕುಗಳ ಜಾಗೃತಿ ಸೇನೆ ರಾಜ್ಯ ಜಂಟಿ ಕಾರ್ಯದರ್ಶಿ ಮಹೇಶ್, ಛಲವಾಧಿ ಮಹಾಸಭೆ ಚಾಮರಾಜು, ಡಿಎಸ್‌ಎಸ್ ಲಿಂಗರಾಜು, ಪುಟ್ಟಸ್ವಾಮಿ, ನಾಗರಾಜು, ಸುಮನ್, ಕೆ.ಆರ್.ಎಸ್ ಪ್ರಧಾನ ಕಾರ್ಯದರ್ಶಿ ಮಹೇಶ್ ಕಂದಹಳ್ಳಿ, ಜಿಲ್ಲಾಧ್ಯಕ ಗಿರೀಶ್, ಕುಮಾರ್, ಶಿವಪ್ರಕಾಶ್, ಯಳಂದೂರು ತಾಲ್ಲೂಕು ಅಧ್ಯಕ್ಷ ರಂಗರಾಜು ಇದ್ದರು.

ಮನೆ ಹಂಚಿಕೆಗೆ ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ, ಬಾಗೇಪಲ್ಲಿ

ನಿವೇಶನ, ಮನೆ ರಹಿತರಿಗೆ ನಿವೇಶನ ಕಲ್ಪಿಸಬೇಕು ಎಂದು ಒತ್ತಾಯಿಸಿ ಅಖಿಲ ಭಾರತ ಕಿಸಾನ್ ಸಂಘಟನೆ ಮುಖಂಡರು ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆ ಮಾಡಿದರು.

ಪಟ್ಟಣದ ಡಾ.ಎಚ್.ಎನ್.ವೃತ್ತದಿಂದ ಹೊರಟ ಪ್ರತಿಭಟನಾಕಾರರು, ಮುಖ್ಯರಸ್ತೆಯಲ್ಲಿ ಸಂಚರಿಸಿ ನಿವೇಶನ, ಮನೆ ಹಂಚಿಕೆ ಮಾಡದ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು.

ಸಂಘಟನೆಯ ರಾಜ್ಯ ಸಂಚಾಲಕ ಕೆ.ವಿ.ರಾಮಚಂದ್ರ ಮಾತನಾಡಿ, ಕೃಷಿಯನ್ನೇ ನಂಬಿದ ಕೃಷಿಕರು ಹಿಂಗಾರು, ಮುಂಗಾರು ಮಳೆ ಇಲ್ಲದೇ ಸಂಕಷ್ಟದಲ್ಲಿ ಇದ್ದಾರೆ. ಕೂಲಿಕಾರ್ಮಿಕರು ಪಟ್ಟಣ ಪ್ರದೇಶಗಳಿಗೆ ವಲಸೆ ಹೋಗಿದ್ದಾರೆ. ಕೃಷಿಕೂಲಿಕಾರ್ಮಿಕರಿಗೆ ಸರ್ಕಾರದಿಂದ ಕನಿಷ್ಠ ಮೂಲಸೌಲಭ್ಯ ನಿವೇಶನ, ಮನೆ ಇಲ್ಲದೇ ಪರದಾಡುತ್ತಿದ್ದಾರೆ. ತಾಲ್ಲೂಕು ಕಚೇರಿ, ಪಂಚಾಯಿತಿ ಪುರಸಭೆಗೆ ಅರ್ಜಿ ಸಲ್ಲಿಸಿದರೂ, ಆಡಳಿತ ಅಧಿಕಾರಿಗಳು, ಶಾಸಕರು ನಿವೇಶನ, ಮನೆ ಹಂಚಿಕೆ ಮಾಡಿಲ್ಲ ಎಂದು ಆರೋಪಿಸಿದರು. ತಾಲ್ಲೂಕಿನ ಕೆರೆ, ಕುಂಟೆ, ರಾಜಕಾಲುವೆಗಳನ್ನು ರಿಯಲ್ ಎಸ್ಟೇಟ್ ದಂಧೆಯವರು ಒತ್ತುವರಿ ಮಾಡಿಕೊಂಡಿದ್ದಾರೆ. ಕಂದಾಯ, ಸಬ್ ರಿಜಿಸ್ಟರ್ ಶಾಖೆಗಳಲ್ಲಿ ನಕಲಿ

ಉದಯವಾಹಿನಿ ಚಿತ್ರ

ದಾಖಲೆ ಸೃಷ್ಟಿ ಮಾಡಿ ಶ್ರೀಮಂತರಿಗೆ ಅನುಕೂಲ ಮಾಡಿದ್ದಾರೆ. ಸರ್ಕಾರಿ ಖರಾಬು, ಗೋಮಾಳ, ಭೂಮಿ, ಸ್ಮಶಾನ ಒತ್ತುವರಿ ಆಗಿದೆ. ಪಾತಬಾಗೇಪಲ್ಲಿಯಲ್ಲಿ 72 ಎಕರೆ ಸರ್ಕಾರಿ ಭೂಮಿಯಲ್ಲಿ 23 ವಾರ್ಡ್‌ಗಳ ನಿವೇಶನ ರಹಿತರಿಗೆ ಹಂಚಿಕೆ ಮಾಡಲಾಗುವುದು ಎಂದು ಅಧಿಕಾರಿಗಳು, ಶಾಸಕರು ಹೇಳಿಕೆ ನೀಡಿದ್ದಾರೆ.

ಆದರೆ ಇದುವರಿಗೂ ಹಂಚಿಕೆ ಮಾಡಿಲ್ಲ ಎಂದು ದೂರಿದರು. ಪ್ರತಿಭಟನಾ ಸ್ಥಳಕ್ಕೆ ಶಿರಸ್ತೆದಾರ್ ಮಂಜುನಾಥ್ ಆಗಮಿಸಿ ಮನವಿ ಸ್ವೀಕರಿಸಿದರು. ಸಂಘಟನೆಯ ತಾಲ್ಲೂಕು ಅಧ್ಯಕ್ಷ ರಾಮರೆಡ್ಡಿ, ಕಾರ್ಯದರ್ಶಿ ಆದಿಶೇಷು, ಆರ್.ಎಂ.ಚಲಪತಿ, ಪ್ರಮೀಳ, ವೆಂಕಟರಮಣ, ಮುಜಾಮಿಲ್. ಮುನೀರ್ ಖಾನ್, ತಾಸಿನ್ ತಾಜ್ ಇದ್ದರು

10ನೇ ಕನ್ನಡ ಸಾಹಿತ್ಯ ಸಮ್ಮೇಳನ: ಗೋಪಾಲಗೌಡ ಕಲ್ಮಮಂಜಲಿ ಆಯ್ಕೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಜಿಲ್ಲಾ ಮಟ್ಟದ 10ನೇ ಕನ್ನಡ ಸಾಹಿತ್ಯ ಸಮ್ಮೇಳನವು ಏಪ್ರಿಲ್ 8 ಮತ್ತು 9ರಂದು ನಗರದ ಕನ್ನಡ ಭವನದಲ್ಲಿ ನಡೆಯಲಿದೆ. ಸಮ್ಮೇಳನಾಧ್ಯಕ್ಷರಾಗಿ ಸಾಹಿತಿ ಗೋಪಾಲಗೌಡ ಕಲಮಂಜಲಿ ಅವರು ಆಯ್ಕೆ ಆಗಿದ್ದಾರೆ.

ಸಹಕಾರ ಅಭಿವೃದ್ಧಿ ಅಧಿಕಾರಿಯಾಗಿ ನಿವೃತ್ತರಾದ ಗೋಪಾಲಗೌಡ ಅವರು ಅವಿಭಜಿತ ಕೋಲಾರ ಜಿಲ್ಲೆಯ ಪ್ರಮುಖ ಸಾಹಿತಿಗಳಲ್ಲಿ ಒಬ್ಬರು. 1976ರಲ್ಲಿ ನಮ್ಮ

ಅಂತರಾಳದಿಂದ... EDITORIAL

ಕುಂಭಮೇಳ: ಪ್ರಶ್ನೆಗಳಿಗೆ ನುಣುಚಿಕೊಂಡ ಪ್ರಧಾನಿ

ಕುಂಭಮೇಳ ಮುಗಿದು ಎರಡು ವಾರಗಳು ಕಳೆದಿವೆಯಾದರೂ, ಗಂಗೆಯಲ್ಲಿ ತೇಲುತ್ತಿರುವ ಪ್ರಶ್ನೆಗಳಿಗೆ ಇನ್ನೂ ಮೋಕ್ಷ ಸಿಕ್ಕಿಲ್ಲ. ಸಂಸತ್‌ನಲ್ಲಿ ಪ್ರಧಾನಿ ಮೋದಿಯವರು ಕುಂಭಮೇಳದ ಕುರಿತಂತೆ ನೀಡಿದ ಹೇಳಿಕೆಯಲ್ಲಿ ಈ ಪ್ರಶ್ನೆಗಳಿಗೆಲ್ಲ ಮುಕ್ತಿ ಸಿಗಬಹುದು ಎಂದು ಜನರು ಭಾವಿಸಿದ್ದರು. ಪ್ರಧಾನಿ ತನ್ನ 13 ನಿಮಿಷಗಳ ಭಾಷಣದಲ್ಲಿ ಕುಂಭಮೇಳವನ್ನು, ಸ್ವದೇಶಿ ಚಳವಳಿ, ಸ್ವಾಮಿ ವಿವೇಕಾನಂದರ ಐತಿಹಾಸಿಕ ಭಾಷಣ, 1857ರ ಸ್ವಾತಂತ್ರ್ಯ ಸಂಗ್ರಾಮ, ಭಗತ್ ಸಿಂಗ್ ಪ್ರಾಣತ್ಯಾಗ, ಸುಭಾಶ್‌ಚಂದ್ರ ಬೋಸ್ ಅವರ ದಿಲ್ಲಿ ಚಲೋ, ಮಹಾತ್ಮಾಗಾಂಧಿಯವರ ದಂಡಿ ಮೆರವಣಿಗೆಯ ಜೊತೆಗೆ ಸಮೀಕರಿಸಿ ಮಾತನಾಡಿದರು. ಕುಂಭಮೇಳವು ಜಾಗೃತ ರಾಷ್ಟ್ರವೊಂದರ ಚೈತನ್ಯವನ್ನು ಪ್ರತಿಬಿಂಬಿಸುವ ಮೈಲಿಗಲ್ಲು ಎಂದು ಅವರು ಬಣ್ಣಿಸಿದರು. ಪ್ರಯಾಗರಾಜ್ ಸಂಗಮವು ಏಕ ಭಾರತ-ಶ್ರೇಷ್ಠ ಭಾರತ ಎಂಬ ನೋಟವನ್ನು ಮುಂದಿಟ್ಟಿದೆ ಎಂದು ಅವರು ಅಭಿಪ್ರಾಯ ಪಟ್ಟರು. ಇದೇ ಸಂದರ್ಭದಲ್ಲಿ ಕುಂಭಮೇಳದಲ್ಲಿ ಕಾಲ್ತುಳಿತಕ್ಕೆ ಬಲಿಯಾದ ಸಂತ್ರಸ್ತರ ಕುಟುಂಬಕ್ಕೆ ಒಂದು ಹನಿ ಕಣ್ಣೀರನ್ನು ಸುರಿಸುವ ಕೃಪೆಯನ್ನು ಅವರು ತೋರಲಿಲ್ಲ. ಈ ಬಗ್ಗೆ ಸ್ಪಷ್ಟೀಕರಣ ಕೇಳಲು ಮುಂದಾದ ವಿರೋಧ ಪಕ್ಷಗಳ ನಾಯಕರ ಮಾತುಗಳಿಗೆ ಸಂಸತ್‌ನಲ್ಲಿ ನಿರ್ಬಂಧವನ್ನು ವಿಧಿಸಲಾಯಿತು. ಪ್ರಯಾಗರಾಜ್ ಕುಂಭಮೇಳದ ಕುರಿತಂತೆ ಪ್ರಧಾನಿ ಮೋದಿಯ ಹೇಳಿಕೆಯನ್ನು ಗಮನಿಸಿದವರಿಗೆ ಒಂದು ಸ್ಪಷ್ಟವಾಗಿ ಬಿಡುತ್ತದೆ. ಪ್ರಧಾನಿಯವರಿಗೆ ಒಂದೋ ಈ ದೇಶದ ಸ್ವಾತಂತ್ರ್ಯ ಹೋರಾಟದ ಕುರಿತಂತೆ ಅಜ್ಞಾನವಿದೆ. ಆ ಕಾರಣದಿಂದಾಗಿ ಅವರು ಆ ಹೋರಾಟ, ತ್ಯಾಗ, ಬಲಿದಾನಗಳನ್ನು ಕುಂಭಮೇಳದ ಜೊತೆಗೆ ಸಮೀಕರಿಸಲು ಮುಂದಾದರು. ಎತ್ತಣ ಸ್ವಾತಂತ್ರ್ಯ ಸಂಗ್ರಾಮ ಎತ್ತಣ ಕುಂಭಮೇಳ ತಮ್ಮ ಮನೆ ಮಠಗಳನ್ನು ತೊರೆದು ದೇಶಕ್ಕಾಗಿ ಬೀದಿಗಿಳಿದು ಬ್ರಿಟಿಷರಿಂದ ಲಾಠಿ ಏಟು ತಿಂದು, ಪ್ರಾಣ ಅರ್ಪಿಸಿದ ಸ್ವಾತಂತ್ರ್ಯ ಹೋರಾಟಗಾರರಿಗೂ, ಕುಂಭಮೇಳದಲ್ಲಿ ಭಾಗವಹಿಸಿದ್ದ ನಾಗಸಾಧುಗಳಿಗೂ ಏನು ಸಂಬಂಧ ಜಲಿಯನ್ ವಾಲಾಬಾಗ್‌ನಲ್ಲಿ ಬ್ರಿಟಿಷರ ಗುಂಡೇಟಿಗೆ ಪ್ರಾಣತೊರೆದ ಹುತಾತ್ಮರ ಜೊತೆಗೆ, ಸರಕಾರದ ಬೇಜವಾಬ್ದಾರಿಯಿಂದ ಕುಂಭಮೇಳದಲ್ಲಿ ಕಾಲ್ತುಳಿತದಿಂದಾಗಿ ಪ್ರಾಣತೆತ್ತ ಅಮಾಯಕರನ್ನು ಹೋಲಿಸುವುದು ಎಷ್ಟು ಸರಿ? ಎಂದು ಜನತೆ ದೇಶದ ಪ್ರಧಾನಿಯನ್ನು ಕೇಳುತ್ತಿದ್ದಾರೆ. ಕುಂಭಮೇಳದಲ್ಲಿ ಜಗತ್ತು 'ಜಾಗೃತ ಭಾರತವನ್ನು ನೋಡಲಿಲ್ಲ. ಬದಲಿಗೆ ವಿಸ್ಮೃತಿಗೆ ತಳ್ಳಲ್ಪಟ್ಟು ಗಂಗಾನದಿಯನ್ನು ಮಾಲಿನ್ಯಕ್ಕೆ ತಳ್ಳಿದ ಅಜಾಗೃತ ಭಾರತವನ್ನು ಬೆಕ್ಕಸ ಬೆರಗಾಗಿ ನೋಡಿತು. ಕೆಲವರು ಹಿಂದೂಗಳ ಭಾವನೆಗಳಿಗೆ ಧಕ್ಕೆ ತರಲು ಯತ್ನಿಸುತ್ತಿದ್ದಾರೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಆದಿತ್ಯನಾಥ್ ಅವರು ಹೇಳಿಕೆ ನೀಡಿದರು. ಗಂಗಾನದಿಯ ಶುಚೀಕರಣಕ್ಕಾಗಿ ಸರಕಾರ 30,000 ಕೋಟಿ ರೂಪಾಯಿಗೂ ಅಧಿಕ ವೆಚ್ಚ ಮಾಡಿದೆ. ಈ ಹಿನ್ನೆಲೆಯಲ್ಲಿ ಸಂಸತ್‌ನಲ್ಲಿ ಪ್ರಧಾನಿ ಮೋದಿಯವರು ಗಂಗಾನದಿಯ ಸ್ಥಿತಿಗತಿಯ ಬಗ್ಗೆ ಸ್ಪಷ್ಟೀಕರಣ ನೀಡಬೇಕಾಗಿತ್ತು. ಆದರೆ ಈ ಬಗ್ಗೆ ಅವರು ಯಾವ ಹೇಳಿಕೆಯನ್ನೂ ನೀಡಲಿಲ್ಲ. ಕೇಂದ್ರ ಸರಕಾರದ ವ್ಯಾಪ್ತಿಯೊಳಗೆ ಬರುವ ಮಾಲಿನ್ಯ ನಿಯಂತ್ರಣ ಮಂಡಳಿ ನೀಡಿರುವ ವರದಿ ಸತ್ಯವೋ, ಸುಳ್ಳೋ ಎನ್ನುವ ಗೊಂದಲವನ್ನು ಅವರು ನಿವಾರಿಸಿಲ್ಲ. ಮಹಾತ್ಮಾ ಗಾಂಧೀಜಿಯವರ ದಂಡಿಯಾತ್ರೆಗೆ ಕುಂಭಮೇಳವನ್ನು ಮೋದಿ ಹೋಲಿಸಿದ್ದಾರೆ. ಆದರೆ, ಮಾಲಿನ್ಯಗೊಂಡ ಗಂಗಾನದಿಯನ್ನು ನೋಡಿದ್ದಿದ್ದರೆ ಮಹಾತ್ಮಗಾಂಧಿಯ ಪ್ರತಿಕ್ರಿಯೆ ಏನಿರಬಹುದಿತ್ತು ಎನ್ನುವುದನ್ನು ಊಹಿಸುವುದು ಕಷ್ಟವಿಲ್ಲ. ಒಂದು ವೇಳೆ ಮಹಾತ್ಮಾಗಾಂಧೀಜಿ ಬದುಕಿದ್ದಿದ್ದರೆ ಕಲುಷಿತಗೊಂಡ ಗಂಗಾನದಿಗಾಗಿ ಅವರು ಹೊಸದಾಗಿ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಳ್ಳುತ್ತಿದ್ದರು. ಗಾಂಧೀಜಿಯವರು ಭಾರತದ ಪುಣ್ಯ ಕ್ಷೇತ್ರಗಳ ಸ್ಥಿತಿಯನ್ನು ನೋಡಿ ಇನ್ನೆಂದಿಗೂ ಈ ಕಲುಷಿತ ಪ್ರದೇಶಗಳಿಗೆ ಕಾಲಿಡುವುದಿಲ್ಲ' ಎಂದು ಪ್ರತಿಜ್ಞೆ ಮಾಡಿದ್ದರು. ಅವರು ಭಾಗವಹಿಸಿದ ಮೊದಲ ಕಾಂಗ್ರೇಸ್ ಸಮ್ಮೇಳನದಲ್ಲಿ ಅಲ್ಲಿನ ಶೌಚಾಲಯಗಳ ಸ್ಥಿತಿಗತಿಯನ್ನು ನೋಡಿ ತಾವೇ ಶುಚಿಗೊಳಿಸಲು ಮುಂದಾಗಿದ್ದರು. ಕುಂಭಮೇಳದಲ್ಲಿ ಶೌಚ ವ್ಯವಸ್ಥೆ ಅದೆಷ್ಟು ಅವ್ಯವಸ್ಥೆಯಿಂದ ಕೂಡಿತ್ತು ಎನ್ನುವುದನ್ನು ಅದರಲ್ಲಿ ಭಾಗವಹಿಸಿರುವ ಹಿರಿಯ ಸಾಧುಗಳೇ ಅಸಮಾಧಾನ ಹಂಚಿಕೊಂಡಿದ್ದರು. ಅಲ್ಲಿನ ಪರಿಸರ ಮಾಲಿನ್ಯದಿಂದ ನಾಶವಾಗುತ್ತಿರುವ ನವಭಾರತವನ್ನು ಜಗತ್ತಿನ ಮುಂದಿಟ್ಟಿತು. ವಿಶ್ವಕ್ಕೆ ಭಾರತೀಯತೆಯ, ಹಿಂದೂಧರ್ಮದ ಹಿರಿಮೆಯನ್ನು ಸಾರಿದವರು ಸ್ವಾಮಿ ವಿವೇಕಾನಂದರು. ಇದೇ ಸಂದರ್ಭದಲ್ಲಿ ಧರ್ಮದ ಹೆಸರಿನಲ್ಲಿ ಪುರೋಹಿತರು ನಡೆಸುವ ಮೋಸ, ಶೋಷಣೆಯನ್ನು ಅಷ್ಟೇ ತೀವ್ರವಾಗಿ ಖಂಡಿಸಿದ್ದರು. ನಮ್ಮ ಪರಿಸರವನ್ನು ನದಿಗಳನ್ನು ಕೆಡಿಸುವ ಮೂಲಕ ಪರೋಕ್ಷವಾಗಿ ಹಿಂದೂ ಧರ್ಮಕ್ಕೆ ದ್ರೋಹ ಬಗೆಯುತ್ತಿದ್ದೇವೆ ಎನ್ನುವ ಸತ್ಯವನ್ನು ಅವರು ಆ ಕಾಲದಲ್ಲೇ ದೊಡ್ಡ ಧ್ವನಿಯಲ್ಲಿ ಹೇಳಿದ್ದರು. ಇದೀಗ ಪ್ರಧಾನಿ ಮೋದಿಯವರು ಕುಂಭಮೇಳವನ್ನು ಸ್ವಾಮಿ ವಿವೇಕಾನಂದರ ಶಿಕಾಗೋ ಭಾಷಣಕ್ಕೆ ಹೋಲಿಸಿದ್ದಾರೆ. ಕುಂಭಮೇಳದಲ್ಲಿ ಸ್ವಾಮಿ ವಿವೇಕಾನಂದರು ಪ್ರತಿಪಾದಿಸಿದ ಹಿಂದೂ ಧರ್ಮವನ್ನು ಅಣಕಿಸಲಾಯಿತು. ಹಾಗೆಯೇ ಏಕ ಭಾರತ'ವನ್ನು ಕುಂಭಮೇಳ ಪ್ರತಿನಿಧಿಸಿತು ಎಂದು ಮೋದಿಯವರು ಹೇಳಿದ್ದಾರೆ. ಕುಂಭಮೇಳದಲ್ಲಿ ಜನಸಾಮಾನ್ಯರಿಗೊಂದು ವ್ಯವಸ್ಥೆ ವಿಐಪಿಗಳಿಗೆ ಇನ್ನೊಂದು ವ್ಯವಸ್ಥೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸನ್ಯಾಸಿಯೊಬ್ಬರು ಬಹಿರಂಗವಾಗಿ ಆಕ್ರೋಶ ವ್ಯಕ್ತಪಡಿಸಿದ್ದರು. ಈ ವ್ಯವಸ್ಥೆಯೇ ಅಂತಿಮವಾಗಿ ಕಾಲ್ತುಳಿತದಂತಹ ದುರಂತಕ್ಕೆ ಕಾರಣವಾಯಿತು ಎಂದು ಆರೋಪಿಸಲಾಗುತ್ತಿದೆ. ಸ್ನಾನಕ್ಕೆ ಅಂಬಾನಿಗಳಿಗೊಂದು ವ್ಯವಸ್ಥೆ ಶ್ರೀಸಾಮಾನ್ಯನಿಗೆ ಇನ್ನೊಂದು ವ್ಯವಸ್ಥೆ ಮಾಡುವುದು 'ಏಕ ಭಾರತ'ದ ಲಕ್ಷಣವೆ ಎಂದು ಜನಸಾಮಾನ್ಯರು ಕೇಳುತ್ತಿದ್ದಾರೆ.

> **ಪ್ರಯಾಗರಾಜ್‌ನ ಗಂಗಾನದಿಯು ಭಾರೀ ಪ್ರಮಾಣದ ಮಲದ ಅಂಶಗಳಿಂದ ಕಲುಷಿತಗೊಂಡಿದೆ ಮತ್ತು ಅದು ಸ್ನಾನಕ್ಕೆ ಮತ್ತು ಕುಡಿಯುವುದಕ್ಕೆ ಯೋಗ್ಯವಲ್ಲ ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ನೀಡಿದ ವರದಿಯು ಕೂಡ ಸರಕಾರವನ್ನಾಗಲಿ, ಪ್ರಯಾಗ್ ರಾಜ್‌ನಲ್ಲಿ ಸೇರಿದ ಭಕ್ತರನ್ನಾಗಲಿ ಜಾಗೃತಗೊಳಿಸಲಿಲ್ಲ. ಉತ್ತರ ಪ್ರದೇಶ ಸರಕಾರ ಈ ಅಂಶವನ್ನು ಭಕ್ತರಿಂದ ಮುಚ್ಚಿಟ್ಟು ಅವರನ್ನು ಗಂಗಾ ಸ್ನಾನಕ್ಕೆ ಪ್ರೇರೇಪಿಸಿತು. ವರದಿ ಬಹಿರಂಗವಾದಾಗಲೂ ತನ್ನ ತಪ್ಪು ತಿದ್ದಿಕೊಳ್ಳದ ಸರಕಾರ, ವರದಿಯನ್ನು ನೀಡಿದ ಮಂಡಳಿಯ ವಿರುದ್ಧವೇ ಆಕ್ರೋಶ ವ್ಯಕ್ತಪಡಿಸಿತು.**

ವಿಶ್ವಾಸ್.ಡಿ.ಗೌಡ
ಉದಯವಾಹಿನಿ, ವಿಶೇಷ



ಕಾವ್ಯ ಗೊಂಚಲು (ನೂರ್ ಜಹಾನ್ ರವರ ನೂರಾರು ಕವಿತೆಗಳು) ಇದು ನೂರ್ ಜಹಾನ್ ರವರ ನೂರಾರು ಕವಿತೆಗಳ ಕವನ ಸಂಕಲನ. ಈ ಕೃತಿಯಲ್ಲಿ ಕವಯತ್ರಿಯು ತಮ್ಮ ಸುತ್ತಮುತ್ತಲಿನ ಪರಿಸರ ಹಾಗೂ ಪ್ರಚಲಿತ ಘಟನೆಗಳನ್ನು ಕುರಿತು ನೂರಾರು ಕವಿತೆಗಳನ್ನು ಕವನಸಂಕಲನದಲ್ಲಿ ಬರೆದಿದ್ದಾರೆ. ಬೀದರದ ಪೂಜಾ ಪ್ರಕಾಶನ ಈ ಕೃತಿಯನ್ನು ಪ್ರಕಟಣೆ ಮಾಡಿದೆ. ಈ ಕೃತಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಲೇಖಕರಾದ ಸಿದ್ಧರಾಮ ಹೊನ್ಕಲ್ ಅವರು ಮುನ್ನುಡಿ ಬರೆದಿದ್ದಾರೆ.

ಈ ಕೃತಿಯಲ್ಲಿ ಪ್ರಕಟಣೆಯಾಗಿರುವ ಎಲ್ಲಾ ಕವನಗಳು ಕವಯತ್ರಿಯ ಭಾವಲೋಕದಿಂದ ಮೂಡಿಬಂದಿವೆ. ಇಲ್ಲಿರುವ ಕೆಲವು ಕವಿತೆಗಳು ರಾಜ್ಯದ ಮತ್ತು ಜಿಲ್ಲಾ ಹಂತದ ಪತ್ರಿಕೆಗಳಲ್ಲಿ ಪ್ರಕಟಗೊಂಡಿದೆ. ಕವಯತ್ರಿಯು ತುಳು ಊರಿಗೆ ಹೋದ ಸಂದರ್ಭದಲ್ಲಿ ಅವರು ಉಳಿದುಕೊಂಡ ಮನೆಯ ಮುಂದೆ ಇಂದು ಬೋಳುಮರ, ಅಲ್ಲಿನ ವಾತಾವರಣವನ್ನು ನೋಡಿ ಅನೇಕ ಕವನಗಳನ್ನು ಈ ಕೃತಿಯಲ್ಲಿ ರಚಿಸಿದ್ದಾರೆ.

ಕವಯತ್ರಿ ಮೈಸೂರಿನ ಚಾಮುಂಡಿ ಬೆಟ್ಟವನ್ನು ನೋಡಲು ಹೋಗಿದ್ದ ಸಂದರ್ಭದಲ್ಲಿ ಪ್ರಕೃತಿಯ ಅದಕ್ಕೆ ಮನಸೋತು ಅನೇಕ ಕವನಗಳನ್ನು ಪ್ರಕೃತಿ ಕುರಿತು ಬರೆದಿದ್ದಾರೆ. ವರದಕ್ಷಿಣೆಗೆ ಬಲಿಯಾದ ಒಂದು ಹೆಣ್ಣಿನ ಜೀವನ ಕುರಿತು ಕವಯತ್ರಿಯು ಇಲ್ಲಿ ಕವನವನ್ನು ಬರೆದಿದ್ದಾರೆ. ಈ ಕವನ ಸಂಕಲನದಲ್ಲಿ ಹೆಚ್ಚಾಗಿ ಮಹಿಳಾ ಶೋಷಣೆ, ಅವರ ನೋವು-ನಲಿವು, ದುಃಖ ಸಂಕಷ್ಟಗಳನ್ನು ಕುರಿತು ಅನೇಕ ಕವಿತೆಗಳನ್ನು ಕವಯತ್ರಿಯ ಬರೆದಿದ್ದಾರೆ. ಅಷ್ಟೇ ಅಲ್ಲದೆ ದೇಶಪ್ರೇಮ, ಕನ್ನಡ ಪ್ರೇಮ, ಈ ನಾಡು, ನುಡಿ, ಜಲ ಕುರಿತು ಅನೇಕ ಕವಿತೆಗಳನ್ನು ಬರೆದಿದ್ದಾರೆ. ಈ ಕೃತಿಯಲ್ಲಿ ಕೆಲವೊಂದು ಕವನಗಳು ಹಿಂದಿ ಹಾಗೂ ಉರ್ದುವಿನಿಂದ ಅನುವಾದ ಮಾಡಿದ್ದಾರೆ. ಕಾವ್ಯ ಗೊಂಚಲು ಕವನ ಸಂಕಲನದ ನೂರಾರು ಕವಿತೆಗಳು ಕವಯತ್ರಿಯ ಮನಸ್ಸಿನಿಂದ ಭಾವನೆಗಳ ಮೂಲಕ ಸಾಹಿತ್ಯ ಕೊಂಡಿಯು ಕಳಚದ ಹಾಗೆ ಬರೆದಿದ್ದಾರೆ.

ಇಲ್ಲಿನ ಕೆಲವು ಕವನಗಳು ಮಹಿಳೆಯರಿಗೆ ಆಗುವ ಶೋಷಣೆಗಳ ಹಾಗೂ ವರದಕ್ಷಿಣೆ ಕಿರುಕುಳದ ನೋವುಗಳನ್ನು ಎಲ್ಲರ ಮನಸ್ಸು ಮುಟ್ಟುವ ಹಾಗೆ ಕವಯತ್ರಿಯು ಬರೆದಿದ್ದಾರೆ. ಈ ಕವನ ಸಂಕಲನವು ಅನೇಕರಿಗೆ ಸ್ಫೂರ್ತಿಯಾಗಬಹುದು. ಎಲ್ಲರೂ ಕನ್ನಡ ಸಾಹಿತ್ಯದ ಪುಸ್ತಕಗಳನ್ನು ಕೊಂಡು ಓದಿ ಹಾಗೂ ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಿ.

ಕೃತಿಯಲ್ಲಿರುವ ಮಾಹಿತಿಗಳು

ನನ್ನ ಜನರು, ನವಿಲಿನ ನಾಟ್ಯ, ಮಗು, ನಾವೆಲ್ಲರೂ ಒಂದೇ, ಕಾಯಕಯೋಗಿ ಬಸವಣ್ಣ, ಕನಸು, ರಾಜಕಾರಣಿಗಳು, ನನ್ನ ಅಪ್ಪ, ಕನ್ನಡನಾಡು, ವಿಜಯನಗರ ಸಾಮ್ರಾಜ್ಯ, ಆಸೆ, ಪ್ರಕೃತಿ ಪ್ರೇಮ, ಗಡಿನಾಡ ಸೈನಿಕನಿಗೆ, ಮೊದಲ ಮಳೆ, ಜೊತೆ, ದೇವರ ಗಾಳಿ, ಜೀವನ ದರ್ಶನ, ಅಳಲು, ಅರಿವು, ನೋವನ್ನು ಅರಿಯದವರು, ಅಮ್ಮ ನಾನಾಗದೇ ಹೋದೆನಲ್ಲ, ಕವಿತೆ, ಭೂಕಂಪ, ಅಂದು-ಇಂದು, ಈ ಜೀವನ, ಕನಸಿನ ಲೋಕ, ಜೀವನ ಸಂಗಾತಿ, ಪ್ರೀತಿಯ ಹಾದಿಯಲ್ಲಿ, ಮರೆತು ಹೋದೆ, ನಡೆದು ಬಂದ ದಾರಿ, ಮುಡಿಯಿಂದ ಬಿದ್ದ ಹೂವು, ನಾಟಕ, ಗುಬ್ಬಿ, ಶಾಮ, ಹೃದಯ ಮಂದಿರಗಳು, ಈಸಬೇಕು ಇದ್ದು ಜಯಿಸಬೇಕು, ನವಿಲಿಗೆ ಮೀರಾಳ ನಿವೇದನೆ, ಕೊಳಚೆ ಪ್ರದೇಶದ ಮಹಿಳೆ, ಮತ್ತೆ ನಕ್ಷತ್ರ ಒಂದು ಊರುಳಿ ಹೋಯಿತು ಸೇರಿ ನೂರಕ್ಕೂ ಹೆಚ್ಚಿನ ಕವಿತೆಗಳು ಕವನ ಸಂಕಲನದಲ್ಲಿ ಪ್ರಕಟವಾಗಿದೆ.

ಮೆಟ್ರೋ: ಹೊಸ ಉಪಕ್ರಮವನ್ನು ಬಳಕೆಮಾಡಲು ಮುಂದು

ಪ್ರಯಾಣಿಕರ ಸಂಖ್ಯೆ ಇಳಿಮುಖ

ಉದಯ ವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ ಪ್ರಯಾಣ ದರ ಹೆಚ್ಚಳ ನಂತರ ಪ್ರಯಾಣಿಕರ ಸಂಖ್ಯೆ ಇಳಿಮುಖವಾಗಿದೆ ಎಂಬ ಕೂಗು ಕೇಳಿಬರುತ್ತಿರುವುದರ ಮಧ್ಯೆ, ಬೆಂಗಳೂರು ಮೆಟ್ರೋ ರೈಲು ನಿಗಮ ಲಿಮಿಟೆಡ್ ದೆಹಲಿ ಮೆಟ್ರೋ ಆರಂಭಿಸಿದ್ದ ಹೊಸ ಉಪಕ್ರಮವನ್ನು ಅನುಸರಿಸಲು ಮುಂದಾಗಿದೆ.

ಪೀಕ್ ಅವರ್ ಅಲ್ಲದ ಸಮಯಗಳಲ್ಲಿ ನಿರ್ದಿಷ್ಟ ವಿಭಾಗಗಳಲ್ಲಿ ಪಾರ್ಸೆಲ್‌ಗಳು, ಪತ್ರಗಳನ್ನು ಸಾಗಿಸುವ ಆಯ್ಕೆಯನ್ನು ಪರಿಶೀಲಿಸುತ್ತಿದೆ. ಲಾಜಿಸ್ಟಿಕ್ಸ್ ಸೇವಾ ಪೂರೈಕೆದಾರರಿಗೆ ಪಾರ್ಸೆಲ್‌ಗಳನ್ನು ಸಾಗಿಸಲು ಕಡಿಮೆ ಪ್ರಯಾಣಿಕರಿರುವ ಕೆಲವು ರೈಲುಗಳಲ್ಲಿ ಕೊನೆಯ ಕೋಚ್‌ನ್ನು ಬಳಸಲು ಬ್ಲೂಡಾರ್ಟ್ ಜೊತೆ ಒಪ್ಪಂದ ಮಾಡಿಕೊಂಡಿರುವುದಾಗಿ ದೆಹಲಿ ಮೆಟ್ರೋ ಇತ್ತೀಚೆಗೆ ಘೋಷಿಸಿಕೊಂಡಿತ್ತು.

ಇಂತಹ ಸಾಧ್ಯತೆಗಳನ್ನು ನಮ್ಮ ಮೆಟ್ರೊದಲ್ಲಿ ಕೂಡ ತರಲು ನೋಡಲಾಗುತ್ತಿದೆ ಎಂದು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಎಂ ಮಹೇಶ್ವರ್ ರಾವ್ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ಪತ್ರಿಕೆಗೆ ತಿಳಿಸಿದ್ದಾರೆ. ಈ ಆಯ್ಕೆಯನ್ನು ಅನ್ವೇಷಿಸಲು ಮತ್ತು ಖಾಸಗಿ ಸರಕು ನಿರ್ವಾಹಕರೊಂದಿಗೆ ಮಾತುಕತೆ ನಡೆಸಲು ನಾನು ಸಂಪರ್ಕ ತಂಡವನ್ನು ಕೇಳಿದ್ದೇನೆ. ಇದು ಯಶಸ್ವಿಯಾದರೆ, ಮುಂದಿನ ಎರಡು ತಿಂಗಳೊಳಗೆ ಅಂತಹ ಸೇವೆಯನ್ನು ಪ್ರಾರಂಭಿಸಲು ನಾವು ನೋಡುತ್ತಿದ್ದೇವೆ ಎಂದರು. ಕಳೆದ ಕೆಲವು ವರ್ಷಗಳಿಂದ ಬಿಎಂಆರ್‌ಸಿಎಲ್ ಪ್ರಯಾಣಿಕರ ಟಿಕೆಟ್ ಹೊರತಾಗಿ ಬೇರೆ ಮೂಲಗಳಿಂದ ಆದಾಯ ನೋಡುತ್ತಿದೆ. ಕೆ ಆರ್ ಪುರ ಮತ್ತು ಮೆಜೆಸ್ಟಿಕ್ ನಿಲ್ದಾಣಗಳಲ್ಲಿ ಸಮಗ್ರ ಆಸ್ತಿ ಅಭಿವೃದ್ಧಿ, ನಿಲ್ದಾಣಗಳ ಒಳಗೆ ರಿಟೇಲ್ ಸ್ಥಳಗಳು ಮತ್ತು ರೈಲುಗಳ ಹೊರಭಾಗಗಳಲ್ಲಿ ಜಾಹೀರಾತು ಪ್ರಕಟಣೆ ಮೂಲಕ ನಾವು ಸಂಪನ್ಮೂಲಗಳನ್ನು ಕ್ರೋಢೀಕರಿಸುತ್ತಿದ್ದೇವೆ. ಪ್ರಯಾಣಿಕರ ಟಿಕೆಟ್ ದರವಲ್ಲದೆ ಇತರ ಆದಾಯವನ್ನು ಕ್ರೋಢೀಕರಿಸಲು ನಾವು ಬಹು ಟೆಂಡರ್‌ಗಳನ್ನು ಕರೆದಿದ್ದೇವೆ ಎಂದು ಬಿಎಂಆರ್‌ಸಿಎಲ್‌ನ ಆಸ್ತಿ ನಿರ್ವಹಣೆ ಮತ್ತು ಆಸ್ತಿ ಅಭಿವೃದ್ಧಿ ಕಾರ್ಯನಿರ್ವಾಹಕ ನಿರ್ದೇಶಕಿ ಕಲ್ಪನಾ ಕಟಾರಿಯಾ ಹೇಳುತ್ತಾರೆ.

ನೀವೂ ಬ್ರೇಕ್‌ಫಾಸ್ಟ್‌ಗೆ ಪೋಹಾ ತಿಂತೀರಾ?

ಪೋಹಾವನ್ನು ನಮ್ಮಲ್ಲಿ ಬಹುತೇಕರು ಬೆಳಗಿನ ಉಪಹಾರಕ್ಕೆ ಸೇವಿಸುತ್ತಾರೆ. ಪೋಹಾದಲ್ಲಿ ಕಾರ್ಬೋಹೈಡ್ರೇಟ್ ಹೆಚ್ಚು ಇರುತ್ತದೆ ಹಾಗಾಗಿ ಇದು ಆರೋಗ್ಯಕ್ಕೆ ಒಳ್ಳೆಯದಲ್ಲ ಎನ್ನುತ್ತಾರೆ. ಇದ್ರಿಂದ ಶುಗರ್ ಲೆವೆಲ್ ಹೆಚ್ಚುತ್ತಂತೆ ಗೊತ್ತಾ ಬಹಳಷ್ಟು ಜನರು ತಾವು ಡಯೆಟ್‌ನಲ್ಲಿದ್ದೇವೆ ಹಾಗಾಗಿ ಅಕ್ಕಿಯ ಆಹಾರ ಅಥವಾ ಅಕ್ಕಿಯಿಂದ ತಯಾರಿಸಿದ ಯಾವುದೇ ಆಹಾರವನ್ನು ಸೇವಿಸುವುದಿಲ್ಲ ಎನ್ನುತ್ತಾರೆ. ಹಾಗಾದ್ರೆ ಬ್ರೇಕ್‌ಫಾಸ್ಟ್‌ಗೆ ಏನನ್ನು ತಿಂತೀರಿ ಎಂದರೆ ಪೋಹಾ ತಿನ್ನೋದಾಗಿ ಹೇಳುತ್ತಾರೆ. ಪೋಹಾ ಅಂದರೆ ಅವಲಕ್ಕಿ. ಅವಲಕ್ಕಿಯಿಂದ ತಯಾರಿಸಿದ ಚಿತ್ರಾನ್ನವನ್ನು ಸೇವಿಸುತ್ತಾರೆ. ಆದರೆ ಪೋಹಾ ಕೂಡಾ ಅಕ್ಕಿ ಎನ್ನುವುದು ಬಹಳಷ್ಟು ಮಂದಿಗೆ ಗೊತ್ತಿಲ್ಲ.

ಪೋಹಾ ಒಳ್ಳೆಯದಲ್ವಾ: ನಿಮ್ಮ ದಿನವನ್ನು ಪ್ರಾರಂಭಿಸಲು ಹೆಚ್ಚು ಪೌಷ್ಟಿಕಾಂಶವುಳ್ಳದ್ದನ್ನು ಸೇವಿಸುವುದು ಒಳ್ಳೆಯದು. ಆದರೆ ನೀವು ಉಪಾಹಾರಕ್ಕೆ ಪೋಹಾ ಸೇವಿಸಬೇಕೇ ಎಂದರೆ ಖಂಡಿತ ಇಲ್ಲ ಎನ್ನುತ್ತಾರೆ ಮೆಟ್ರೊಪೊಲಿಸ್ ಹೆಲ್ತ್‌ಕೇರ್‌ನ ಕಾರ್ಯನಿರ್ವಾಹಕ ಅಧ್ಯಕ್ಷೆ ಮತ್ತು ನಿರ್ದೇಶಕಿ ಅಮೀರಾ ಶಾ. ಪೋಹಾ ನಿಮ್ಮ ಹೊಟ್ಟೆಯನ್ನು ತುಂಬಿಸಬಹುದು ಆದರೆ ಅದು ಆರೋಗ್ಯಕರವಲ್ಲದ ಎಂದು ಹೇಳಿದ್ದಾರೆ.

ಪೋಹಾ ಶುದ್ಧ ಅಕ್ಕಿ: ಪೋಹಾ ಒಂದು ಗ್ಲುಟನ್-ಮುಕ್ತ ಆಯ್ಕೆಯಾಗಿದ್ದರೂ, ಇದನ್ನು ಅಕ್ಕಿ ಪದರಗಳಿಂದ ತಯಾರಿಸಲಾಗಿರುವುದರಿಂದ, ಇದು ರಕ್ತ

ರಕ್ತದಾನವೇ ಶ್ರೇಷ್ಠದಾನ: ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್

• ಉದಯವಾಹಿನಿ, ಚಿತ್ರದುರ್ಗ

ರಕ್ತದಾನವೇ ಶ್ರೇಷ್ಠದಾನವಾಗಿದ್ದು, ರಕ್ತದಾನ ಮಾಡುವ ಮೂಲಕ ಇನ್ನೊಂದು ಜೀವ ಉಳಿಸಲು ಮುಂದಾಗಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ದವಳಗಿರಿ ಬಡಾವಣೆಯ ಗಾಯತ್ರಿ ಶಿವರಾಮ್ ಇನ್ನರ್ ವ್ಹೀಲ್ ಭವನದಲ್ಲಿ ಈಚೆಗೆ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಇನ್ನರ್ ವ್ಹೀಲ್ ಕ್ಲಬ್, ವಾಸವಿ ಕ್ಲಬ್ ಪೋರ್ಟ್ ಸಹಯೋಗದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಉದಯವಾಹಿನಿ ಚಿತ್ರ

ಶಿಬಿರದಲ್ಲಿ ಮಹಿಳೆಯರು ಸೇರಿ ಒಟ್ಟು 18 ಜನ ರಕ್ತದಾನ ಮಾಡಿದರು. ರೆಡ್ ಕ್ರಾಸ್ ಸಂಸ್ಥೆಯ ಉಪಸಭಾಪತಿ ಅರುಣ್ ಕುಮಾರ್ ಅವರು 43ನೇ ಬಾರಿ ರಕ್ತದಾನ ಮಾಡಿದರು.

ಮಹಿಳಾ ದಿನಾಚರಣೆ ಅಂಗವಾಗಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಜೆ.ವೈಶಾಲಿ, ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಎಸ್. ಸುಧಾದೇವಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ರೇಖಾ, ಶಿಕ್ಷಣ ಸಂಯೋಜಕರಾದ ಸೈಯದ ಸಮೀರ ಅಪಷನ್, ಎಸ್‌ಜೆಎಂ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ಸಹಾಯಕ ಪ್ರಾಧ್ಯಾಪಕಿ ಡಾ.ನಾಜಿರಾ ಉನ್ನಿಸ, ಸ್ತ್ರೀರೋಗ ತಜ್ಞೆ ಡಾ.ರೂಪಶ್ರೀ, ಕೋಟೆ ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸ್‌ಪೇಕ್ಟರ್ ರುಕ್ಕಮ್ಮ ಅವರನ್ನು ಸನ್ಮಾನಿಸಲಾಯಿತು.

ಜೀವ ಉಳಿಸಲು ಮುಂದಾಗಿ

ಅಮೂಲ್ಯ ಜೀವ ಉಳಿಸಲು ಆರೋಗ್ಯವಂತರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ರಕ್ತದ ಅವಶ್ಯಕತೆಯಿಂದ ಬಳಲುವ ಜೀವ ಉಳಿಸಲು ಮುಂದಾಗಬೇಕು. ಮುಂದಿ ದಿನಗಳಲ್ಲಿ ಇನ್ನೂ ಹೆಚ್ಚು ರಕ್ತದಾನ ಶಿಬಿರಗಳು ಆಯೋಜಿಸುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ರೆಡ್‌ಕ್ರಾಸ್ ಸಭಾಪತಿ ಗಾಯತ್ರಿ ಶಿವರಾಮ್, ವೀರಶೈವ ಅರ್ಬನ್ ಕೋ-ಆಪರೇಟಿವ್ ಸೊಸೈಟಿ ಅಧ್ಯಕ್ಷ ಶಿವಕುಮಾರ್ ಪಾಟೀಲ್, ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಪೂಜಾ ಪ್ರದೀಪ, ವಾಸವಿ ಕ್ಲಬ್ ಚಿತ್ರದುರ್ಗ ಪೋರ್ಟ್ ಅಧ್ಯಕ್ಷೆ ರಾಜೇಶ್ವರಿ ಸಿದ್ದರಾಮ್, ರೆಡ್ ಕ್ರಾಸ್ ಕಾರ್ಯದರ್ಶಿ ಮಜಹರ್ ಉಲ್ಲಾ, ಖಜಾಂಚಿ ವಿರೇಶ್, ನಿರ್ದೇಶಕರಾದ ಡಾ.ಮಧುಸೂದನ್ ರೆಡ್ಡಿ, ಶಿವರಾಮ್, ಸುರೇಶ್, ವೀರಭದ್ರಸ್ವಾಮಿ ಸೇರಿದಂತೆ ಮತ್ತಿತರರು ಇದ್ದರು.

ಕುಡಿಯುವ ನೀರಿನ ವ್ಯವಸ್ಥೆಗೆ ಯಾಕಾಪೂರ ಒತ್ತಾಯ

• ಉದಯವಾಹಿನಿ, ಚಿಂಚೋಳಿ

ಕಲಬುರಗಿ ಜಿಲ್ಲೆ ನಗರ ಸೇರಿದಂತೆ ಪಟ್ಟಣ ಪ್ರದೇಶಗಳಲ್ಲಿ, ಗ್ರಾಮ ಪಂಚಾಯತ ವ್ಯಾಪ್ತಿಯ ಪ್ರದೇಶಗಳಲ್ಲಿ ಜನದಟ್ಟನೆ ಇರುವ ಪ್ರದೇಶದ ಸಾರ್ವಜನಿಕ ಸ್ಥಳಗಳಲ್ಲಿ ತಂಪಾದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲು

ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಬೇಕು ಎಂದು ಹಿರಿಯ ಸಮಾಜ ಸೇವಕ ರಮೇಶ ಯಾಕಾಪೂರ ಒತ್ತಾಯಿಸಿದರು.

ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಒತ್ತಾಯಿಸಿದ ಅವರು, ಜಿಲ್ಲೆಯ ಪಟ್ಟಣ ಪ್ರದೇಶಗಳಲ್ಲಿ ಮತ್ತು ಆಯಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಜನರ ಓಡಾಟ ಇರುವ ಸಾರ್ವಜನಿಕ ಸ್ಥಳಗಳಲ್ಲಿ ರಸ್ತೆಗಳ ಪಕ್ಕ ಜನರು ಕುಡಿಯುವ ನೀರಿನ ದಾಹ ಆರಿಸಿ ಕೊಳ್ಳುವ ತಂಪಾದ ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಸಂಬಂಧಪಟ್ಟ ಪುರಸಭೆ, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ಆದೇಶ ಹೊರಡಿಸಬೇಕು. ದಿನ ದಿನಕ್ಕೆ ಬಿಸಿಲಿನ ಶಕೆ ಹೆಚ್ಚಾಗುತ್ತಿದ್ದು ಜನರಿಗೆ ಬಾಯಾರಿಕೆ ಆಗುತ್ತಿರುವುದು ಸಹಜವಾಗಿದೆ, ಆದ್ದುರಿಂದ ಈ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

ಎಲ್ಲಾ ಜಾತಿ ಧರ್ಮದವರು ಸಹೋದರ ಭಾವನೆಯಿಂದ ಬಾಳಿ

ಪೂಜ್ಯ ಶ್ರೀ ಡಾ.ಬಸವಲಿಂಗ ಅವಧೂತರ ಅಭಿಮತ

• ಉದಯವಾಹಿನಿ, ಚಿಂಚೋಳಿ

ದೇಶದಾದ್ಯಂತ ಎಲ್ಲಾ ಜಾತಿ ಧರ್ಮದವರು ಸಹೋದರ ಭಾವನೆಗಳಿಂದ ಬಾಳಬೇಕು, ಇಲ್ಲಾದಿದರೆ ದೇಶದಲ್ಲಿ ಕೆಟ್ಟ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ದೇಗಲಮಡಿ ಆಶ್ರಮದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಡಾ.ಬಸವಲಿಂಗ ಅವಧೂತರು ಭವಿಷ್ಯ ನುಡಿದರು. ತಾಲ್ಲೂಕಿನ ದೇಗಲಮಡಿ ಗ್ರಾಮದ

ಪೂಜ್ಯ ಶ್ರೀ ಬಸವಲಿಂಗ ಅವಧೂತರ ಆಶ್ರಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ್ಯಾಂತ ಅತಿ ಹೆಚ್ಚು ಧಾರ್ಮಿಕ ಸಭೆಗಳು ಜರುಗಬೇಕು, ಎಲ್ಲಾ ಸಮುದಾಯದವರು ಐಕ್ಯತೆ, ಸಹಬಾಳ್ವೆಯಿಂದ ಬಾಳಬೇಕು, ಸಮಾಜದಲ್ಲಿ ಜಾತಿಯ ವಿಷಬೀಜ ಬಿತ್ತರಿಸುವುದರಿಂದ ಸಮಾಜದಲ್ಲಿ ಒಡಕುವುಂಟಾಗುತ್ತಿದೆ ಅಂಥವರಿಂದ ದೂರವಿರಬೇಕು, ಇದರಿಂದ ದೇಶಕ್ಕೆ ಹಾನಿಯಾಗಲಿದೆ ಎಂದರು.

ಮುಂಬರುವ ಸನ್ನಿವೇಶಗಳು ನೋಡಿದರೆ ಪೀಳಿಗೆಗೆ ಸಂಕಷ್ಟ ಎದುರಾಗಲಿದೆ, ಪ್ರತಿಯೊಂದು ಓಣಿಗಳಲ್ಲಿ ಆಸ್ವತ್ರೆ ಪ್ರಾರಂಭ ಮಾಡುವ ಕಾಲ ಬರಲಿದೆ, ಗಿಡಮರಗಳು ಬೆಳೆಸಿ ಸ್ವಚ್ಚತೆ ಕಾಪಾಡಿ ಎಲ್ಲಾ

ಉದಯವಾಹಿನಿ ಚಿತ್ರ

ಜಾತಿಧರ್ಮವರು ನಾವೆಲ್ಲರೂ ಒಂದೇ ಎಂಬುವುದು ಅರಿತುಕೊಳ್ಳಬೇಕು ಗುರು-ಹಿರಿಯರಿಗೆ ಗೌರವಿಸಿ ತಂದೆ ತಾಯಿಯರನ್ನು ಪೋಷಣೆ ಮಾಡಿ, ತಾವು ಬದುಕಿ ಮತ್ತೊಬ್ಬರಿಗೆ ಬದುಕಲು ಕೊಡಿ ಯಾರ ಕಾರ್ಯವೈಖರಿ ಅವರಿಗೆ ಮಾಡಲು ಬಿಡಿ ಇದು ಮಾನವ ಧರ್ಮವಾಗಿದೆ. ಕೆಟ್ಟವರಿಂದ ದೂರವಿದ್ದು ಒಳ್ಳೆಯವರ ಬೇರೆತು ಇರಬೇಕು, ಈಗಾಗಲೇ ಜಾತಿಗಳ ಮಧ್ಯೆ ನಡೆಯುತ್ತಿರುವ ಸನ್ನಿವೇಶಗಳು ನೋಡಿದರೆ ಮುಂಬರುವ ಪಿಳಿಗೆಗೆ ಸಂಕಷ್ಟ ಎದುರಾಗಲಿದೆ, ಬುದ್ದಿಜೀವಿಗಳು ಇಂಥಹ ಘಟನೆಗಳಿಗೆ ಕಡಿವಾಣ ಹಾಕಬೇಕು.

ಧಾರ್ಮಿಕತೆಯಲ್ಲಿ ನಂಬಿಕೆವಿಟ್ಟು ಎಲ್ಲಾ ದೇವರನ್ನು ನಂಬಿ ದೇವರ ಧ್ಯಾನ ಜಪ ಮಾಡಿ ಸರಳ ಜೀವನ ಸಾಧಿಸಬೇಕು, ಎಲ್ಲಾ ಜಾತಿಗಳು ಒಂದೇ ಮಾನವೀಯತೆಯಿಂದ ಬಾಳಿ, ನಾನು ಕರ್ನಾಟಕ, ಆಂಧ್ರ ಪ್ರದೇಶ, ಮಹಾರಾಷ್ಟ್ರ ರಾಜ್ಯಗಳಿಗೆ ತೆರಳಿ ದುಶ್ಚಟದಿಂದ ಕೂಡಿದ 10 ಲಕ್ಷಕ್ಕಿಂತ ಹೆಚ್ಚು ಜನರಿಗೆ ಜಾಗೃತಿ ಮೂಡಿಸಿ ದುಶ್ಚಟಗಳಿಂದ ದೂರ ಮಾಡಿದ್ದೇನೆ. ದುಶ್ಚಟಗಳಿಂದ ದೂರವಿದ್ದು ಒಳ್ಳೆಯ ಜೀವನ ಸಾಧಿಸಿ ನಾನು ಕುರಾನ್, ಬೈಬಲ್, ಭಗವತ್ ಗೀತೆ, ವಚನ ಸಾಹಿತ್ಯ ಓದುತ್ತೇನೆ, ಸುಮಾರು 10ಸಾವಿರ ಪುಸ್ತಕಗಳಿದ್ದು ದಿನಾಲು ಓದುತ್ತೇನೆ ಓದುವುದರಿಂದ ಕೆಟ್ಟ ಭಾವನೆ ಬಿಟ್ಟು ಒಳ್ಳೆಯ ಭಾವನೆ ಮೂಡುತ್ತದೆ, ಪುಸ್ತಕ, ಪತ್ರಿಕೆಗಳು ಓದುವ ಹವ್ಯಾಸ ಬೆಳೆಸಿಕೊಳ್ಳಿ ಎಂದರು.

ಭೌಧ ಧರ್ಮ ಧ್ಯಾನ ಮಾಡಿ ನಾವು ಹೇಗೆ ಬದುಕಬೇಕು ಕಲಿಸುತ್ತದೆ, ಬಸವ ಧರ್ಮ ನಂಬಿ ಜೀವನ ಸಾಧಿಸಬೇಕು, ವಚನ ಸಾಹಿತ್ಯ ಬದುಕಲು ಕಲಿಸುತ್ತದೆ, ವಚನ ಸಾಹಿತ್ಯ ಅತಿಹೆಚ್ಚು ಪ್ರಚಾರ ಆಗಬೇಕು, ಆಗ ದೇಶದಲ್ಲಿ ಯಾವುದೇ ಕೋಮು ಗಲಭೆ ಆಗುವುದಿಲ್ಲ ಎಂದು ಭವಿಷ್ಯವಾಣಿ ನುಡಿದರು.

ಡಾ.ಬಸವಲಿಂಗ ಅವಧೂತರ 13ನೇ ಜಾತ್ರಾಮಹೋತ್ಸವ

ತಾಲ್ಲೂಕಿನ ದೇಗಲಮಡಿ ಗ್ರಾಮದ ಶ್ರೀ ಬಸವಲಿಂಗ ಅವಧೂತ ಆಶ್ರಮದಲ್ಲಿ ಪರಮಪೂಜ್ಯ ಶ್ರೀ ಡಾ.ಬಸವಲಿಂಗ ಅವಧೂತರ 13ನೇ ಜಾತ್ರಾ ಮಹೋತ್ಸವ ಮತ್ತು ಜಗನ್ಮಾತೆ ಅಕ್ಕಮಹಾದೇವಿ ತೊಟ್ಟಿಲು ಸಮಾರಂಭವು ಅತ್ಯಂತ ವಿಜೃಂಭಣೆಯಿಂದ ಇದೆ ಮಾರ್ಚ್ 22ರಂದು ಜರುಗಲಿದ್ದು ಸಂಜೆ 5-30ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಮಾ.23ರಂದು ಬೆಳಿಗ್ಗೆ ಕುಂಭಮೇಳದೊಂದಿಗೆ ಶ್ರೀಗಳ ಹಾಗೂ ಶ್ರೀಶೈಲ ಮಲ್ಲಿಕಾರ್ಜುನ ಮತ್ತು ಜಗನ್ಮಾತೆ ಅಕ್ಕಮಹಾದೇವಿ ಭವ್ಯ ಪಲ್ಲಕ್ಕಿ ಉತ್ಸವ ಮೆರವಣಿಗೆಯು ವೀರಭದ್ರೇಶ್ವರ ದೇವಾಸ್ಥಾನದಿಂದ ಶ್ರೀಗಳ ಆಶ್ರಮದವರೆಗೆ ನಡೆಯಲಿದೆ, ಸಂಜೆ 6-00ಗಂಟೆಗೆ ಶ್ರೀಶೈಲ ಮಲ್ಲಿಕಾರ್ಜುನ ರಥೋತ್ಸವ ಕಾರ್ಯಕ್ರಮ ನಡೆಯಲಿದೆ ಭಕ್ತಾಧೀಗಳು ಕಾರ್ಯಕ್ರಮಕ್ಕೆ ಆಗಮಿಸಿ ಪೂಜ್ಯರ ದರ್ಶನ ಪಡೆದು ಪುನಿತರಾಬೇಕೆಂದು ಮಠದ ಭಕ್ತರಾದ ಶ್ರೀಮಂತ ಕಟ್ಟಿಮನಿ ಮತ್ತು ಲಕ್ಷ್ಮಣ ಆವುಂಟಿ ತಿಳಿಸಿದ್ದಾರೆ.

ಉಪ ಲೋಕಾಯುಕ್ತರ ಮುಂದುವರಿದ ಪರಿಶೀಲನೆ

• ಉದಯವಾಹಿನಿ, ಶಿವಮೊಗ್ಗ

ಉಪ ಲೋಕಾಯುಕ್ತ ನ್ಯಾಯಾಧೀಶರಾದ ಕೆ ಎನ್ ಫಣೀಂದ್ರ ಅವರು, ಎರಡನೇ ದಿನವಾದ ಮಾರ್ಚ್ 20 ರಂದು ಕೂಡ ಶಿವಮೊಗ್ಗ ನಗರದ ವಿವಿಧೆಡೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮತ್ತೆ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಎರಡು ಸುಮೋಟೋ ಕೇಸ್ ದಾಖಲಿಸಿಕೊಂಡಿದ್ದಾರೆ.

ಹೆಲಿಪ್ಯಾಡ್ ಸರ್ಕಲ್ ಬಳಿಯಿರುವ ಪೊಲೀಸ್ ಕ್ಯಾಬಿನ್, ಅನುಪಿನಕಟ್ಟೆ ಬಳಿಯಿರುವ ಪಾಲಿಕೆ ಘನತ್ಯಾಜ್ಯ ವಿಲೇವಾರಿ ಘಟಕ, ಸರ್ಕಾರಿ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿಯಿತ್ತು ಪರಿಶೀಲಿಸಿದರು. ಪೊಲೀಸ್ ಕ್ಯಾಬಿನ್ ಗಳು ಬಳಕೆಯಾಗದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ಘನತ್ಯಾಜ್ಯ ವಿಲೇವಾರಿ ಘಟಕದ ನಿರ್ವಹಣೆ ಬಗ್ಗೆಯೂ ಬೇಸರ ವ್ಯಕ್ತಪಡಿಸಿದರು. ದಿಢೀರ್ ಭೇಟಿಯ ನಂತರ ಉಪ ಲೋಕಾಯುಕ್ತರು ಸುದ್ದಿಗಾರರೊಂದಿಗೆ ಮಾತನಾಡಿದರು. ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿನ ಕಸವನ್ನು ವೈಜ್ಞಾನಿಕವಾಗಿ ವಿಲೇವಾರಿಯಾಗಬೇಕಾಗಿದೆ. ಗುಂಡಿ ತೋಡಿ ಕಸ ವಿಲೇವಾರಿ ಕ್ರಮ ಸರಿಯಲ್ಲ. ಈ ಸಂಬಂಧ ಸುಮೋಟೋ ಕೇಸ್ ದಾಖಲಿಸಿಕೊಳ್ಳಲಾಗಿದೆ. ಸಂಸ್ಕರಣೆಗೆ ಮತ್ತೊಂದು ಪ್ಲ್ಯಾಂಟ್ ಅಗತ್ಯವಿದೆ.

ಉದಯವಾಹಿನಿ ಚಿತ್ರ

ಶಾಶ್ವತ ಪರಿಹಾರ ಕ್ರಮಕೈಗೊಳ್ಳುವ ಬಗ್ಗೆ ಸಲಹೆ ನೀಡಲಾಗಿದೆ. ಸುಮೋಟೋ ಕೇಸ್ ದಾಖಲಿಸಿಕೊಳ್ಳಲಾಗುವುದು. ಪ್ರತಿ ಎರಡು ತಿಂಗಳಿಗೊಮ್ಮೆ ಪ್ರಗತಿ ಪರಿಶೀಲನೆ ವರದಿ ಪಡೆಯಲಾಗುವುದು. ಪೊಲೀಸ್ ಕ್ಯಾಬಿನ್ ಗಳ ಪರಿಶೀಲನೆ ಮಾಡಲಾಯಿತು. 18 ರಿಂದ 20 ಕ್ಯಾಬಿನ್ ನಿರ್ಮಿಸಲಾಗಿದೆ. ಈ ಬಗ್ಗೆ ಎಸ್ಪಿ ಅವರನ್ನು ಕೇಳಿದಾಗ, ಅಗತ್ಯವಿಲ್ಲದಿದ್ದರೂ ನಿರ್ಮಾಣ ಮಾಡಿ ಕೊಡಲಾಗಿದೆ. ಸಿಬ್ಬಂದಿಗಳ ಕೊರತೆಯಿದೆ ಎಂದು ಹೇಳಿದ್ದಾರೆ. ಮುಂದಿನ ದಿನಗಳಲ್ಲಿ ಡಿಸಿ, ಸಿಇಓ ಜೊತೆ ಚರ್ಚಿಸಿ ಸದ್ಬಳಕೆ ಮಾಡಿಕೊಳ್ಳಲಾಗುವುದು ಎಂದು ಎಸ್ಪಿ ಹೇಳಿದ್ದಾರೆ. ಈ ಬಗ್ಗೆಯೂ ಸುಮೋಟೋ ಕೇಸ್ ದಾಖಲಿಸಿಕೊಳ್ಳಲಾಗುವುದು. ಹಾಗೆಯೇ ಬಿಟ್ಟರೇ ಕ್ಯಾಬಿನ್ ಗಳು ಉಪಯೋಗಕ್ಕೆ ಬರದಿರುವ ಸಾಧ್ಯತೆಯಿದೆ. ಇದರಿಂದ ಹಣ ವ್ಯರ್ಥವಾಗಲಿದೆ. ಈ ಬಗ್ಗೆಯೂ ನಿಯಮಿತವಾಗಿ ವರದಿ ಪಡೆದುಕೊಳ್ಳಲಾಗುವುದು ಎಂದು ಉಪ ಲೋಕಾಯುಕ್ತರು ತಿಳಿಸಿದ್ದಾರೆ.

ಎರಡು ಕೇಸ್ ದಾಖಲು

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಭೇಟಿ ನೀಡಿದಾಗ ಸ್ವಚ್ಛವಾಗಿರುವುದು ಕಂಡುಬಂದಿದೆ. ಆದರೆ ಕೆಲ ನಾಗರೀಕರು, ನೀವು ಬರುತ್ತಿರುವ ಕಾರಣದಿಂದ ಸ್ವಚ್ಛವಾಗಿಟ್ಟುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ನಿಯಮಿತವಾಗಿ ಬಸ್ ನಿಲ್ದಾಣಕ್ಕೆ ಭೇಟಯಿತ್ತು ಪರಿಶೀಲಿಸುವಂತೆ ಲೋಕಾಯುಕ್ತ ಪೊಲೀಸರಿಗೆ ಸೂಚಿಸಲಾಗಿದೆ ಎಂದರು.

28 ಕುಟುಂಬಗಳಿಗೆ ಬೆಳಕಿನ ಭಾಗ್ಯ

• ಉದಯವಾಹಿನಿ, ಬೆಳ್ತಂಗಡಿ

ಕುದುರೆಮುಖ ರಾಷ್ಟ್ರೀಯ ಉದ್ಯಾನವನದ ದಟ್ಟ ಅರಣ್ಯದೊಳಗೆ ವಾಸಿಸುತ್ತಿರುವ ಸುಕ್ಕೇರಿ ಮೊಗು ಗ್ರಾಮದ ಪಂಜಾಲ, ಮಾಳಿಗೆಬೈಲಿನ 28 ಆದಿವಾಸಿ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅರಣ್ಯ ಇಲಾಖೆ ಅಂತಿಮ ಅನುಮತಿ ನೀಡಿದೆ. ದಶಕಗಳಿಂದ ವಿದ್ಯುತ್ ಸೌಲಭ್ಯಕ್ಕಾಗಿ ಹೋರಾಡುತ್ತಿದ್ದ ಈ ಕುಟುಂಬಗಳಿಗೆ ಶೀಘ್ರದಲ್ಲೇ ಬೆಳಕಿನ ಭಾಗ್ಯ ಲಭಿಸಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನವರಿ 27 ರಂದು ನಡೆಸಿದ ಸಭೆಯಲ್ಲಿ ಅರಣ್ಯ ಪ್ರದೇಶದ ವಸತಿ ಪ್ರದೇಶಗಳಿಗೆ ವಿದ್ಯುತ್, ನೀರು, ರಸ್ತೆ ಸೇರಿದಂತೆ ಮೂಲಸೌಕರ್ಯ ಒದಗಿಸಲು ಸೂಚಿಸಿದ್ದರು. ಈ ಹಿನ್ನೆಲೆಯಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರು. ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಮತ್ತು ಬೆಳ್ತಂಗಡಿಯ ಕಾಂಗ್ರೇಸ್ ಮುಖಂಡ ರಕ್ಷಿತ್ ಶಿವರಾಂ ಅವರ ಪ್ರಯತ್ನದಿಂದ ಈ ಅನುಮತಿ ಲಭಿಸಿದೆ.

ದಶಕಗಳ ಹೋರಾಟಕ್ಕೆ ಫಲ: ಶತಮಾನಗಳಿಂದ ಅರಣ್ಯದಲ್ಲಿ ವಾಸಿಸುತ್ತಿರುವ ಈ ಕುಟುಂಬಗಳು ವಿದ್ಯುತ್ ಸಂಪರ್ಕಕ್ಕಾಗಿ ದಶಕಗಳಿಂದ ಹೋರಾಡುತ್ತಾ ಬಂದಿವೆ. ಕುದುರೆಮುಖ ರಾಷ್ಟ್ರೀಯ ಉದ್ಯಾನವನದೊಳಗೆ ಮೂಲಸೌಕರ್ಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಂತೆ ಸರ್ಕಾರ ತಿಳಿಸಿದ್ದರಿಂದ ಸಾವಿರಾರು ರೂಪಾಯಿ ಖರ್ಚು ಮಾಡಿ ಅರ್ಜಿ ಸಲ್ಲಿಸಲಾಗಿತ್ತು. ಜಿಲ್ಲಾ ಪಂಚಾಯತ್ ಸದಸ್ಯರಾಗಿದ್ದ ಶೇಖರ ಕುಕ್ಕೇಡಿ ಅವರ ನೇತೃತ್ವದಲ್ಲಿ ದಿಲ್ಲಿ ಮತ್ತು ಬೆಂಗಳೂರಿನಲ್ಲಿ ಹಲವು ಬಾರಿ ಪ್ರಯತ್ನ ನಡೆಸಲಾಗಿತ್ತು. 2019 ರಲ್ಲಿ ನ್ಯಾಷನಲ್ ವೈಲ್ಡ್ ಲೈಫ್ ಬೋರ್ಡ್ ಅನುಮತಿ ನೀಡಿದರೂ, ರಾಜ್ಯ ಅರಣ್ಯ ಇಲಾಖೆಯಿಂದ ಅನುಮೋದನೆ ಸಿಗದೆ ವಿಳಂಬವಾಗಿತ್ತು. ಇದೀಗ ಅಂತಿಮ ಅನುಮೋದನೆ ದೊರೆತಿದ್ದು, ಆದಿವಾಸಿಗಳಲ್ಲಿ ಸಂತಸ ಮೂಡಿದೆ.

48 ಲಕ್ಷ ರೂ. ಅಂದಾಜು ಪಟ್ಟಿ: ಮೆಸ್ಕಾಂ ಇಲಾಖೆಯವರು 28 ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು 48 ಲಕ್ಷ ರೂ. ಅಂದಾಜು ಪಟ್ಟಿಯನ್ನು ತಯಾರಿಸಿದ್ದಾರೆ. ರಾಷ್ಟ್ರೀಯ ಉದ್ಯಾನವನದೊಳಗೆ 647 ಮೀಟರ್ ಎಬಿ ಕೇಬಲ್ ಮೂಲಕ ವಿದ್ಯುತ್ ಲೈನ್ ಹಾದುಹೋಗಲಿದೆ. ಅರಣ್ಯ ಇಲಾಖೆಯ ಅನುಮೋದನೆ ದೊರೆತ ಕೂಡಲೇ ಕಾಮಗಾರಿ ಆರಂಭವಾಗಲಿದೆ.

ಗೋಡಂಬಿ ಬೆಳೆಯಲು ರೈತರು ಮುಂದಾಗಿ

• ಉದಯವಾಹಿನಿ, ಬಾಗಲಕೋಟೆ

ಜಿಲ್ಲೆಯಲ್ಲಿ ಫಲವತ್ತಾದ ಭೂಮಿ, ಘಟಪ್ರಭಾ ಮಲಪ್ರಭಾ ನದಿಗಳ ನೀರು ಇದೆ. ಅಲ್ಲದೆ ಆಲಮಟ್ಟಿ ಹಿನ್ನೀರಿನಿಂದ ಸಾಕಷ್ಟು ಅವಕಾಶ ಇರುವುದರಿಂದ ಜಿಲ್ಲೆಯ ರೈತರು ಗೋಡಂಬಿಯನ್ನು ಮುಕ್ತವಾಗಿ ಬೆಳೆಯಬಹುದಾಗಿದೆ ಎಂದು ತೋಟಗಾರಿಕೆ ವಿಶ್ವವಿದ್ಯಾಲಯದ ತರಬೇತಿ ಕೇಂದ್ರದ ಮುಖ್ಯಸ್ಥ ಡಾ. ವಸಂತ್ ಗಾಣಿಗೇರ ಹೇಳಿದರು. ತುಳಸಿಗೇರಿಯಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಮತ್ತು ರೈತ ಹಾಗೂ ಸಿಬ್ಬಂದಿ ತರಬೇತಿ ಕೇಂದ್ರ, ತೋವಿವಿಯ ವಿಸ್ತರಣಾ ನಿರ್ದೇಶನಾಲಯ, ಗೇರು ಮತ್ತು ಕೋಕೋ ಅಭಿವೃದ್ಧಿ ನಿರ್ದೇಶನಾಲಯ ಕೊಚ್ಚಿ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಗೋಡಂಬಿ ಬೆಳೆಯ ವೈಜ್ಞಾನಿಕ ಉತ್ಪಾದನಾ ಹಾಗೂ ಸಂಸ್ಕರಣಾ ತಂತ್ರಜ್ಞಾನ ಕುರಿತು ತರಬೇತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ರೋಗ ಕೀಟಗಳ ಬಾಧೆ ಇಲ್ಲದ ಕಡಿಮೆ ನೀರಿನಲ್ಲಿ ಬೆಳೆ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	10:30 ರಿಂದ 12:00
ಗುಳಿಕ ಕಾಲ	ಬೆಳಿಗ್ಗೆ	06:00 ರಿಂದ 07:30
ಯಮಗಂಡ ಕಾಲ	ಬೆಳಿಗ್ಗೆ	01:30 ರಿಂದ 03:00

ಮೇಷ ನಿಮ್ಮ ಇತರರನ್ನು ಶ್ಲಾಘಿಸುವ ಮೂಲಕ ಅವರ ಯಶಸ್ಸನ್ನು ಆನಂದಿಸುವ ಸಾಧ್ಯತೆಗಳಿವೆ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ. ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

ವೃಷಭ ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಕೆಲಸದ ಸ್ಥಳದಲ್ಲಿ ಅಥವಾ ವ್ಯಾಪಾರದಲ್ಲಿ ನಿಮ್ಮ ಯಾವುದೇ ಅಜಾಗರೂಕತೆ ಆರ್ಥಿಕ ನಷ್ಟವನ್ನು ಉಂಟುಮಾಡಬಹುದು ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ, ಸ್ನೇಹಿತರ ಬಳಿ ಸಹಾಯ ಕೇಳಿ.

ಮಿಥುನ ಯಾರಾದರೂ ನಿಮ್ಮನ್ನು ಬಲಿಪಶುವನ್ನಾಗಿ ಮಾಡಲು ಪ್ರಯತ್ನಿಸಬಹುದಾದ್ದರಿಂದ ಎಚ್ಚರಿಕೆಯಿಂದಿರಿ. ಒತ್ತಡ ಹೆಚ್ಚಾಗಬಹುದು. ನೀವು ಕಮಿಷನ್‌ಗಳಿಂದ ? ಡಿವಿಡೆಂಡ್‌ಗಳಿಂದ, ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ. ಸಂಬಂಧಿಗಳು ಬೆಂಬಲ ನೀಡುತ್ತಾರೆ.

ಕರ್ಕಾಟಕ ನಿಮ್ಮ ಅಧಿಕ ಚೈತನ್ಯವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು, ನೀವು ಹಣದಿಂದ ಲಾಭ ಪಡೆಯಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ಪ್ರಣಯದ ಮನೋಭಾವದಲ್ಲಿನ ಹಠಾತ್ ಬದಲಾವಣೆ.

ಸಿಂಹ ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ನಿಮ್ಮ ಗೌಪ್ಯ ಮಾಹಿತಿಯನ್ನು ಸಂಗಾತಿಯ ಜೊತೆ ಹಂಚಿಕೊಳ್ಳುವ ಮೊದಲು ಯೋಚಿಸಿ.

ಕನ್ಯಾ ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು.

ತುಲಾ ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು–ಸಮಯದ ಜೊತೆ ನಿಮ್ಮ ಆಲೋಚನೆಗಳನ್ನು ಬದಲಾಯಿಸಿಕೊಳ್ಳಿ –ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ– ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸುತ್ತದೆ ಮತ್ತು ನಿಮ್ಮ ಮನಸ್ಸನ್ನು ಪಕ್ವಗೊಳಿಸುತ್ತದೆ.

ವೃಶ್ಚಿಕ ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ.

ಧನಸ್ಸು ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ನಿಮ್ಮ ಭಾವನೆಗಳನ್ನು ತಡೆಹಿಡಿಯಬೇಡಿ, ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ. ಹಣ ಖರ್ಚು ಮಾಡುತ್ತಿದ್ದವರು ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು

ಮಕರ ತುಂಬಾ ಉತ್ಸಾಹ ಮತ್ತು ಸ್ಫೋಟಕ ಭಾವೋದ್ರೇಕಗಳು ನಿಮ್ಮ ನರಮಂಡಲಕ್ಕೆ ಹಾನಿ ಮಾಡಬಹುದು. ಇದನ್ನು ತಪ್ಪಿಸಲು ನಿಮ್ಮ ಭಾವನೆಗಳನ್ನು ನಿಯಂತ್ರಿಸಿ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಪ್ರತಿಕ್ರಿಯಿಸಬಹುದು.

ಕುಂಭ ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು ಮತ್ತು ಸಾಧ್ಯವಾದರೆ ನಿಮ್ಮ ಸ್ನೇಹಿತರು ಧೂಮಪಾನ ಮಾಡುವಾಗ ಅವರ ಜೊತೆ ನಿಲ್ಲಬೇಡಿ. ಏಕೆಂದರೆ ಅದು ಮಗುವನ್ನು ಬಾಧಿಸಬಹುದು. ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ವಸ್ತುಗಳ ಬಗ್ಗೆ ಕಡಿಯುವ ಸಧ್ಯತೆ ಇದೆ.

ಮೀನ ಸಂಗಾತಿಯ ಆರೋಗ್ಯಕ್ಕೆ ಸೂಕ್ತ ರಕ್ಷಣೆ ಮತ್ತು ಗಮನದ ಅಗತ್ಯವಿದೆ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ.

ಜಲಧಾರೆ ಕಾಮಗಾರಿಯಿಂದ ಕುಡಿಯುವ ನೀರಿನ ಪೈಪ್‌ಗೆ ಹಾನಿ; ಗ್ರಾಮಸ್ಥರ ಆಕ್ರೋಶ

• ಉದಯವಾಹಿನಿ, ಮುದ್ದೇಬಿಹಾಳ

ಉದಯವಾಹಿನಿ ಚಿತ್ರ

ತಾಲ್ಲೂಕಿನ ನಾಗಬೇನಾಳ ರಸ್ತೆ, ಆರೆಶಂಕರ ಕ್ರಾಸ್ ಹತ್ತಿರ ಬಹು ಹಳ್ಳಿ ಕುಡಿಯುವ ನೀರಿನ ಪೈಪ್‌ಗಳಿಗೆ ಜಲಧಾರೆ ಕಾಮಗಾರಿಯಿಂದ ಹಾನಿಯಾಗಿದ್ದು, 32 ಹಳ್ಳಿಗಳಿಗೆ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ. ಮಾರ್ಚ್ 17ರಂದು ಪೈಪ್ ಒಡೆದು ನೀರಿನ ಸರಬರಾಜು ಸ್ಥಗಿತಗೊಂಡಿದ್ದರೂ, ಇದನ್ನು ದುರಸ್ತಿ ಮಾಡಲು ಜಲಧಾರೆ ಕಾಮಗಾರಿ ಜಿವಿಪಿಆರ್ ಕಂಪನಿಯವರು ಯಾವುದೇ ಕ್ರಮ ಕೈಗೊಂಡಿಲ್ಲ ಎಂಬುದು ಗ್ರಾಮಸ್ಥರು ಆರೋಪಿಸುತ್ತಿದ್ದಾರೆ

ಕುಡಿಯುವ ನೀರಿನ ಕೊರತೆ ಗ್ರಾಮಸ್ಥರ ಸಂಕಷ್ಟ: ಈ ಘಟನೆಯ ಪರಿಣಾಮ, ಅಡವಿ ಸೋಮನಾಳ, ಬಹುಹಳ್ಳಿ ಕುಡಿಯುವ ನೀರಿನ ಪೂರೈಕೆ ಅಸ್ತವ್ಯಸ್ತಗೊಂಡಿದೆ. ಬೇಸಿಗೆಗಾಲದಲ್ಲಿ ನೀರಿನ ತೊಂದರೆ ಈಗಾಗಲೇ ತೀವ್ರವಾಗಿರುವಾಗ, ಜಲಧಾರೆ ಕಾಮಗಾರಿಯಿಂದಾಗಿ ಈ ಸಮಸ್ಯೆ ಇನ್ನೂ ಗಂಭೀರಗೊಂಡಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಜಲಧಾರೆ ಕಾಮಗಾರಿಯ ನಿರ್ವಹಣೆಯ ಕುರಿತು ರೈತ ಹೋರಾಟಗಾರ ಸಂಗಮೇಶ ನಾಗೂರ ಗುಂಡಕನಾಳ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕುಡಿಯುವ ನೀರಿನ ಪೈಪ್‌ಗಳ ಹತ್ತಿರ ಜಲಧಾರೆ ಪೈಪ್‌ಗಳನ್ನು ಅಳವಡಿಸುವುದರಿಂದ ಹಾನಿಯಾಗುತ್ತಿದೆ. ಇದರಿಂದ ಜನರು ತೊಂದರೆಗೆ ಒಳಗಾಗುತ್ತಿದ್ದಾರೆ. ಪೈಪ್ ಒಡೆದ ತಕ್ಷಣವೇ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಗ್ರಾಮಸ್ಥರ ನಿರೀಕ್ಷೆ

ನೀರಿನ ಸರಬರಾಜು ಕೂಡಲೇ ಪುನಃ ಸ್ಥಾಪನೆಯಾಗಬೇಕು ಮತ್ತು ಭವಿಷ್ಯದಲ್ಲಿ ಈ ರೀತಿಯ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸುತ್ತಿದ್ದಾರೆ. ಜಲಧಾರೆ ಕಾಮಗಾರಿಯು ನೀರಿನ ಪೂರೈಕೆಗೆ ಹಾನಿ ಮಾಡದಂತೆ ಅಧಿಕಾರಿಗಳು ಗಮನಹರಿ ಸಬೇಕು ಎಂಬುದು ಅವರ ಬೇಡಿಕೆ.

ಅಧಿಕಾರಿಗಳ ಪ್ರತಿಕ್ರಿಯೆ

ಈ ಸಮಸ್ಯೆಯ ಕುರಿತು ಕುಡಿಯುವ ನೀರು ಪೂರೈಕೆ ಇಲಾಖೆಯ ಎಇ ಆರ್. ಎಸ್. ಹಿರೇಗೌಡರ್ ಪ್ರತಿಕ್ರಿಯಿಸಿ, ಕುಡಿಯುವ ನೀರಿನ ಪೈಪ್ ಒಡೆದಿರುವ ವಿಷಯ ನಮ್ಮ ಗಮನಕ್ಕೆ ಬಂದಿದೆ. ಕೂಡಲೇ ದುರಸ್ತಿ ಮಾಡಿಸುವಂತೆ ಸೂಚಿಸಲಾಗುತ್ತದೆ. ಮೇಲಾಧಿಕಾರಿಗಳಿಗೆ ಈ ಬಗ್ಗೆ ಪತ್ರ ಬರೆಯಲಾಗುವುದು ಎಂದು ತಿಳಿಸಿದ್ದಾರೆ.

ಪ್ರಾಮಾಣಿಕವಾಗಿ ಕಾರ್ಮಿಕ ಸುಂಕ ಸಂಗ್ರಹಿಸಿ

ಜಿಲ್ಲಾಮಟ್ಟದ ಸುಂಕ ಸಂಗ್ರಹಣಾ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೂಚನೆ

• ಉದಯವಾಹಿನಿ, ಚಿತ್ರದುರ್ಗ

ಉದಯವಾಹಿನಿ ಚಿತ್ರ

ಕಟ್ಟಡ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವ್ಯವಸ್ಥಿತವಾಗಿ, ಪ್ರಾಮಾಣಿಕವಾಗಿ ಕಾರ್ಮಿಕ ಸುಂಕ ಸಂಗ್ರಹಿಸಲು ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಸುಂಕ ಸಂಗ್ರಹಣಾ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ, ಸೇವಾ ಷರತ್ತುಗಳು) ಕಾಯ್ದೆ 1996ರ ಅಡಿಯಲ್ಲಿ ರಚಿಸಲಾಗಿರುವ ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸಿ ಅವರಿಗೆ ಹಲವು ಕಲ್ಯಾಣ, ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿ ಮಾಡುತ್ತಿದೆ. ಮಂಡಳಿಗೆ ಸಂಪನ್ಮೂಲ ಕ್ರೂಢೀಕರಿಸುವ ಸಲುವಾಗಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳುವ ಮಾಲೀಕರು, ನಿಯೋಜಕರಿಂದ ಒಟ್ಟು ನಿರ್ಮಾಣ ವೆಚ್ಚದ ಶೇ.1ರಷ್ಟು ಸುಂಕ ಸಂಗ್ರಹ ಮಾಡಬೇಕು ಎಂದು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ರೂ.10 ಲಕ್ಷ ನಿರ್ಮಾಣ ವೆಚ್ಚ ಮೀರಿದ ವಾಸದ ಮನೆ ಹಾಗೂ ಯಾವುದೇ ವಾಣಿಜ್ಯ ಕಟ್ಟಡ ನಿರ್ಮಾಣ ಕಾಮಗಾರಿಗಳ ಶೇ.1ರಷ್ಟು ಸುಂಕವನ್ನು ವ್ಯವಸ್ಥಿತವಾಗಿ ಸಂಗ್ರಹಿಸಬೇಕು. ಇದರಿಂದ ಕಾರ್ಮಿಕರ ಕಲ್ಯಾಣ ಮಂಡಳಿಗೆ ಆದಾಯ ಬರಲಿದೆ ಎಂದು ತಿಳಿಸಿದ ಅವರು, ಇಂಜಿನಿಯರಿಂಗ್ ವಿಭಾಗಗಳಲ್ಲಿ ಸಮರ್ಪಕವಾಗಿ ಅನುಷ್ಠಾನವಾಗಬೇಕು ಎಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಕಟ್ಟಡ ಕಾಮಗಾರಿಗಳಿಗೆ ಲೈಸೆನ್ಸ್ ನೀಡಲಾಗಿದೆ. ಸಂಗ್ರಹಿಸಿರುವ ಸುಂಕ ಎಷ್ಟು? ಕಟ್ಟಡ ನಿರ್ಮಾಣದ ವೆಚ್ಚದ ಕುರಿತು ಮರು ಪರಿಶೀಲನೆ ನಡೆಸಬೇಕು. ಒಂದು ವೇಳೆ ವ್ಯತ್ಯಾಸ ಕಂಡುಬಂದರೆ ಸೂಕ್ತ ಕಾನೂನು ಕ್ರಮತೆಗೆದುಕೊಳ್ಳಬೇಕು.

ಅದೇ ರೀತಿಯಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೂಡ ಕಾರ್ಮಿಕ ಸುಂಕ ಸಂಗ್ರಹವಾಗುವುದರ ಕುರಿತು ಅಗತ್ಯ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಡಿ ಮಾತನಾಡಿ, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾಯ್ದೆ 1996 ಮತ್ತು ಕರ್ನಾಟಕ ನಿಯಮಗಳು, 2006ರ ನಿಯಮ 15ರನ್ವಯ ಕಾಮಗಾರಿ ಕೈಗೊಳ್ಳುವ ಸಂಸ್ಥೆ, ವ್ಯಕ್ತಿಯು ಕಾಮಗಾರಿ ಪ್ರಾರಂಭಗೊಂಡಿರುವ ಬಗ್ಗೆ ನಮೂನೆ–1ನ್ನು ನಿಯಮದಂತೆ ಕಾರ್ಮಿಕ ಅಧಿಕಾರಿಗಳಿಗೆ ಆನ್‌ಲೈನ್ ಮುಖಾಂತರ ಸಲ್ಲಿಸಿ, ನೋಂದಣಿ ಪತ್ರ ಪಡೆಯುವುದು ಕಡ್ಡಾಯ. ಅದರಂತೆ ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ, 1996, ನಿಯಮಗಳು, 1998ರ ನಿಯಮ 6(1) ರನ್ವಯ ಸುಂಕ ಪಾವತಿ ಮಾಡಿರುವ ಬಗ್ಗೆ ಮಾಹಿತಿ ನೀಡುವುದು ಕಡ್ಡಾಯವಾಗಿದೆ ಎಂದು ತಿಳಿಸಿದ ಅವರು, ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಸೌಲಭ್ಯವೂ ದೊರೆಯಬೇಕು. ಈ ನಿಟ್ಟಿನಲ್ಲಿ ನೋಂದಾಯಿತ ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಮುನ್ನೆಚ್ಚರಿಕಾ ಆರೋಗ್ಯ ತಪಾಸಣೆ ಮೂಲಕ ಸುಮಾರು 20 ಆರೋಗ್ಯ ತಪಾಸಣೆ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇದ್ದರೆ ಮಂಡಳಿಯ ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ ಸೌಲಭ್ಯ ದಡಿ ಬರುವ ಪ್ರಮುಖ ಖಾಯಿಲೆಗಳಿಗೆ ರೂ.2 ಲಕ್ಷದವರೆಗೂ ಚಿಕಿತ್ಸೆ ಸೌಲಭ್ಯ ನೀಡಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಕಾರ್ಮಿಕ ನಿರೀಕ್ಷಕರಾದ ಡಿ.ರಾಜಣ್ಣ, ಅಲ್ಲಾಭಕ್ಷ್, ಟಿ.ಕುಸುಮ, ಭೀಮೇಶ್, ಬಾಲಕಾರ್ಮಿಕ ಯೋಜನಾ ಸೋಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಕಟ್ಟಡ ಕಾರ್ಮಿಕ, ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯ ಕಾರ್ಯನಿರ್ವಾಹಕ ಎಸ್.ವಿ.ಪ್ರಸಾದ್, ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಆರೋಗ್ಯ ತಪಾಸಣೆಗೆ ಕ್ರಮ

ಸ್ಥಳೀಯ ಸಂಸ್ಥೆಗಳು, ಸರ್ಕಾರದ ಕಾಮಗಾರಿಗಳನ್ನು ಕೈಗೊಳ್ಳುವ ಇಲಾಖೆಯವರು 30 ದಿನಗಳ ಅವಧಿಯಲ್ಲಿ ಸುಂಕವನ್ನು ಕಾರ್ಮಿಕರ ಕಲ್ಯಾಣ ಮಂಡಳಿಗೆ ಪಾವತಿಸಬೇಕು. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾಯ್ದೆ ಅಡಿ ಸಂಸ್ಥೆಗಳನ್ನು ನೋಂದಣಿ ಮಾಡಿಸಬೇಕು. ಇದರ ಜೊತೆಗೆ ಸರ್ಕಾರದ ವಿವಿಧ ಇಲಾಖೆಯ ಕಾಮಗಾರಿಗಳಲ್ಲಿ ತೊಡಗಿರುವ ಕಾರ್ಮಿಕರಿಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಸೌಲಭ್ಯಗಳನ್ನು ಒದಗಿಸಬೇಕು, ಆರೋಗ್ಯ ತಪಾಸಣೆಗೆ ಕ್ರಮವಹಿಸಬೇಕು ಎಂದು ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೌಲಭ್ಯ ನೀಡಲು ಅವಕಾಶ ಕಲ್ಪಿಸಿ

ಬಸ್ ನಿಲ್ದಾಣದಲ್ಲಿ ಜೀವ ಬಲಿಗಾಗಿ ಬಾಯಿತೆರೆದು ಕುಳಿತು ಕೊಳವೆಬಾವಿ

• ಉದಯವಾಹಿನಿ, ವಡಗೇರಾ

ಉದಯವಾಹಿನಿ ಚಿತ್ರ

ಜೀವ ಬಲಿಗಾಗಿ ಬಾಯಿ ತೆರೆದು ನಿಂತ ಬಸ್ ನಿಲ್ದಾಣದ ತೆರೆದು ಕೊಳವೆಬಾವಿ ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ರಾಜ್ಯ ರೈತ ಸಂಘ ಹಸಿರು ಸೇನೆ ತಾಲ್ಲೂಕು ಅಧ್ಯಕ್ಷ ವಿದ್ಯಾಧರ್ ಜಾಕಾ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಡಗೇರಾ ಪಟ್ಟಣದ ಬಸ್ ನಿಲ್ದಾಣದಲ್ಲಿನ ಬೋರ್ವೆಲ್ ಕೆಟ್ಟು ಹಾಳಾಗಿ ಸುಮಾರು ದಿನಗಳ ಕಳೆದಿವೆ ಆದರೆ ಆ ತೆರೆದು ಕೊಳವೆ ಬಾವಿಗೆ ಯಾವುದೇ ರೀತಿಯಾಗಿ ಮುಚ್ಚಳ ಮುಚ್ಚದೆ ಹಾಗೆ ಬಿಟ್ಟಿರುವುದರಿಂದ ಜೀವ ಬಲಿಗಾಗಿ ಕಾದು ಕುಳಿತಿದೆ ಈ ಹಿಂದೆ ತೆರೆದ ಕೊಳವೆ ಬಾವಿಗಳಿಗೆ ಬಿದ್ದು ಅದೆಷ್ಟೋ ಮಕ್ಕಳು ಬಲಿಯಾಗಿವೆ ಸಾರ್ವಜನಿಕ ಸ್ಥಳಗಳಲ್ಲಿರುವ ತೆರೆದ ಕೊಳವೆ ಬಾವಿಗಳನ್ನು ಕಡ್ಡಾಯವಾಗಿ ಮುಚ್ಚುವಂತೆ ಸರಕಾರದ ಆದೇಶವಿದೆ ಆದರೆ ಸರಕಾರದ ಆದೇಶವನ್ನು ಕಲ್ಯಾಣ ಕರ್ನಾಟಕ ಸಾರಿಗೆಯ ಅಧಿಕಾರಿಗಳು ಮರೆತಂತೆ ಕಾಣುತ್ತಿದೆ ಇದು ಸಾರ್ವಜನಿಕ ಸ್ಥಳವಾಗಿದ್ದು ಪ್ರಯಾಣಿಕರು ಹಾಗೂ ಮಕ್ಕಳು ಓಡಾಡುತ್ತಾರೆ ಏನಾದರೂ ಅನಾಹುತವಾದರೆ ಇದಕ್ಕೆ ಹೊಣೆ ಯಾರು ಈ ಬಸ್ ನಿಲ್ದಾಣಕ್ಕೆ ಕಲ್ಯಾಣ ಕರ್ನಾಟಕ ಸಾರಿಗೆ ನಿಗಮದ ವ್ಯವಸ್ಥಾಪಕರು, ಸಾರಿಗೆ ಇಲಾಖೆ ಯಾದಗಿರಿ ವಿಭಾಗಿಯ ನಿಯಂತ್ರಣಧಿಕಾರಿಗಳು, ಇನ್ನಿತರ ಅಧಿಕಾರಿಗಳು ಹಲವು ಬಾರಿ ಭೇಟಿ ನೀಡಿದ್ದು ನೆಪ ಮಾತ್ರಕ್ಕೆ ಎಂಬಂತೆ ಕಾಣಿಸುತ್ತಿದೆ ಅವರು ಬಂದು ಹೋದರು ಕೂಡ ಇಲ್ಲಿ ಯಾವುದೇ ರೀತಿಯಾದ ಅಭಿವೃದ್ಧಿಯಾಗದಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ ಎಂದು ಅವರು ದೂರಿದ್ದಾರೆ ತಪ್ಪಿಸ್ತ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಇನ್ನು ಮುಂದಾ

ಗಿನ್ನೆಸ್ ದಾಖಲೆ ಮುಡಿಗೇರಿಸಿಕೊಂಡ ಚೆತ್ತ ಚೋರ | ಜಾಕ್ ಮಾರ್ಟಿನ್ ಗಿನ್ನೆಸ್ ವಿಶ್ವ ದಾಖಲೆಯನ್ನು ಸಂಭ್ರಮಿಸಿದ ಪೋಷಕರು

ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸಿದ 8ರ ಪೋರ

ವಾಷಿಂಗ್ಟನ್: ಅಮೆರಿಕದ ಎಂಟು ವರ್ಷದ ಬಾಲಕ ನೋರ್ವ, ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸಿ ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸಿದ್ದಾನೆ. ಜಾಕ್ ಮಾರ್ಟಿನ್ ಪ್ರೆಸ್ಮನ್ ಎಂಬ ಎಂಟು ವರ್ಷದ ಬಾಲಕ, ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸಿದ ವಿಶ್ವದ ಅತ್ಯಂತ ಕಿರಿಯ ವ್ಯಕ್ತಿ ಎಂಬ ಹೆಗ್ಗಳಿಕೆಗೆ ಪಾತ್ರನಾಗಿದ್ದಾನೆ. ಹಾರಾಟದ ವೇಳೆ ಜಾಕ್ ಮಾರ್ಟಿನ್ ಪ್ರೆಸ್ಮನ್ ಗಾಳಿಯಲ್ಲಿ ಹಲವು ರೀತಿಯ ಸಾಹಸಗಳನ್ನು ಪ್ರದರ್ಶಿಸಿದ್ದು, ಆತನ ಬ್ಯಾಕ್‌ಫ್ಲಿಪ್ಸ್ ಮತ್ತು 360 ಡಿಗ್ರಿ ಸ್ಪಿನ್‌ಗಳಂತಹ ಸಾಹಸಗಳನ್ನು ನೋಡಿ ಜಗತ್ತು ದಿಗ್ಭ್ರಮೆಗೊಂಡಿದೆ. ಜಾಕ್ ಮಾರ್ಟಿನ್ ಪ್ರೆಸ್ಮನ್ ಸುಮಾರು 18 ಬಾರಿ ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸಿದ್ದಾನೆ. ಪ್ರತಿ ಹಾರಾಟವು ಸುಮಾರು 30 ಸೆಕೆಂಡುಗಳ ಕಾಲಾವಧಿಯನ್ನು ಹೊಂದಿತ್ತು.

2016ರ ಮಾರ್ಚ್ 11ರಂದು ಜನಿಸಿರುವ ಜಾಕ್ ಮಾರ್ಟಿನ್ ಪ್ರೆಸ್ಮನ್, ಕೇವಲ 8 ವರ್ಷ ಮತ್ತು 33 ದಿನ ಗಳ ವಯಸ್ಸಿನಲ್ಲಿ ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸಿ ಗಿನ್ನೆಸ್ ವಿಶ್ವ ದಾಖಲೆಯನ್ನು ಮುಡಿಗೇರಿಸಿಕೊಂಡಿದ್ದಾನೆ. ಈ ಹಾರಾಟವನ್ನು Zero-G ಎಂಬ ಕಂಪನಿಯು ಆಯೋಜಿಸಿತ್ತು. ಈ ಕಂಪನಿಯು ಸಂಶೋಧನೆ, ಗಗನಯಾತ್ರಿ ತರಬೇತಿ ಮತ್ತು ಸಾರ್ವಜನಿಕರಿಗೆ ಶೂನ್ಯ ಗುರುತ್ವಾಕರ್ಷಣೆಯ ಅನುಭವವನ್ನು ಪಡೆಯುವ ಅವಕಾಶ ನೀಡುತ್ತದೆ. ಬಾಹ್ಯಾಕಾಶದ ಬಗ್ಗೆ ವಿಶೇಷ ಆಸಕ್ತಿ ಬೆಳೆಸಿ ಕೊಂಡಿರುವ ಜಾಕ್ ಮಾರ್ಟಿನ್ ಪ್ರೆಸ್ಮನ್, ಇದೀಗ ತನ್ನಿಷ್ಟದ ಕ್ಷೇತ್ರಕ್ಕೆ ಸಂಬಂಧಿಸಿದ ಪ್ರಯೋಗಾತ್ಮಕ ಹಾರಾಟದಲ್ಲಿ ದಾಖಲೆ ನಿರ್ಮಿಸಿದ್ದಾನೆ. ಈ ಕುರಿತು ಮಾತನಾಡಿರುವ ಬಾಲಕನ ತಾಯಿ ಜೆಸ್ಸಿಕಾ, ಬಾಲ್ಯದಿಂದಲೂ ಜಾಕ್ ಮಾರ್ಟಿನ್ ಬಾಹ್ಯಾಕಾಶ ಕ್ಷೇತ್ರದ ಬಗ್ಗೆ ಆಸಕ್ತಿ ಬೆಳೆಸಿಕೊಂಡಿದ್ದಾನೆ. ನಾವು ಆತನಿಗಾಗಿ ಮನೆಯಲ್ಲೇ ಒಂದು ವಿಶೇಷವಾದ ಬಾಹ್ಯಾಕಾಶ ಕೊಠಡಿಯನ್ನು ನಿರ್ಮಿಸಿದ್ದೇವು. ಅಲ್ಲಿ ಜಾಕ್ ಯಾವಾಗಲೂ ಗ್ಯಾಲಕ್ಸಿಗಳು, ನಕ್ಷತ್ರಗಳು ಮತ್ತು ಗ್ರಹಗಳ ಕುರಿತು ಅಧ್ಯಯನ ನಡೆಸುತ್ತಿದ್ದ. ಬಾಹ್ಯಾಕಾಶ ನೌಕೆಯ ಮಾದರಿಯಲ್ಲಿ ಕುಳಿತು ಅಂತರಿಕ್ಷ ಯಾನ ಕೈಗೊಳ್ಳುವುದು ಜಾಕ್‌ನ ಅತ್ಯಂತ ಇಷ್ಟದ ಆಟ ಎಂದು ಹೇಳಿದ್ದಾರೆ.

ಇನ್ನು ಪುತ್ರನ ಸಾಧನೆಗೆ ಸಂತಸ ವ್ಯಕ್ತಪಡಿಸಿರುವ ಜಾಕ್ ಮಾರ್ಟಿನ್ ತಂದೆ ಜೇಸನ್ ಮಾರ್ಟಿನ್, ನನ್ನ ಬಾಲ್ಯದಲ್ಲಿ ನಾನು ತಪ್ಪಿಸಿಕೊಂಡ ಅವಕಾಶಗಳು ಮಗನಿಗೆ ಸಿಗುವಂತಾಗಲಿ ಎಂಬ ಕಾರಣಕ್ಕೆ ನಾನು ಪಟ್ಟ ಪರಿಶ್ರಮ ಗುರುವಾರ ಸಾರ್ಥಕವಾಗಿದೆ ಎಂದು ಹೇಳಿದ್ದಾರೆ. ಬಾಹ್ಯಾಕಾಶ ತಲುಪಿದ ಅತ್ಯಂತ ಕಿರಿಯ ವ್ಯಕ್ತಿ ಎಂಬ ಹೆಗ್ಗಳಿಕೆ ಪಡೆಯುವುದು ನನ್ನ ಮುಂದಿನ ಗುರಿ.. ಎಂದು ಹೇಳಿರುವ ಜಾಕ್ ಮಾರ್ಟಿನ್ ಪ್ರೆಸ್ಮನ್, ದೊಡ್ಡವನಾದ ಮೇಲೆ ನಾನು ಗಗನಯಾತ್ರಿಯಾಗಲು ಬಯಸಿರುವುದಾಗಿ ತಿಳಿಸಿದ್ದಾನೆ.

ಒಟ್ಟಿನಲ್ಲಿ ಕೇವಲ 8 ವರ್ಷದಲ್ಲೇ ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸಿ ವಿಶಿಷ್ಟ ಸಾಧನೆ ಮಾಡಿರುವ ಅಮೆರಿಕದ ಜಾಕ್ ಮಾರ್ಟಿನ್ ಪ್ರೆಸ್ಮನ್‌ಗೆ ನಾವೆಲ್ಲರೂ ಶುಭ ಕೋರೋಣ.

ತಂದೆಯಾಗಿ ಇದು ನನಗೆ ಹೆಮ್ಮೆಯ ಕ್ಷಣ

ನಾನು ಕೂಡ ಬಾಲ್ಯದಲ್ಲಿ ಸಾಮಾನ್ಯ ವಿಮಾನಗಳಿಗಿಂತ ಹೆಚ್ಚು ವೇಗವಾಗಿ ಚಲಿಸಬಲ್ಲ ಸಾಮರ್ಥ್ಯ ಹೊಂದಿರುವ ಕಾನ್‌ಕಾರ್ಡ್ ವಿಮಾನದಲ್ಲಿ ಸಂಚಾರ ಮಾಡುವ ಕನಸು ಕಂಡಿದ್ದೆ. ಆದರೆ ಈ ಕನಸು ಎಂದಿಗೂ ಈಡೇರಲಿಲ್ಲ. ಆದರೆ ಮಗ ಇಂತಹ ಅವಕಾಶ ಗಳಿಂದ ವಂಚಿತನಾಗಬಾರದು ಎಂದು ಆತನಿಗೆ ಬಾಲ್ಯದಲ್ಲೇ ಬಾಹ್ಯಾಕಾಶ ಕ್ಷೇತ್ರದ ಬಗ್ಗೆ ಆಸಕ್ತಿ ಬೆಳೆಸಿದೆ. ಆತ ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸಿ ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸಿದ್ದಾನೆ. ಓರ್ವ ತಂದೆಯಾಗಿ ಇದು ನನಗೆ ಹೆಮ್ಮೆಯ ಕ್ಷಣ.. ಎಂದು ಜೇಸನ್ ಭಾವುಕರಾಗಿ ನುಡಿದರು.

ಅಮೆರಿಕದ ಎಂಟು ವರ್ಷದ ಬಾಲಕ ಜಾಕ್ ಮಾರ್ಟಿನ್ ಪ್ರೆಸ್ಮನ್, ಶೂನ್ಯ ಗುರುತ್ವಾಕರ್ಷಣೆಯಲ್ಲಿ ಹಾರಾಟ ನಡೆಸುವ ಮೂಲಕ, ಈ ಸಾಧನೆ ಮಾಡಿದ ವಿಶ್ವದ ಅತ್ಯಂತ ಕಿರಿಯ ವ್ಯಕ್ತಿ ಎಂಬ ಗಿನ್ನೆಸ್ ದಾಖಲೆಯನ್ನು ಮುಡಿಗೇರಿಸಿಕೊಂಡಿದ್ದಾನೆ. Zero-G ಎಂಬ ಕಂಪನಿಯು ಆಯೋಜಿಸಿದ್ದ ಈ ಪ್ರಯೋಗಾತ್ಮಕ ಹಾರಾಟದಲ್ಲಿ, ಜಾಕ್ ಮಾರ್ಟಿನ್ ಪ್ರೆಸ್ಮನ್, ಕ್‌ಫ್ಲಿಪ್ಸ್ ಮತ್ತು 360 ಡಿಗ್ರಿ ಸ್ಪಿನ್‌ಗಳಂತಹ ಸಾಹಸಗಳನ್ನು ಪ್ರದರ್ಶಿಸಿ ಗಮನ ಸೆಳೆದಿದ್ದಾನೆ. ಭವಿಷ್ಯದಲ್ಲಿ ನಾನು ಜಗತ್ತಿನಾದ್ಯಂತ ಗಗನಯಾತ್ರಿಯಾಗಲು ಬಯಸುತ್ತೇನೆ

-ಜಾಕ್ ಮಾರ್ಟಿನ್

ಮೆಡಿಟರೇನಿಯನ್ ಸಮುದ್ರದಲ್ಲಿ ವಲಸಿಗರ ಹಡಗು ಮುಳುಗಿ 6 ಮಂದಿ ಸಾವು, 40 ಜನ ನಾಪತ್ತೆ

ಮಿಲನ್: ಟುನೀಶಿಯಾದಿಂದ ಹೊರಟಿದ್ದ ರಬ್ಬರ್ ಡಿಂಗಿ ಬೋಟ್ ಮಧ್ಯಮೆಡಿಟರೇನಿಯನ್ ಸಮುದ್ರದಲ್ಲಿ ಮುಳುಗಿದ್ದು, ಇಟಲಿಯ ಕರಾವಳಿ ಕಾವಲು ಸಿಬ್ಬಂದಿ ಆರು ಮೃತದೇಹಗಳನ್ನು ವಶಪಡಿಸಿಕೊಂಡಿದೆ ಇನ್ನು 40 ವಲಸಿಗರನ್ನು ಹುಡುಕುತ್ತಿದೆ ಎಂದು ಯುಎನ್ ನಿರಾಶ್ರಿತರ ಸಂಸ್ಥೆ ತಿಳಿಸಿದೆ. ನಾಲ್ವರು ಮಹಿಳೆಯರು ಸೇರಿದಂತೆ ಇನ್ನೂ 10 ಜನರನ್ನು ರಕ್ಷಿಸಿ ಇಟಲಿಯ ದಕ್ಷಿಣದ ಲ್ಯಾಂಪೆಡುಸಾ ದ್ವೀಪಕ್ಕೆ ತರಲಾಗಿದ್ದು. ಆರೋಗ್ಯವಾಗಿದ್ದಾರೆ ಮತ್ತು ಮಾನಸಿಕ ಆರೈಕೆಯನ್ನು ಪಡೆಯುತ್ತಿದ್ದಾರೆ ಎಂದು ರೆಡ್ ಕ್ರಾಸ್ ಹೇಳಿದೆ. ಯುರೋಪಿಯನ್ ಗಡಿ ಏಜೆನ್ಸಿ ಫ್ರಾಂಟೆಕ್ಸ್‌ನ ವಿಮಾನಗಳು, ಇಟಾಲಿಯನ್ ಕರಾವಳಿ ಕಾವಲು, ಇತರರು ಕಷ್ಟಕರವಾದ ಸಮುದ್ರ ಪರಿಸ್ಥಿತಿಗಳಿಂದಾಗಿ ಹುಡುಕಾಟದಲ್ಲಿ ಸಹಾಯ ಮಾಡು ತ್ತಿದ್ದಾರೆ ಎಂದು ಕರಾವಳಿ ಕಾವಲು ಪಡೆ ತಿಳಿಸಿದೆ. ಟ್ಯುನಿಷಿಯಾದ ಸ್ಫಾಕ್ಸ್ ಬಂದರಿನಿಂದ ಹೊರಟಾಗ ಅದರಲ್ಲಿ ಸುಮಾರು 56 ಮಂದಿ ಇದ್ದರು ಎಂದು ಬದುಕುಳಿದವರು ಹೇಳಿದ್ದಾರೆ.

ಸಮುದ್ರದ ಕೆಲವು ಗಂಟೆಗಳ ನಂತರ ದೋಣಿ ಉಬ್ಬಿ ಕೊಳ್ಳಲಾರಂಭಿಸಿತು ಎಮದು ತಿಳಿಸಿದ್ದಾರೆ. ಯು.ಎನ್ ಮಿಸ್ಸಿಂಗ್ ಮೈಗ್ರೆಂಟ್ ಪ್ರಾಜೆಕ್ಟ್ ಪ್ರಕಾರ 2014 ರಿಂದ 2024 ರವರೆಗಿನ ವಲಸಿಗರು ಅಪಾಯಕಾರಿ ಮಧ್ಯ ಮೆಡಿಟರೇನಿಯನ್‌ನಲ್ಲಿ ಸತ್ತ. ಕಾಣೆಯಾದವರ ಸಂಖ್ಯೆಯನ್ನು 24,506 ಕ್ಕಿಂತ ಹೆಚ್ಚಿದೆ, ಈ ವರ್ಷ ಇಲ್ಲಿಯವರೆಗೆ, 8,963 ವಲಸಿಗರು ಇಟಲಿಗೆ ಆಗಮಿಸಿದ್ದಾರೆ, ಆಂತರಿಕ ಸಚಿವಾಲಯದ ಅಂಕಿಅಂಶಗಳ ಪ್ರಕಾರ, ಕಳೆದ ವರ್ಷ ಇದೇ ಅವಧಿಗೆ ಹೋಲಿಸಿದರೆ 4 ಶೇಕಡಾ ಹೆಚ್ಚಳವಾಗಿದೆ. 2024 ರಲ್ಲಿ ಸಮುದ್ರದಲ್ಲಿ 1,695 ಜನರು ಸತ್ತಿದ್ದಾರೆ ಅಥವಾ ನಾಪತ್ತೆಯಾಗಿದ್ದಾರೆ ಒಂದು ವರ್ಷದ ಹಿಂದೆ 2,526 ಜನರು. ಈ ಸಂಖ್ಯೆಗಳ ಅರ್ಥವೇನು? ಕಳ್ಳಸಾಗಣೆದಾರರ ವ್ಯವಹಾರವನ್ನು ನಿಗ್ರಹಿಸಬೇಕಿದೆ . ಇಟಲಿ ಮತ್ತು ಯುರೋಪ್ ತಲುಪಲು ಪ್ರಯತ್ನಿಸುತ್ತಿರುವ ತಮ್ಮ ಜೀವವನ್ನು ಕಳೆದುಕೊಳ್ಳುವವರ ವಲಸಿಗರು ಸಂಖ್ಯೆಯನ್ನು ಕಡಿಮೆ ಮಾಡಬೇಕಿದೆ ಎಂದು ಇಟಲಿ ಅಧಿಕಾರಿಗಳು ಹೇಳಿದ್ದಾರೆ.

ರಸ್ತೆ ತೆರವಿಗೆ ಬ್ಯಾರಿಕೇಡ್ ತೆಗೆದುಹಾಕಿದ ಪೊಲೀಸರು; ರೈತರಿಂದ ಧರಣಿ

ಚಂಡೀಗಢ: ಪಂಜಾಬ್‌ನ ಶಂಭು ಗಡಿಯಿಂದ ಪ್ರತಿಭಟನಾ ನಿರತ ರೈತರನ್ನು ನಿನ್ನೆ ಹೊರಹಾಕಿದ ನಂತರ, ಪಂಜಾಬ್ ರೈತರು ದೆಹಲಿಗೆ ಹೋಗುವುದನ್ನು ತಡೆಯಲು ನಿರ್ಮಿಸಲಾದ ಸಿಮೆಂಟ್ ಬ್ಯಾರಿಕೇಡ್‌ಗಳನ್ನು ಹರಿಯಾಣ ಭದ್ರತಾ ಸಿಬ್ಬಂದಿ ತೆಗೆದುಹಾಕಲು ಆರಂಭಿಸಿದರು. ಒಂದು ವರ್ಷಕ್ಕೂ ಹೆಚ್ಚು ಕಾಲ ಮುಚ್ಚಿದ್ದ ಶಂಭು- ಅಂಬಾಲ ರಸ್ತೆಯನ್ನು ತೆರವುಗೊಳಿಸಲು, ಕಾಂಕ್ರೀಟ್ ಬ್ಲಾಕ್ ಗಳನ್ನು ತೆಗೆದುಹಾಕಲು ಜೆಸಿಬಿ ಮತ್ತು ಇತರ ಯಂತ್ರಗಳನ್ನು ನಿಯೋಜಿಸಲಾಗಿದೆ.

ದೆಹಲಿ ಚಲೋ ಕಾರ್ಯಕ್ರಮದ ಭಾಗವಾಗಿ ಪಂಜಾಬ್‌ನಿಂದ ರಾಜಧಾನಿಯ ಕಡೆಗೆ ಸಾಗಲು ರೈತರು ಮಾಡುವ ಎಲ್ಲಾ ಪ್ರಯತ್ನವನ್ನು ತಡೆಯಲು ಹರಿಯಾಣ ಭದ್ರತಾ ಅಧಿಕಾರಿಗಳು ಪಂಜಾಬ್‌ನೊಂದಿಗಿನ ರಾಜ್ಯ ಗಡಿಯನ್ನು ಸಿಮೆಂಟ್ ಬ್ಲಾಕ್‌ಗಳು, ಕಬ್ಬಿಣದ ಮೊಳೆಗಳು, ಮುಳ್ಳುತಂತಿಗಳನ್ನು ಹಾಕಿ ಬಲಪಡಿಸಿದ್ದರು. ಶಂಭು ಗಡಿಯ ಪಂಜಾಬ್ ಬದಿಯಲ್ಲಿರುವ ಉಳಿದ ತಾತ್ಕಾಲಿಕ ರಚನೆಗಳನ್ನು ಕೆಡವಲು ಪಂಜಾಬ್ ಪೊಲೀಸರು ಗುರುವಾರ ಕಾರ್ಯಾಚರಣೆಯನ್ನು ಪುನರಾರಂಭಿಸಿ ರಸ್ತೆಯನ್ನು ತೆರವುಗೊಳಿಸಿದರು.

ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಮತ್ತು ಕಿಸಾನ್ ಮಜ್ದೂರ್ ಮೋರ್ಚಾ ಪಂಜಾಬ್ ಪೊಲೀಸರ ದಮನವನ್ನು ವಿರೋಧಿಸಿ ಜಿಲ್ಲಾಧಿಕಾರಿ ಗಳ ಕಚೇರಿಗಳ ಹೊರಗೆ ಧರಣಿ ನಡೆಸುವುದಾಗಿ ಘೋಷಿಸಿವೆ.

ಶಂಭು ಮತ್ತು ಖಾನೌರಿ ಗಡಿ ಬಿಂದುಗಳಲ್ಲಿ ರೈತರ ಪ್ರತಿಭಟನೆಯನ್ನು ಮುನ್ನಡೆಸಿದ ಎರಡೂ ಸಂಸ್ಥೆಗಳು ಪ್ರತಿಭಟನಾಕಾರರನ್ನು ಹೊರಹಾಕಿದ್ದಕ್ಕಾಗಿ ಮತ್ತು ರೈತ ನಾಯಕರನ್ನು ಬಂಧಿಸಿದ್ದಕ್ಕಾಗಿ ಪಂಜಾಬ್‌ನ ಆಮ್ ಆದ್ಮಿ ಪಕ್ಷ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿವೆ.

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನೇತೃತ್ವದ ಕೇಂದ್ರ ನಿಯೋಗದೊಂದಿಗೆ ಸಭೆಯ ನಂತರ ಚಂಡೀಗಢದಲ್ಲಿ ಹಿಂತಿರುಗುತ್ತಿದ್ದ ಸಂದರ್ಭದಲ್ಲಿ ನಿನ್ನೆ ಮೊಹಾಲಿಯಲ್ಲಿ ಸರ್ವಾನ್ ಸಿಂಗ್ ಪಂಧೇರ್ ಮತ್ತು ಜಗಜಿತ್ ಸಿಂಗ್ ದಲ್ಲೆವಾಲ್ ಸೇರಿದಂತೆ ಹಲವಾರು ರೈತ ನಾಯಕರನ್ನು ಪಂಜಾಬ್ ಪೊಲೀಸರು ಬಂಧಿಸಿದರು.

ತಾತ್ಕಾಲಿಕ ರಚನೆಗಳನ್ನು ಕೆಡವಲು ಕಾರ್ಯಾಚರಣೆ

ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಮತ್ತು ಕಿಸಾನ್ ಮಜ್ದೂರ್ ಮೋರ್ಚಾ ನೇತೃತ್ವದ ಪ್ರತಿಭಟನಾ ನಿರತ ರೈತರು ಕಳೆದ ವರ್ಷ ಫೆಬ್ರವರಿ 13 ರಿಂದ ಪಂಜಾಬ್ ಮತ್ತು ಹರಿಯಾಣ ನಡುವಿನ ಶಂಭು (ಶಂಭು-ಅಂಬಾಲ) ಮತ್ತು ಖಾನೌರಿ (ಸಂಗ್ರೂರ್-ಜಿಂದ್) ಗಡಿ ಬಿಂದುಗಳಲ್ಲಿ ಮೊಕ್ಕಾಂ ಹೂಡಿದ್ದರು, ಆಗ ಅವರ ದೆಹಲಿಗೆ ಅವರ ಮೆರವಣಿಗೆಯನ್ನು ಭದ್ರತಾ ಪಡೆಗಳು ವಿಫಲಗೊಳಿಸಿದವು.

ದೇಶದ ಶ್ರೀಮಂತ ಶಾಸಕರ ಪೈಕಿ ಡಿಕೆಶಿ ಟಾಪ್ 2

ನವದೆಹಲಿ: ದೇಶದ ಶ್ರೀಮಂತ ಶಾಸಕರ ಪಟ್ಟಿಯನ್ನು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮಸ್ ಬಿಡುಗಡೆ ಮಾಡಿದ್ದು, ಟಾಪ್ 10 ಶಾಸಕರ ಪೈಕಿ ಕರ್ನಾಟಕದ ಡಿಸಿಎಂ ಡಿಕೆ ಶಿವಕುಮಾರ್ ಎರಡನೇ ಸ್ಥಾನದಲ್ಲಿದ್ದಾರೆ.

28 ರಾಜ್ಯ, 3 ಕೇಂದ್ರಾಡಳಿತ ಪ್ರದೇಶದಲ್ಲಿನ ಒಟ್ಟು 4,092 ಶಾಸಕರ ಆಸ್ತಿ ಅಧ್ಯಯನದ ಮಾಡಿ ಈ ವರದಿ ಬಿಡುಗಡೆ ಮಾಡಿದ್ದು, ಈ ಪೈಕಿ ಕರ್ನಾಟಕ ರಾಜ್ಯ ಮೊದಲ ಸ್ಥಾನದಲ್ಲಿದ್ದು, 223 ಶಾಸಕರ ಒಟ್ಟು ಆಸ್ತಿ 14,179 ಕೋಟಿ ರೂ.ನಷ್ಟಿದೆ. ಬಿಡುಗಡೆಯಾಗಿರುವ ವರದಿಯ ಪ್ರಕಾರ, ಮುಂಬೈನ ಘಾಸ್ಕೋಪರ್ ಕ್ಷೇತ್ರ ಪ್ರತಿನಿಧಿಸುವ ಬಿಜೆಪಿಯ ಪರಾಗ್ ಶಾ 3,383 ಕೋಟಿ ರೂ. ಆಸ್ತಿಯೊಂದಿಗೆ ಮೊದಲ ಸ್ಥಾನದಲ್ಲಿದ್ದರೆ, ಕೆಪಿಸಿಸಿ ಅಧ್ಯಕ್ಷ, ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ 1,413 ಕೋಟಿ ರೂ. ಆಸ್ತಿಯೊಂದಿಗೆ 2ನೇ ಸ್ಥಾನ ಪಡೆದಿದ್ದಾರೆ. ಕರ್ನಾಟಕದವರೇ ಆದ ಗೌರಿಬಿದನೂರಿನ ಪಕ್ಷೇತರ ಶಾಸಕ ಕೆ.ಹೆಚ್.ಪುಟ್ಟಸ್ವಾಮಿ ಗೌಡ 1,267 ಕೋಟಿ ಆಸ್ತಿಯೊಂದಿಗೆ 3ನೇ ಸ್ಥಾನದಲ್ಲಿದ್ದಾರೆ.

ಇನ್ನುಳಿದಂತೆ 4ನೇ ಸ್ಥಾನದಲ್ಲಿ ಗೋವಿಂದರಾಜನಗರ ಕ್ಷೇತ್ರದ ಶಾಸಕ ಪ್ರಿಯಾ ಕೃಷ್ಣ ಹಾಗೂ 10ನೇ ಸ್ಥಾನದಲ್ಲಿ ಹೆಬ್ಬಾಳ ಕ್ಷೇತ್ರದ ಬೈರತಿ ಸುರೇಶ್ ಕ್ರಮವಾಗಿ 1,156 ಕೋಟಿ ರೂ. ಆಸ್ತಿ, 648 ಕೋಟಿ ರೂ. ಆಸ್ತಿಯನ್ನು ಹೊಂದಿದ್ದಾರೆ.

ಕರ್ನಾಟಕದ ಎಲ್ಲಾ ಶಾಸಕರ ಆಸ್ತಿ ಒಟ್ಟು 14,179 ಕೋಟಿ ರೂ. ಎಂದು ವರದಿ ತಿಳಿಸಿದೆ.

ಇನ್ನೂ ವರದಿಯ ಪ್ರಕಾರ, ಅತೀ ಕಡಿಮೆ ಆಸ್ತಿ ಹೊಂದಿರುವ ಶಾಸಕ ಎಂದು ಪಶ್ಚಿಮ ಬಂಗಾಳದ ಇಂಡಸ್ ಕ್ಷೇತ್ರದ ಶಾಸಕ ನಿರ್ಮಲ್ ಕುಮಾರ್ ಧಾರಾ ಎಂದು ತಿಳಿಸಿದ್ದು, ಇವರ ಆಸ್ತಿ ಕೇವಲ 1,700 ರೂ. ಆಗಿದೆ.

ಬಿಜೆಪಿ ಮುಖಂಡ ಫಕೀರ್ ಮೊಹಮ್ಮದ್ ಖಾನ್ ಆತ್ಮಹತ್ಯೆ

ಶ್ರೀನಗರ: ಜಮ್ಮು, ಕಾಶ್ಮೀರ ಮಾಜಿ ಶಾಸಕ, ಬಿಜೆಪಿ ನಾಯಕ ಫಕೀರ್ ಮೊಹಮ್ಮದ್ ಖಾನ್ ಅವರು ಗುರುವಾರ ಶ್ರೀನಗರದ ತುಳಸಿ ಬಾಗ್‌ನಲ್ಲಿರುವ ಸರ್ಕಾರಿ ಕ್ವಾರ್ಟರ್‌ನಲ್ಲಿ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. 2024 ರ ಜಮ್ಮು, ಕಾಶ್ಮೀರ ವಿಧಾನಸಭಾ ಚುನಾವಣೆಯಲ್ಲಿ ಗುರೆಜ್‌ನಿಂದ ಬಿಜೆಪಿ ಟಿಕೆಟ್‌ನಲ್ಲಿ ಸ್ಪರ್ಧಿಸಿದ್ದ ಖಾನ್, ತಮ್ಮ ನಿವಾಸದಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ಅವರ ಈ ತೀವ್ರ ನಡೆಯ ಹಿಂದಿನ ಕಾರಣ ಇನ್ನೂ ತಿಳಿದುಬಂದಿಲ್ಲ. ಖಾನ್ 1996 ರಲ್ಲಿ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಗೆ ಪಕ್ಷೇತರ ಶಾಸಕರಾಗಿ ಆಯ್ಕೆಯಾಗಿದ್ದರು. ನಂತರ ಅವರು 2024 ರ ಚುನಾವಣೆಗೆ ಮುನ್ನ ಬಿಜೆಪಿ ಸೇರಿದರು ಮತ್ತು ಚುನಾವಣೆಯಲ್ಲಿ ಕೇಸರಿ ಪಕ್ಷದಿಂದ ಸ್ಪರ್ಧಿಸಿದ್ದರು. ಆದರೆ ಎನ್‌ಸಿಯ ನಜೀರ್ ಅಹ್ಮದ್ ಗುರೇಜಿ ವಿರುದ್ಧ ಸೋಲು ಅನುಭವಿಸಿದ್ದರು.

ಖಾನ್ ಸಾವಿಗೆ ತೀವ್ರ ದುಃಖ ವ್ಯಕ್ತಪಡಿಸಿದ ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಮಾಜಿ ಶಾಸಕ ಫಕೀರ್ ಮೊಹಮ್ಮದ್ ಖಾನ್ ಅವರ ನಿಧನದಿಂದ ತೀವ್ರ ದುಃಖಿತನಾಗಿದ್ದೇನೆ. ಅವರು ಜನಸಾಮಾನ್ಯರ ನಾಯಕರಾಗಿದ್ದರು. ಅವರ ಕುಟುಂಬಕ್ಕೆ ನನ್ನ ಹೃತ್ಪೂರ್ವಕ ಸಂತಾಪಗಳು. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಹೇಳಿದ್ದಾರೆ. ಖಾನ್ ಗೌರವಾರ್ಥವಾಗಿ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆ ಎರಡು ನಿಮಿಷಗಳ ಕಾಲ ಮೌನ ಆಚರಿಸಿತು.

ಪರಪುರುಷನಿಗಾಗಿ ಪತಿಯನ್ನೇ ಕೊಂದ ಸುಟ್ಟುಹಾಕಿದ ಪತ್ನಿ

ಜೈಪುರ: ತನ್ನ ಹಳೆಯ ಪ್ರಿಯಕನೊಂದಿಗೆ ಸೇರಿ ತನ್ನ ಪತಿಯನ್ನೇ ಕೊಲೆ ಮಾಡಿದ 42 ವರ್ಷದ ಮಹಿಳೆ, ಸಾಕ್ಷ್ಯ ನಾಶಪಡಿಸಲು ಮೃತದೇಹವನ್ನು ಸುಟ್ಟು ಹಾಕಿರುವ ಘಟನೆ ಜೈಪುರದಲ್ಲಿ ನಡೆದಿದೆ. ತರಕಾರಿ ವ್ಯಾಪಾರಿಯಾಗಿದ್ದ ಧನ್ನಲಾಲ್ ಸೈನಿ ಪತ್ನಿಯಿಂದಲೇ ಕೊಲೆಯಾದ ಪತಿ. ಸಂಗನೇರ್‌ನ ನಿವಾಸಿ ಗೋಪಾಲಿ ದೇವಿ ಮತ್ತು ಸವಾಯಿ ಮಧೋಪುರ್‌ದ ನಿವಾಸಿ

ಪ್ರಸ್ತುತ ಮುಹಾನಾದಲ್ಲಿ ವಾಸಿಸುತ್ತಿರುವ ಪ್ರಿಯಕರ ದೀನ್ ದಯಾಳ್ ಕುಶ್ವಾಹ(30) ಕೊಲೆ ಆರೋಪಿಗಳು. ಮಾರ್ಚ್ 16ರಂದು ರಿಂಗ್ ರಸ್ತೆಯ ಬಳಿ ಸುಟ್ಟ ಶವ ಪತ್ತೆಯಾದ ಬಳಿಕ ಪ್ರಕರಣದಲ್ಲಿ ಪೊಲೀಸರು ತನಿಖೆ ಕೈಗೊಂಡಿದ್ದರು. ಇದೀಗ ಆರೋಪಿಗಳನ್ನು ಬಂಧಿಸಲಾಗಿದೆ. ಗೋಪಾಲಿದೇವಿ ಪ್ರಿಯಕರ ದೀನದಯಾಳ್ ಕುಶ್ವಾಹನ ಸಹಕಾರ ಪಡೆದು ಈ ಕೃತ್ಯ ಎಸಗಿದ್ದಾಳೆ. ಧನ್ನಾ ಲ

ವಿದ್ಯಾಪತಿ ಚಿತ್ರದ ವಿಶೇಷ ಪಾತ್ರದಲ್ಲಿ ನಟ ಡಾಲಿ

ನಾಯಕಿ ಮಲೈಕಾ ವಸುಪಾಲ್

ವಿದ್ಯಾಪತಿ ಚಿತ್ರದಲ್ಲಿ ನಾಗಭೂಷಣ ಅವರ ಜೊತೆಗೆ ಉಪಾಧ್ಯಕ್ಷ ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಎಂಟ್ರಿಕೊಟ್ಟಿದ್ದ ಮಲೈಕಾ ವಸುಪಾಲ್ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಕಾಣಿಸಿಕೊಂಡಿದ್ದ ನಟ ನಾಗಭೂಷಣ ಇದೀಗ 'ವಿದ್ಯಾಪತಿ' ಮೂಲಕ ಪ್ರೇಕ್ಷಕರ ಎದುರಿಗೆ ಬರಲು ಸಜ್ಜಾಗಿದ್ದಾರೆ. ಚಿತ್ರವು ಏಪ್ರಿಲ್ 10ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಚಿತ್ರದ ಟ್ರೇಲರ್ ಬಿಡುಗಡೆಯಾಗಿದ್ದು, ಮತ್ತಷ್ಟು ನಿರೀಕ್ಷೆ ಹುಟ್ಟುಹಾಕಿದೆ. ಈ ಹಿಂದೆ 'ಇಕ್ಕಟ್' ಸಿನಿಮಾ ಮೂಲಕ ಭರವಸೆ ಹುಟ್ಟಿಸಿದ್ದ ಇಶಾಂ ಮತ್ತು ಹಸೀಂ ಖಾನ್ ವಿದ್ಯಾಪತಿ ಸಿನಿಮಾದ ಕಥೆ, ಚಿತ್ರಕಥೆ, ನಿರ್ದೇಶನ ಮತ್ತು ಸಂಕಲನದ ಜವಾಬ್ದಾರಿ ಹೊತ್ತುಕೊಂಡಿದ್ದಾರೆ. 'ವಿದ್ಯಾಪತಿ' ಚಿತ್ರದಲ್ಲಿ ನಾಗಭೂಷಣ ಅವರ ಜೊತೆಗೆ ಉಪಾಧ್ಯಕ್ಷ ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಎಂಟ್ರಿಕೊಟ್ಟಿದ್ದ ಮಲೈಕಾ ವಸುಪಾಲ್ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಡಾಲಿ ಧನಂಜಯ್ ಅವರು ತಮ್ಮ 'ಡಾಲಿ ಪಿಕ್ಚರ್ಸ್' ಬ್ಯಾನರ್ ಅಡಿಯಲ್ಲಿ ವಿದ್ಯಾಪತಿಯನ್ನು ನಿರ್ಮಿಸಿದ್ದು, ಇದು ಅವರ ನಿರ್ಮಾಣದ ನಾಲ್ಕನೇ ಚಿತ್ರವಾಗಿದೆ. ಟ್ರೇಲರ್ ಅನ್ನು ನಟ ಧ್ರುವ ಸರ್ಜಾ ಬಿಡುಗಡೆ ಮಾಡಿದ್ದು, ನಟಿ ವಿದ್ಯಾ (ಮಲೈಕಾ ವಸುಪಾಲ್) ಅವರ ಪತಿ ವಿದ್ಯಾಪತಿ ಪಾತ್ರದಲ್ಲಿ ನಟಿಸಿರುವ ನಾಗಭೂಷಣ್ ಅವರ ಕಾಮಿಡಿ ಸಖತ್ ವರ್ಕ್ ಆಗಿದೆ.

ಹೊಕ್ಕಳಿಗೆ 2.7 ಕೋಟಿ ಮೌಲ್ಯದ ಡೈಮಂಡ್ ರಿಂಗ್ ಧರಿಸಿದ ಪ್ರಿಯಾಂಕಾ

ಬಾಲಿವುಡ್ ಬೆಡಗಿ ಪ್ರಿಯಾಂಕಾ ಚೋಪ್ರಾ ಅವರು ಮಹೇಶ್ ಬಾಬು ನಟನೆಯ ಸಿನಿಮಾಗಾಗಿ ಭಾರತಕ್ಕೆ ಬಂದಿದ್ದಾರೆ. ಮುಂಬೈ ವಿಮಾನ ನಿಲ್ದಾಣದಲ್ಲಿ ಹೊಕ್ಕಳಿಗೆ ಧರಿಸಿದ 2.7 ಕೋಟಿ ರೂ. ಮೌಲ್ಯದ ಡೈಮಂಡ್ ರಿಂಗ್ ವಿಚಾರವಾಗಿ ಚರ್ಚೆಗೆ ಗ್ರಾಸವಾಗಿದ್ದಾರೆ. ಮುಂಬೈ ಏರ್‌ಪೋರ್ಟ್‌ನಿಂದ ಹೊರಬರುವಾಗ ಪ್ರಿಯಾಂಕಾ ಚೋಪ್ರಾ ಬ್ಲ್ಯಾಕ್ ಕೋ-ಆರ್ಡ್ ಸೆಟ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಅವರ ಸ್ಟೈಲೀಶ್ ಲುಕ್ ಫ್ಯಾನ್ಸ್ ಗಮನ ಸೆಳೆದಿದೆ. ಅದರಲ್ಲೂ ಪ್ರಿಯಾಂಕಾ ಹೊಕ್ಕಳಿಗೆ ಧರಿಸಿದ ಬೆಲ್ಲಿ ಬಟನ್ ಡೈಮಂಡ್ ಪಿನ್ ಇದರ ಬೆಲೆ ಕೇಳಿ ಗಾಬರಿಯಾಗಿದ್ದಾರೆ. ಇದರ ಬೆಲೆ ಬರೋಬ್ಬರಿ 2.7 ಕೋಟಿ ರೂ. ಮೌಲ್ಯದಾಗಿದೆ ಎಂದು ಕೇಳಿಯೇ ಅಭಿಮಾನಿಗಳು ದಂಗಾಗಿದ್ದಾರೆ.

ಇನ್ನೂ ರಾಜಮೌಳಿ ಮತ್ತು ಮಹೇಶ್ ಬಾಬು ಕಾಂಬಿನೇಷನ್ ಸಿನಿಮಾದಲ್ಲಿ ಲೀಡ್ ಹೀರೋಯಿನ್ ಆಗಿ ನಟಿಸುತ್ತಿದ್ದಾರೆ.

ಎಂದೂ ನಟಿಸಿರದ ವಿಭಿನ್ನ ಪಾತ್ರದಲ್ಲಿ ಪ್ರಿಯಾಂಕಾ ಕಾಣಿಸಿಕೊಳ್ತಿದ್ದಾರೆ. ಈಗಾಗಲೇ ಹೈದರಾಬಾದ್, ಒಡಿಶಾ, ವಿಶಾಖಪಟ್ಟಣಂ ಸೇರಿದಂತೆ ಹಲವೆಡೆ ಚಿತ್ರೀಕರಣದಲ್ಲಿ ನಟಿ ಭಾಗಿಯಾಗಿದ್ದಾರೆ. ಚಿತ್ರೀಕರಣ ಭರದಿಂದ ನಡೆಯುತ್ತಿದೆ. ಸಿನಿಮಾದ ಹೆಚ್ಚಿನ ಅಪ್‌ಡೇಟ್‌ಗಾಗಿ ಅಭಿಮಾನಿಗಳು ಕಾಯ್ತಿದ್ದಾರೆ.

ಬೆಲ್ಲಿಕೆಳಿ ಹೊಕ್ಕಳ್ನ್

ಸಿನಿ ವಾಹಿನಿ

ಕಲ್ಕಿ2898 ಎಡಿ ಸೀಕ್ವೆಲ್ ಬಿಗ್ ಅಪ್‌ಡೇಟ್

ಟಾಲಿವುಡ್ ನಟ ಪ್ರಭಾಸ್ ತೆಲುಗಿನ ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ 'ಕಲ್ಕಿ 2898 ಎಡಿ' ಸಿನಿಮಾದ ಬಗ್ಗೆ ಬಿಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಈ ವರ್ಷದ ಅಂತ್ಯದಲ್ಲಿ 'ಕಲ್ಕಿ ಪಾರ್ಟ್ 2' ಶುರು ಆಗುವ ಬಗ್ಗೆ ಬಿಗ್ ಅಪ್‌ಡೇಟ್ ಸಿಕ್ಕಿದೆ. ಈಗಾಗಲೇ ಪ್ರಭಾಸ್, ದೀಪಿಕಾ, ಬಿಗ್ ಬಿ ನಟನೆಯ 'ಕಲ್ಕಿ 2898 ಎಡಿ' ಸಿನಿಮಾ ಸಕ್ಸಸ್ ಕಂಡಿದೆ. ಇದರ ಸೀಕ್ವೆಲ್ ಯಾವಾಗ ಶುರುವಾಗಲಿದೆ ಎಂಬುದಕ್ಕೆ ಚಿತ್ರದ ನಿರ್ದೇಶಕ ನಾಗ್ ಅಶ್ವಿನ್ ಮಾಹಿತಿ ಹಂಚಿಕೊಂಡಿದ್ದಾರೆ. ಇದೇ ಡಿಸೆಂಬರ್‌ನಲ್ಲಿ 'ಕಲ್ಕಿ 2898 ಎಡಿ' ಸಿನಿಮಾ ಶೂಟಿಂಗ್ ಆರಂಭ ಆಗಲಿದೆ ಎಂದು ಅವರು ತಿಳಿಸಿದ್ದಾರೆ. ಪ್ರಭಾಸ್, ಅಮಿತಾಭ್, ಕಮಲ್ ಪಾತ್ರಗಳನ್ನು ಮತ್ತೆ ಕಣ್ತುಂಬಿಕೊಳ್ಳಲು ಅಭಿಮಾನಿಗಳು ಕಾಯ್ತಿದ್ದಾರೆ. ಕಳೆದ ವರ್ಷ ಜೂನ್‌ನಲ್ಲಿ 'ಕಲ್ಕಿ 2898 ಎಡಿ' ಸಿನಿಮಾ ರಿಲೀಸ್ ಆಗಿ ಸಕ್ಸಸ್ ಕಂಡಿತ್ತು. ಪ್ರಭಾಸ್, ಬಿಗ್ ಬಿ, ಕಮಲ್ ಹಾಸನ್, ದೀಪಿಕಾ ಕಾಂಬಿನೇಷನ್ ಅನ್ನು ಜನ ಮೆಚ್ಚಿಕೊಂಡಿದ್ದರು. ಈಗ ಮತ್ತೆ ಇದರ ಸೀಕ್ವೆಲ್‌ಗೆ ಸಿದ್ಧತೆ ನಡೆಯುತ್ತಿದೆ. ಈ ವಿಚಾರ ಕೇಳಿಯೇ ಪ್ರಭಾಸ್ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

ಪ್ರಭಾಸ್ ಫ್ಯಾನ್ಸ್‌ಗೆ ಗುಡ್ ನ್ಯೂಸ್

ಸಿಕಂದರ್ ಮಾ.30 ರಿಲೀಸ್

ಬಾಲಿವುಡ್ ನಟ ಸಲ್ಮಾನ್ ಖಾನ್ ಮತ್ತು ರಶ್ಮಿಕಾ ಮಂದಣ್ಣ ನಟನೆಯ 'ಸಿಕಂದರ್' ಚಿತ್ರದ ರಿಲೀಸ್‌ಗೆ ಡೇಟ್ ಫಿಕ್ಸ್ ಆಗಿದೆ. ಮಾ.30ರಂದು 'ಸಿಕಂದರ್' ಸಿನಿಮಾ ರಿಲೀಸ್ ಆಗಲಿದೆ. ಕೊಡಗಿನ ಕುವರಿ ರಶ್ಮಿಕಾ ಮಂದಣ್ಣ ಮತ್ತು ಸಲ್ಮಾನ್ ಮೊದಲ ಬಾರಿಗೆ ಜೋಡಿಯಾಗಿ ನಟಿಸಿರುವ ಸಿನಿಮಾ ಇದೇ ಮಾ.30ಕ್ಕೆ ಬೆಳ್ಳಿಪರದೆಗೆ ಅಪ್ಪಳಿಸಲಿದೆ. ಈಗಾಗಲೇ ಸಾಂಗ್ಸ್, ಟೀಸರ್ ಮೂಲಕ 'ಸಿಕಂದರ್' ಸಿನಿಮಾ ಸೋಶಿಯಲ್ ಮೀಡಿಯಾದಲ್ಲಿ ಹಲ್‌ಚಲ್ ಎಬ್ಬಿಸಿದೆ. ಹಾಗಾಗಿ ಸಿನಿಮಾ ಮೇಲಿನ ನಿರೀಕ್ಷೆ ದುಪ್ಪಟ್ಟಾಗಿದೆ.

ಅಂದಹಾಗೆ, ಸಲ್ಮಾನ್, ರಶ್ಮಿಕಾ ಮಂದಣ್ಣ, 'ಮಗಧೀರ' ನಟಿ ಕಾಜಲ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರವನ್ನು ಎ.ಆರ್ ಮುರುಗದಾಸ್ ನಿರ್ದೇಶನ ಮಾಡಿದ್ದಾರೆ. ಸಾಜಿದ್ ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ. ಇನ್ನೂ ಮೊದಲ ಬಾರಿಗೆ ಸಲ್ಮಾನ್ ಜೊತೆ ರಶ್ಮಿಕಾ ನಟಿಸಿರೋ ಕಾರಣ ಈ ಚಿತ್ರದ ಬಗ್ಗೆ ಅಭಿಮಾನಿಗಳಿಗೆ ಬೆಟ್ಟದಷ್ಟು ನಿರೀಕ್ಷೆಯಿದೆ. ಇತ್ತೀಚೆಗೆ ರಶ್ಮಿಕಾ ನಟಿಸಿದ ಬ್ಯಾಕ್ ಟು ಬ್ಯಾಕ್ 3 ಸಿನಿಮಾಗಳು ಸೂಪರ್ ಸಕ್ಸಸ್ ಕಂಡಿದೆ. ಇತ್ತ ಸಲ್ಮಾನ್ ಇತ್ತೀಚೆಗೆ ನಟಿಸಿರುವ ಸಿನಿಮಾಗಳು ಚಿತ್ರಮಂದಿರದಲ್ಲಿ ಮಕಾಡೆ ಮಲಗಿದೆ. ಹಾಗಾಗಿ ಸಿಕಂದರ್ ಚಿತ್ರ ಸಕ್ಸಸ್ ಕಾಣುತ್ತಾ ಎಂಬುದನ್ನು ಕಾದುನೋಡಬೇಕಿದೆ.



ಮೊದಲ ಬಾರಿಗೆ ಸಲ್ಮಾನ್ ಜೊತೆ ರಶ್ಮಿಕಾ

ಬಾಲಿವುಡ್‌ನಲ್ಲಿ ಬಂಪರ್ ಅವಕಾಶ

ಸ್ಟಾರ್ ಬ್ಯೂಟಿ ಕೀರ್ತಿ ಸುರೇಶ್‌ಗೆ ಮದುವೆಯಾದ್ಮೇಲೆಯೂ ಸಿನಿಮಾದಲ್ಲಿ ಆಕ್ಟೀವ್ ಆಗಿದ್ದಾರೆ. ಮದುವೆಯ ಬಳಿಕವೂ ಅವರಿಗೆ ಬೇಡಿಕೆ ಹೆಚ್ಚಾಗಿದೆ. ಮತ್ತೊಂದು ಬಾಲಿವುಡ್ ಸಿನಿಮಾಗೆ ಕೀರ್ತಿ ಆಯ್ಕೆಯಾಗಿದ್ದಾರೆ. 'ಬೇಬಿ ಜಾನ್' ಸಿನಿಮಾ ಮೂಲಕ ಬಾಲಿವುಡ್‌ಗೆ ಕೀರ್ತಿ ಪಾದಾರ್ಪಣೆ ಮಾಡಿದ್ದರು. ಮದುವೆ ಬಳಿಕ ಈ ಸಿನಿಮಾ ರಿಲೀಸ್ ಆಗಿ ಮಕಾಡೆ ಮಲಗಿತ್ತು. ಹೀಗಿದ್ದರೂ ಅವರಿಗಿರುವ ಬೇಡಿಕೆ ಕಮ್ಮಿಯಾಗಿಲ್ಲ. ಬಾಲಿವುಡ್‌ನ ಪ್ರತಿಷ್ಠಿತ ಸಂಸ್ಥೆಯೊಂದು ನಟಿಗೆ ಮಣೆ ಹಾಕಿದೆ. ರೊಮ್ಯಾಂಟಿಕ್ ಕಾಮಿಡಿ ಸಿನಿಮಾ ಮಾಡಲು ಕೀರ್ತಿ ಜೊತೆ ಮಾತುಕತೆ ನಡೆಸಿದ್ದಾರೆ ಎನ್ನಲಾದ ಸುದ್ದಿಯೊಂದು ಚರ್ಚೆಗೆ ಗ್ರಾಸವಾಗಿದೆ. ಈ ಸಿನಿಮಾದಲ್ಲಿ ವಿಭಿನ್ನ ಪಾತ್ರದಲ್ಲಿ ಅವರು ಕಾಣಿಸಿಕೊಳ್ಳಲಿದ್ದಾರೆ. ಅದಕ್ಕಾಗಿ ತಯಾರಿ ನಡೆಸುತ್ತಿದ್ದಾರೆ ಎನ್ನಲಾಗಿದೆ. ಈ ಸುದ್ದಿ ಬಗ್ಗೆ ಚಿತ್ರತಂಡದ ಕಡೆಯಿಂದ ಅಧಿಕೃತ ಮಾಹಿತಿ ಸಿಗುವವರೆಗೂ ಕಾದುನೋಡಬೇಕಿದೆ. ಕಳೆದ ವರ್ಷ ವರುಣ್ ಧವನ್‌ಗೆ ಜೋಡಿಯಾಗಿ 'ಬೇಬಿ ಜಾನ್' ಸಿನಿಮಾದಲ್ಲಿ ನಟಿಸಿದ್ದರು. ಈ ಚಿತ್ರಕ್ಕೆ ಜವಾನ್ ಡೈರೆಕ್ಟರ್ ಅಟ್ಲಿ ಆಕ್ಷನ್ ಕಟ್ ಹೇಳಿದ್ದರು.

ಬೌಲರ್‌ಗಳ ಬಹು ವರ್ಷಗಳ ಬೇಡಿಕೆಯನ್ನು ಈಡೇರಿಸಿದ ಬಿಸಿಸಿಐ

2025 ರ ಐಪಿಎಲ್ ಆರಂಭಕ್ಕೆ ಇನ್ನೇರಡು ದಿನಗಳು ಬಾಕಿ ಉಳಿದಿರುವಾಗ ಬೌಲರ್‌ಗಳು ಖುಷಿ ಪಡುವ ನಿಯಮವೊಂದನ್ನು ಬಿಸಿಸಿಐ ಬದಲಿಸುವ ಕೆಲಸ ಮಾಡಿದೆ. ಕೊರೊನಾ ಸಮಯದಲ್ಲಿ ತಂದಿದ್ದ ನಿಯಮವನ್ನು ರದ್ದುಗೊಳಿಸುವ ಮೂಲಕ ಬೌಲರ್‌ಗಳ ಪರ ಬ್ಯಾಟ್ ಬೀಸಿರುವ ಬಿಸಿಸಿಐ, ಇನ್ನು ಮುಂದೆ ಬೌಲರ್‌ಗಳು ಚೆಂಡಿನ ಮೇಲೆ ಸಲೈವ ಬಳಕೆಗೆ ಅನುಮತಿ ನೀಡಿದೆ.

ಮೇಲೆ ಹೇಳಿದಂತೆ 2020 ರಲ್ಲಿ ಕೊರೊನಾ ವೈರಸ್ ಸೋಂಕಿನ ಆರ್ಭಟ ಹೆಚ್ಚಿದ್ದ ಕಾರಣ ಬೌಲಿಂಗ್ ವೇಳೆ ಚೆಂಡಿನ ಮೇಲೆ ಎಂಜಲು ಹಚ್ಚುವುದನ್ನು ಐಸಿಸಿ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ನಿಷೇದಿಸಿತ್ತು.

ಆ ಬಳಿಕ ಈ ನಿಯಮವನ್ನು ಐಪಿಎಲ್‌ನಲ್ಲೂ ಜಾರಿಗೆ ತಂದಿದ್ದ ಬಿಸಿಸಿಐ, ಬೌಲರ್‌ಗಳು ಚೆಂಡಿನ ಮೇಲೆ ಉಗುಳು ಹಚ್ಚುವುದನ್ನು ರದ್ದುಗೊಳಿಸಿತ್ತು.

ವಾಸ್ತವವಾಗಿ ಬೌಲರ್‌ಗಳು ಚೆಂಡಿನ ಹೊಳಪನ್ನು ಹೆಚ್ಚಿಸುವ ಸಲುವಾಗಿ ತಾವು ಬೌಲಿಂಗ್ ಮಾಡುವ ವೇಳೆ ತಮ್ಮ ಎಂಜಲನ್ನು ಚೆಂಡಿನ ಮೇಲೆ ಲೇಪನ ಮಾಡುತ್ತಿದ್ದರು. ಎಂಜಲು ಮಾತ್ರವಲ್ಲದೆ ತಮ್ಮ ಬೆವರನ್ನು ಇದಕ್ಕೆ ಬಳಸುತ್ತಿದ್ದರು. ಆದರೆ ಕೊರೊನಾ ಸಮಯದಲ್ಲಿ ಎಂಜಲು ಬಳಸುವುದಕ್ಕೆ ನಿಷೇದ ಹೇರಿದ್ದ ಬಿಸಿಸಿಐ, ಬೆವರು ಬಳಸುವುದಕ್ಕ ಅನುಮತಿ ನೀಡಿತ್ತು.

ಬಿಸಿಸಿಐನ ಈ ನಿಷೇದದಿಂದಾಗಿ ಬೌಲರ್‌ಗಳು ಸಾಕಷ್ಟು ಕಷ್ಟಪಡಬೇಕಾಗಿತ್ತು. ಹೀಗಾಗಿ ಕೊರೊನಾ ಹಾವಳಿ ಕಡಿಮೆಯಾದ ಬಳಿಕ ಹಲವು ಬೌಲರ್‌ಗಳು ಈ ನಿಯಮವನ್ನು ತೆಗೆದು ಹಾಕುವಂತೆ ಬಿಸಿಸಿಐ ಬಳಿ ಬೇಡಿಕೆ ಇಟ್ಟಿದ್ದರು. ಇದೀಗ ಬೌಲರ್‌ಗಳ ಬಹು ದಿನಗಳ ಬೇಡಿಕೆಯನ್ನು ಈಡೇರಿಸಿರುವ ಬಿಸಿಸಿಐ, ಚೆಂಡಿನ ಮೇಲೆ ಎಂಜಲನ್ನು ಲೇಪನ ಮಾಡುವುದಕ್ಕೆ ಅನುಮತಿ ನೀಡಿದೆ.

ವಾಸ್ತವವಾಗಿ ಮುಂಬೈನ ಕೇಂದ್ರ ಕಛೇರಿಯಲ್ಲಿ ಬಿಸಿಸಿಐ, ಎಲ್ಲಾ ಐಪಿಎಲ್ ತಂಡಗಳ ನಾಯಕರ ಸಭೆ ಕರೆದಿದೆ. ಈ ಸಭೆಯಲ್ಲಿ ಮಂಡಳಿಯು ಎಲ್ಲಾ ನಾಯಕರಿಗೆ ಈ ನಿರ್ಧಾರದ ಬಗ್ಗೆ ತಿಳಿಸಿದೆ. ಇದರರ್ಥ ಮಾರ್ಚ್ 22 ರಂದು ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವಿನ ಪಂದ್ಯದಲ್ಲಿ ಬೌಲರ್‌ಗಳು ಚೆಂಡನ್ನು ಹೊಳಪು ಮಾಡಲು ಎಂಜಲು ಬಳಸುವುದನ್ನು ನಾವು ನೋಡಬಹುದಾಗಿದೆ. ಆದಾಗ್ಯೂ, ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಈ ನಿಷೇಧ ಹಾಗೆಯೇ ಮುಂದುವರೆಯಲಿದೆ. ಕೊರೊನಾ ಸಾಂಕ್ರಾಮಿಕ ರೋಗ ಮುಗಿದ ನಂತರ, ಐಸಿಸಿ ಇದನ್ನು ಶಾಶ್ವತವಾಗಿ ಜಾರಿಗೆ ತಂದಿತು. ಅಂತಹ ಪರಿಸ್ಥಿತಿಯಲ್ಲಿ, ಆಟಗಾರರು ತಮ್ಮ ಬೆವರನ್ನು ಬಳಸಿ ಚೆಂಡನ್ನು ಶೈನಿಂಗ್ ಮಾಡಬಹುದಾಗಿದೆ.

ಚೆಂಡಿನ ಮೇಲೆ ಉಗುಳು ಹಚ್ಚೋದು

ಈ ಸ್ಟಾರ್ ಆಟಗಾರರಿಗೆ ಇದೇ ಕೊನೆ ಐಪಿಎಲ್!

ಮಾರ್ಚ್ 22 ರಂದು ಶುರುವಾಗ್ತಿರೋ ಈ ಸಲದ ಐಪಿಎಲ್ ಕ್ರಿಕೆಟ್ ಸರಣಿ ಎಲ್ಲರ ನಿರೀಕ್ಷೆ ಹೆಚ್ಚಿಸಿದೆ. ಅದ್ರಲ್ಲೂ ಕೆಲವು ಪ್ರಮುಖ ಆಟಗಾರರಿಗೆ ಇದು ಕೊನೆಯ ಐಪಿಎಲ್ ಆಗಿರಬಹುದು ಅನ್ನೋ ಮಾತು ಕೇಳಿಬರ್ತಿದೆ.

ಈ ಸಲ ಚೆನ್ನೈ ತಂಡದ ನಾಯಕತ್ವ ವಹಿಸಿಕೊಂಡಿರೋ ರುತುರಾಜ್ ಗೈಕವಾಡ್ ಜೊತೆಗೆ ಮಹೇಂದ್ರ ಸಿಂಗ್ ಧೋನಿ ಕಾಣಿಸಿಕೊಳ್ಳೋದು ಅನುಮಾನ ಮೂಡಿತ್ತು. ಆದರೆ ಈ ಸೀಸನ್‌ನಲ್ಲಿ ಧೋನಿ ಅಬ್ಬರಿಸಲಿದ್ದಾರೆ. 229 ಪಂದ್ಯಗಳಲ್ಲಿ 5200 ಕ್ಕೂ ಹೆಚ್ಚು ರನ್‌ಗಳಿಸಿದ್ದಾರೆ. ಧೋನಿ ಐಪಿಎಲ್‌ನಲ್ಲಿ 39 ಸರಾಸರಿ ಮತ್ತು 138 ಸ್ಟ್ರೈಕ್ ರೇಟ್ ಹೊಂದಿದ್ದಾರೆ. ಇನ್ನೂ ಇದೇ ಅವರ ಕಟ್ಟಕಡೆಯ ಐಪಿಎಲ್ ಸೀಸನ್ ಅಂತ ಹೇಳಲಾಗ್ತಿದೆ.

ಕಳೆದ ಸಲ 9.75 ಕೋಟಿ ರೂಪಾಯಿಗೆ ಸಿಎಸ್‌ಕೆ ಖರೀದಿಸಿದ್ದ ಆಲ್‌ರೌಂಡರ್ ಆರ್ ಅಶ್ವಿನ್ ಕೂಡ ಈ ಸಲ ನಿವೃತ್ತಿ ಘೋಷಿಸುವ ಸಾಧ್ಯತೆ ಇದೆ. ಕಳೆದ ಋತುವಿನಲ್ಲಿ 14 ಪಂದ್ಯಗಳನ್ನಾಡಿ ಕೇವಲ 9 ವಿಕೆಟ್ ಪಡೆದಿದ್ದ 38 ವರ್ಷದ ಅಶ್ವಿನ್ ಈಗಾಗಲೇ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ.

ಇಂಗ್ಲೆಂಡ್ ಆಲ್‌ರೌಂಡರ್ ಮೊಯಿನ್ ಅಲಿ ಕೂಡ ಟಿ20 ಕ್ರಿಕೆಟ್‌ನಲ್ಲಿ ಸ್ಥಿರ ಪ್ರದರ್ಶನ ನೀಡ್ತಿಲ್ಲ. ಈ ಸಲ ಕೋಲ್ಕತ್ತಾ ಪರ ಆಡ್ತಿರೋ ಅವರು ಉತ್ತಮ ಪ್ರದರ್ಶನ ನೀಡದಿದ್ರೆ ಮುಂದಿನ ಐಪಿಎಲ್ ಹರಾಜಿನಲ್ಲಿ ಅವರನ್ನ ಯಾವ ತಂಡಗಳು ಖರೀದಿಸ್ಬಹುದು ಅನ್ನೋದು ಅನುಮಾನ.

ಕಳೆದ ಐಪಿಎಲ್‌ನಲ್ಲಿ ಕೇವಲ 52 ರನ್ ಗಳಿಸಿ ನಿರಾಸೆ ಮೂಡಿಸಿದ್ದ ಆಸ್ಟ್ರೇಲಿಯಾದ ಆಲ್‌ರೌಂಡರ್ ಗ್ಲೆನ್ ಮ್ಯಾಕ್ಸ್‌ವೆಲ್ ಕೂಡ ಈ ಸಲ ಉತ್ತಮ ಪ್ರದರ್ಶನ ನೀಡಬೇಕಾದ ಅನಿವಾರ್ಯತೆಯಲ್ಲಿದ್ದಾರೆ.

ಆರ್‌ಸಿಬಿ ತಂಡ ಅವರನ್ನು ರಿಟೈನ್ ಮಾಡಿಕೊಂಡಿರಲಿಲ್ಲ. 40 ವರ್ಷದ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಉಪನಾಯಕ ಫಾಫ್ ಡು ಪ್ಲೆಸಿಸ್ ಐಪಿಎಲ್‌ನಲ್ಲಿ ಈವರೆಗೆ 36 ಸರಾಸರಿ ಮತ್ತು 136 ಸ್ಟ್ರೈಕ್ ರೇಟ್ ನೊಂದಿಗೆ 4521 ರನ್ ಗಳಿಸಿದ್ದಾರೆ. ಈ ಸಲ ಅವರು ಉತ್ತಮ ಪ್ರದರ್ಶನ ನೀಡದಿದ್ರೆ ಮುಂದಿನ ಐಪಿಎಲ್‌ನಲ್ಲಿ ಆಡೋದು ಕಷ್ಟ ಅನ್ನೋ ಮಾತಿದೆ.

ಮುಂಬೈ ಇಂಡಿಯನ್ಸ್ ತಂಡವನ್ನ 5 ಬಾರಿ ಚಾಂಪಿಯನ್ ಮಾಡಿರೋ ನಾಯಕ ರೋಹಿತ್ ಶರ್ಮಾ ಕೂಡ ಈ ಸಲದ ಐಪಿಎಲ್ ನಂತರ ನಿವೃತ್ತಿ ಘೋಷಿಸ್ಬಹುದು ಅನ್ನೋ ಸುದ್ದಿ ಹರಿದಾಡ್ತಿದೆ. ಇನ್ನೂ ಚಾಂಪಿಯನ್ಸ್ ಟ್ರೋಫಿ ಗೆದ್ದಾಗಲೇ ರೋಹಿತ್ ನಿವೃತ್ತಿ ಬಗ್ಗೆ ಕ್ಲಾರಿಟಿ ಕೊಟ್ಟಿದ್ದಾರೆ.

ಕಳೆದ ಸೀಸನ್‌ನಲ್ಲಿ ಒಂದೇ ತಂಡದಲ್ಲಿ ಆಡಿದ್ದ ಕೆಲವು ಆಟಗಾರರು ಈ ಸಲ ಬೇರೆ ಬೇರೆ ತಂಡಗಳಿಗೆ ಹೋಗಿ ಸೇರಿದ್ದಾರೆ. ಆಟಗಾರರು ಮಾತ್ರವಲ್ಲದೆ, ತಂಡಗಳ ನಾಯಕತ್ವದಲ್ಲೂ ಕೂಡ ದೊಡ್ಡ ಬದಲಾವಣೆಗಳಾಗಿವೆ. ಹೊಸ ಸೀಸನ್‌ನಲ್ಲಿ ಹೊಸ ಮುಖಗಳು ನಾಯಕರಾಗಿ ಕಣಕ್ಕಿಳಿಯಲಿದ್ದಾರೆ.

ಐಪಿಎಲ್ 2025 ಮಾರ್ಚ್ 22 ರಿಂದ ಮೇ 25 ರವರೆಗೆ ನಡೆಯಲಿದ್ದು, ಒಟ್ಟು 10 ತಂಡಗಳು ಪ್ರಶಸ್ತಿಗಾಗಿ ಫೈಪೋಟಿ ನಡೆಸಲಿವೆ.

ರೋಹಿತ್ ಶರ್ಮಾ ಕೂಡ!?

ರಾಜಸ್ಥಾನ್ ತಂಡಕ್ಕೆ ರಿಯಾನ್ ಕ್ಯಾಪ್ಟನ್

ಐಪಿಎಲ್ ಸೀಸನ್-18ರ ಮೊದಲ ಮೂರು ಪಂದ್ಯಗಳಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವನ್ನು ರಿಯಾನ್ ಪರಾಗ್ ಮುನ್ನಡೆಸಲಿದ್ದಾರೆ. ತಂಡದ ನಾಯಕ ಸಂಜು ಸ್ಯಾಮ್ಸನ್ ಫಿಟ್‌ನೆಸ್ ಸಮಸ್ಯೆಯನ್ನು ಎದುರಿಸುತ್ತಿದ್ದು, ಹೀಗಾಗಿ ಸನ್‌ರೈಸರ್ಸ್ ಹೈದರಾಬಾದ್, ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧದ ಪಂದ್ಯಗಳಲ್ಲಿ ಆರ್ ಆರ್ ತಂಡ ರಿಯಾನ್ ಸಾರಥ್ಯದಲ್ಲಿ ಕಣಕ್ಕಿಳಿಯಲಿದೆ.

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ಆರಂಭಕ್ಕೆ